ಸಂಪುಟ : 13 Volume | ಸಂಚಿಕೆ : 256 Issue | ಪುಟಗಳು : 08 Pages | ಶುಕ್ರವಾರ 28 ನವೆಂಬರ 2025 | ₹6 | PRGINO. 120927(RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

ಬೆಳಗು

ಸತ್ಯದ ಜೊತೆ ಬದುಕುವವನು ಯಾರಿಗೂ ಹೆದರಬೇಕಾಗಿಲ್ಲ..
ಸಾಕ್ರೆಟಿಸ್.

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

2 ಎಲ್ಲರೂ ಒಂದೇ ಎಂಬ ಭಾವನೆ ಬೆಳೆಸಿಕೊಳ್ಳಬೇಕು
3 ನ.28 ರಂದು ನರ್ಸಿಂಗ್ ಸೀಟುಗಳ ಹಂಚಿಕೆ
4 ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ
8 ತಜ್ಞವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ

# ರೈತರ ಸಮಸ್ಯೆಗೆ ಸಿಎಂ ಪರಿಹಾರ

## ಮಾನ್ಸೂನ್ ಅತಿವೃಷ್ಟಿ ಬೆಳೆ ಹಾನಿ, ನೇಗಿಲ ಯೋಗಿ ಸಂಕಷ್ಟಕ್ಕೆ ಸರ್ಕಾರ ಸ್ಪಂದನೆ

### ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮೆ

ಎಸ್ಡಿಆರ್‌ಎಫ್ ಮಾನದಂಡಗಳ ಪ್ರಕಾರ 14.24 ಲಕ್ಷ ರೈತರಿಗೆ ಇನ್ಪುಟ್ ಸಬ್ಸಿಡಿಯಾಗಿ ಈಗಾಗಲೇ ರೂ. 1218.03 ಕೋಟಿ ವಿತರಿಸಲಾಗಿದೆ. ಇದರ ಜೊತೆಗೆ ರಾಜ್ಯ ನಿಧಿಯಿಂದ ರೂ. 1033.60 ಕೋಟಿಯನ್ನು ಟಾಪ್ ಅಪ್ ರೂಪದಲ್ಲಿ ಹೆಚ್ಚುವರಿಯಾಗಿ ನೀಡಲಾಗುತ್ತಿದೆ. ಒಟ್ಟಾರೆಯಾಗಿ ಪರಿಹಾರ ಪಾವತಿ ಪ್ರಕ್ರಿಯೆಯಲ್ಲಿರುವ ಪಾವತಿಗಳನ್ನು ಒಳಗೊಂಡಂತೆ ರೂ.2251.63 ಕೋಟಿ ಯನ್ನು ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮಾ ಆಗಲಿದೆ

### ಹಾನಿಗೊಳಗಾದ 14.58 ಲಕ್ಷ ಹೆಕ್ಟೇರ್ ಪ್ರದೇಶ

ಮುಂಗಾರು ಅವಧಿಯಲ್ಲಿ ದಾಖಲೆಯ 82.56 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿತ್ತು.

ಆದರೆ ಜೂನ್ನಿಂದ ಸೆಪ್ಟಂಬರ್ ಅವಧಿಯಲ್ಲಿ ಉಂಟಾದ ಅತಿವೃಷ್ಟಿಯಿಂದಾಗಿ 14.58 ಲಕ್ಷ ಹೆಕ್ಟೇರ್‌ಗಿಂತ ಹೆಚ್ಚಿನ ಪ್ರದೇಶದ ಬೆಳೆ ಹಾನಿ ಉಂಟಾಗಿದ್ದು, ಇದರಿಂದ ಅಂದಾಜು ರೂ.10,748 ಕೋಟಿ ಬೆಳೆ ಹಾನಿ ಅಂದಾಜಿಸಲಾಗಿದೆ.

### ಒಂಬತ್ತು ಜಿಲ್ಲೆಗಳಲ್ಲಿ ಹೆಚ್ಚಿನ ಬೆಳೆ ಹಾನಿ

ಮುಖ್ಯವಾಗಿ ತೊಗರಿ ಬೇಳೆ 5.36 ಲಕ್ಷ ಹೆಕ್ಟೇರ್, ಹೆಸರು ಕಾಳು 2.63 ಲಕ್ಷ ಹೆಕ್ಟೇರ್, ಹತ್ತಿ 2.68 ಲಕ್ಷ ಹೆಕ್ಟೇರ್ ಮತ್ತು ಮೆಕ್ಕೆಜೋಳ 1.21 ಲಕ್ಷ ಹೆಕ್ಟೇರ್ ಹಾನಿ ಉಂಟಾಗಿದೆ. 9 ಜಿಲ್ಲೆಗಳಲ್ಲಿ ಹೆಚ್ಚಿನ ಬೆಳೆ ಹಾನಿ ಉಂಟಾಗಿದೆ. ಮುಖ್ಯವಾಗಿ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಬೆಳೆಗಳು ಕೊಯ್ಲಿನ ಹಂತಕ್ಕೆ ಬಂದಾಗ ಭಾರೀ ಮಳೆಗೆ ಹೆಚ್ಚಿನ ಹಾನಿ ಸಂಭವಿಸಿದೆ.

### ಮೂರು ಜಿಲ್ಲೆಗಳಲ್ಲಿ ತೊಗರಿ, ಹತ್ತಿ ಬೆಳೆ ನಷ್ಟ

ಕೃಷ್ಣಾ ಮತ್ತು ಭೀಮಾ ಜಲಾನಯನ ಪ್ರದೇಶಗಳಲ್ಲಿ ನಿರಂತರ ಒಳಹರಿವು ಹೆಚ್ಚಳದಿಂದ ಕಲಬುರಗಿ, ಯಾದಗಿರಿ ಮತ್ತು ಬೀದರ ಜಿಲ್ಲೆಗಳಲ್ಲಿ ತೊಗರಿ ಮತ್ತು ಹತ್ತಿ ಬೆಳೆಗಳಿಗೆ ವ್ಯಾಪಕ ಹಾನಿ ಉಂಟಾಗಿದೆ. ಬೆಳೆ ಹಾನಿಯನ್ನು ನಿಖರವಾಗಿ ಖಚಿತಪಡಿಸಲು ಜಂಟಿ ಸಮೀಕ್ಷೆ ನಡೆಸಿ ಹಾನಿಯನ್ನು ಅಂದಾಜಿಸಲಾಗಿದೆ. ಎಲ್ಲಾ ದತ್ತಾಂಶಗಳನ್ನು ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲಾಗಿದ್ದು, ಭೂಮಿ ಮತ್ತು ಫ್ರೂಟ್ಸ್ ತಂತ್ರಾಂಶದಲ್ಲಿ ಸಂಯೋಜಿಸಲಾಗಿದೆ.

ಮಲ್ಲಮ್ಮ ನುಡಿ, ಬೆಂಗಳೂರು,

ಪ್ರಸ್ತುತ ವರ್ಷದ ಮಾನ್ಸೂನ್ ಅವಧಿಯಲ್ಲಿ ಭಾರೀ ಮಳೆ ಮತ್ತು ಪ್ರವಾಹದಿಂದ ಬೆಳೆಹಾನಿಗೊಳಗಾದ ರೈತರಿಗೆ ಸರ್ಕಾರದಿಂದ ಹೆಚ್ಚುವರಿ ಸಬ್ಸಿಡಿಗಾಗಿ ರೂ.1033.60 ಕೋಟಿ ವಿಶೇಷ ಪ್ಯಾಕೇಜ್ ಘೋಷಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಬೆಳೆ ಹಾನಿ ಸಂಭವಿಸಿದ 14.24 ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ಒಟ್ಟು ರೂ. 1033.60 ಕೋಟಿ ಹೆಚ್ಚುವರಿ ಪರಿಹಾರ ಒದಗಿಸುವ ಕಾರ್ಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಟನ್ ಒತ್ತುವ ಮೂಲಕ ಚಾಲನೆ ನೀಡಿದ್ದಾರೆ. ಇನ್ಪುಟ್ ಸಬ್ಸಿಡಿಗಳ ದರ: ರಾಜ್ಯ ಸರ್ಕಾರ ರೈತರ ಪರವಾಗಿದ್ದು, ಬೆಳೆ ಹಾನಿಗೊಳಗಾದ ರೈತರಿಗೆ ಹೆಚ್ಚಿನ ನೆರವು ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಇನ್ಪುಟ್ ಸಬ್ಸಿಡಿಗಳ ದರಗಳನ್ನು ಹೆಚ್ಚಿಸಿದೆ ಎಂದಿದ್ದಾರೆ.

31 ಸಾವಿರಕ್ಕೆ ಹೆಚ್ಚಳ: ಗರಿಷ್ಠ 2 ಹೆಕ್ಟೇರ್‌ಗೆ ಸೀಮಿತವಾಗಿ, ಮಳೆಯಾಶ್ರಿತ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ರೂ. 8500 ರಿಂದ ರೂ. 17 ಸಾವಿರ, ನೀರಾವರಿ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ರೂ.17 ಸಾವಿರದಿಂದ ರೂ.25,500 ಹಾಗೂ ಬಹುವಾರ್ಷಿಕ ಬೆಳೆಗಳಿಗೆ ಹೆಕ್ಟೇರ್ ಒಂದಕ್ಕೆ ರೂ.22,500 ರಿಂದ ರೂ.31 ಸಾವಿರಕ್ಕೆ ಹೆಚ್ಚಿಸಲಾಗಿದೆ ಎಂದು ವಿವರ ನೀಡಿದ್ದಾರೆ.

**ಒಂದೇ ದಿನ ರೈತರಿಗೆ ರೂ. 1033.60 ಕೋಟಿ ಇನ್ಪುಟ್ ಸಬ್ಸಿಡಿ ವಿತರಿಸಿದ ಸಿದ್ದು**



### 1,521.67 ಕೋಟಿ ಪರಿಹಾರಕ್ಕೆ ಮನವಿ

ಪ್ರಧಾನಮಂತ್ರಿಯವರನ್ನು ನವೆಂಬರ್ 17 ರಂದು ಭೇಟಿ ಮಾಡಿ, ಬೆಳೆ ಹಾನಿ ಇನ್ಪುಟ್ ಸಬ್ಸಿಡಿಗೆ ಪ್ರತಿಕ್ರಿಯೆ ಹಾಗೂ ಪರಿಹಾರ ಅಡಿಯಲ್ಲಿ ರೂ.614.90 ಕೋಟಿ ಹಾಗೂ ಹಾನಿಗೊಳಗಾದ ಮೂಲಸೌಕರ್ಯಗಳನ್ನು ಸರಿಪಡಿಸಲು ಆಓಂ (ಖಭಿಡಿಥಿ ಖಭಿಟಣಡಿಭಿಣಟ) ಅಡಿಯಲ್ಲಿ ರೂ. 1,521.67 ಕೋಟಿ ಪರಿಹಾರ ಒದಗಿಸಲು ಮನವಿ ಸಲ್ಲಿಸಲಾಗಿದೆ. ಬೆಳೆ ಹಾನಿ ಪರಿಶೀಲಿಸಲು ಕೇಂದ್ರ ಸರ್ಕಾರ ವಿಶೇಷ ತಂಡವನ್ನು ರಚಿಸಿದ್ದು, ಈ ತಂಡ ಶೀಘ್ರದಲ್ಲೇ ಕರ್ನಾಟಕಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಿದೆ.

## ಪರಿಹಾರ ಹಣ ನೇರವಾಗಿ ರೈತರಿಗೆ ಮುಟ್ಟಲಿ

### ಜಿಲ್ಲಾಡಳಿತ ನಿರ್ಲಕ್ಷ್ಯವಹಿಸಿದರೇ ಬ್ಯಾಂಕಿನ ಮುಂದೇ ಮುಷ್ಕರದ ಎಚ್ಚರ



ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ: ರಾಜ್ಯ ಸರ್ಕಾರ ರೈತರಿಗಾಗಿ ಬಿಡುಗಡೆ ಮಾಡಿರುವ ಬೆಳೆಹಾನಿ ಪರಿಹಾರದ ಹಣವು ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕುಗಳು ಸಾಲದ ಖಾತೆಗಳಿಗೆ ಹೊಂದಿಸಿಕೊಳ್ಳುವುದನ್ನು ಕೂಡಲೇ ನಿಲ್ಲಿಸುವಂತೆ ಜೆಡಿಎಸ್ ಶಾಸಕ ಶರಣಗೌಡ ಕಂದಕೂರ ಆಗ್ರಹಿಸಿದ್ದಾರೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿರುವ ಅವರು, ಈ ಕುರಿತು ಸಂಬಂಧಪಟ್ಟವರಿಗೆ ಕೂಡಲೇ ಕಟಕ್ ಸೂಚನೆ ನೀಡಬೇಕು. ನಿರ್ಲಕ್ಷ್ಯವಹಿಸಿದರೇ ರೈತರ ಜತೆ ನಾನೇ ಖುದ್ದಾಗಿ ಬ್ಯಾಂಕುಗಳ ಮುಂದೆ ಮುಷ್ಕರ ನಡೆಸುವುದಾಗಿ ಶಾಸಕರು ಮನವಿಯಲ್ಲಿ ಎಚ್ಚರಿಸಿದ್ದಾರೆ.

ಜಿಲ್ಲೆಯ 1,22,827 ರೈತರಿಗೆ ಮೊದಲ ಕಂತಿನಲ್ಲಿ 124. 01ಕೋಟಿ ರೂ. ಬೆಳೆಹಾನಿ ಪರಿಹಾರದ ಹಣ ನೇರವಾಗಿ ರೈತರ ಖಾತೆಗಳಿಗೆ ಜಮಾ ಮಾಡಲಾಗಿದ್ದು, ಮುಂದೆ ಇನ್ನೂ 2ನೇ ಕಂತಿನಲ್ಲಿ 99 ಕೋಟಿ ರೂ. ಬಿಡುಗಡೆಯಾಗಲಿದೆ. ಆದರೇ ಹೀಗೆ ಕಷ್ಟದಲ್ಲಿರುವ ರೈತರಿಗೆ ನೆರವಾಗಲು ಸರ್ಕಾರ ಪರಿಹಾರ ನೀಡಿದರೇ ಅದನ್ನು ಸಾಲದ ಬಾಬತ್ತಿಗೆ ಜಮಾ ಮಾಡಿಕೊಳ್ಳುತ್ತಿರುವ ಬ್ಯಾಂಕಿನವರ ಕಾರ್ಯವೈಖರಿ ಹೇಗಿದೆ ಎಂದರೇ ನೇರವಾಗಿ ರೈತರು ಆತ್ಮಹತ್ಯೆ ದಾರಿ ತುಳಿಯಲು ಪ್ರೇರಣೆ ನೀಡಿದಂತಿದೆ ಎಂದು ಶಾಸಕರು ಕಿಡಿ ಕಾರಿ ಕಳವಳ ವ್ಯಕ್ತಪಡಿಸಿದ್ದಾರೆ.

ಹೀಗೇ ರೈತರೇನಾದರೂ ಆತ್ಮಹತ್ಯೆ ಮಾಡಿಕೊಂಡರೇ ನೇರವಾಗಿ ಬ್ಯಾಂಕಿನವರೇ ಹೊಣೆಯಾಗುತ್ತಾರೆ. ಕಾರಣ ಕೂಡಲೇ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಬ್ಯಾಂಕುಗಳ ವ್ಯವಸ್ಥಾಪಕರಿಗೆ ಆದೇಶ ನೀಡಿ ಆ ಪ್ರವೃತ್ತಿ ನಿಲ್ಲಿಸಬೇಕು ಮತ್ತು ಕಷ್ಟದ ಈ ಸಮಯದಲ್ಲಿ ಸ್ವಲ್ಪ ಸಹಾಯವಾಗಲಿ ಎಂದು ಸರ್ಕಾರ ಪರಿಹಾರ ನೀಡಿದರೇ ಅದನ್ನು ಮುಗುಮ್ಮಾಗಿ ಸಾಲದ ಖಾತೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳಲು ಮುಂದಾಗಿರುವ ಬ್ಯಾಂಕುಗಳ ಮೇಲೆ ಸೂಕ್ತ ಕಾನೂನಿನ ಕ್ರಮ ಜರುಗಿಸಬೇಕೆಂದು ಶಾಸಕ ಕಂದಕೂರ ಆಗ್ರಹಿಸಿದ್ದಾರೆ.

## ಮಟಕಾ ನಂಬರ್

### ಬರೆದುಕೊಳ್ಳುತ್ತಿದ್ದ ವ್ಯಕ್ತಿ ಬಂಧನ

ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ:

ಕಲಬುರಗಿ,ನ.27-ನಗರದ ಕೇಂದ್ರ ಬಸ್ ನಿಲ್ದಾಣದ ಎಐಸಿ ಆಫೀಸ್ ಹತ್ತಿರದ ಸಾರ್ವಜನಿಕ ರಸ್ತೆಯಲ್ಲಿ ವ್ಯಕ್ತಿಯೊಬ್ಬ ಮಟಕಾ ನಂರ್ ಬರೆದುಕೊಳ್ಳುತ್ತಿದ್ದಾನೆ ಎಂಬ ಮಾಹಿತಿ ಮೇಲೆ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಅವರ ನಿರ್ದೇಶನದಂತೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್, ಸಿಸಿಬಿ ಘಟಕದ ಸಹಾಯಕ ಪೊಲೀಸ್ ಆಯುಕ್ತ ಜೇಮ್ಸ್ ಮಿನೇಜಸ್ ಅವರ ಮಾರ್ಗದರ್ಶನದಲ್ಲಿ ಸಿಸಿಬಿ ಘಟಕದ ಪಿಐ ಅರುಣಕುಮಾರ ಅವರ ನೇತೃತ್ವದಲ್ಲಿ

2ನೇ ಪುಟನೋಡಿ

### ಗ್ಯಾಸ್ ರೀಫಿಲ್ಲಿಂಗ್ ಅಡ್ಡೆ ಮೇಲೆ ದಾಳಿ

ಕಲಬುರಗಿ,ನ.27-ನಗರದ ಡಂಕಾ ಕ್ರಾಸ್‌ದಿಂದ ಗಣೇಶ್ ಮಂದಿರಕ್ಕೆ ಹೋಗುವ ರಸ್ತೆಯಲ್ಲಿ ಗೃಹ ಬಳಕೆಗೆ ಗ್ಯಾಸ್ ಸಿಲಿಂಡಗಳನ್ನು ಅಕ್ರಮವಾಗಿ ಸಂಗ್ರಹ ಮಾಡಿ ಆಟೋರಿಕ್ಷಾಗಳಿಗೆ ತುಂಬಲಾಗುತ್ತಿದೆ ಎಂಬ ಮಾಹಿತಿ ಮೇಲೆ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಆಹಾರ ನಿರೀಕ್ಷಕ ಯಲ್ಲಾಲಿಂಗ ಕಡಕೋಳಕರ್ ಅವರು ಸಿಸಿಬಿ ಘಟಕದ ಪಿಐ ಅರುಣಕುಮಾರ, ಸಿಬ್ಬಂದಿಗಳಾದ ಮೃತ್ಯುಂಜಯ, ಅಶೋಕ ಕಟಕೆ, ಯಲ್ಲಪ್ಪ, ಶಿವಕುಮಾರ, ನಾಗರಾಜ ಮತ್ತು ಸುನೀಲಕುಮಾರ ಅವರೊಂದಿಗೆ ದಾಳಿ ನಡೆಸಿದ್ದಾರೆ. ಆಳಂದ ಕಾಲೋನಿಯ ಪರಶುರಾಮ ಕೋಟನೂರ (23) ಎಂಬಾತನನ್ನು

2ನೇ ಪುಟನೋಡಿ

## ಪೌರಾಯುಕ್ತರ ಅಮಾನತಿಗೆ ಒತ್ತಾಯ : ಬಿಎಸ್ಪಿ



ಮಲ್ಲಮ್ಮ ನುಡಿ ವಾರ್ತೆ, ಬಸವಕಲ್ಯಾಣ :

ಇತರೆ ಯೋಜನೆಗಳ ಅನುದಾನ ದುರ್ಬಳಕೆ ಮಾಡಿರುವ ನಗರಸಭೆಯ ಪೌರಾಯುಕ್ತರಾದ ರಾಜು ಡಿ. ಬಣಕಾರ ಅವರ ಅವ್ಯವಹಾರದ ಬಗ್ಗೆ ತನಿಖೆ ಕೈಗೊಂಡು ಅಮಾನತುಗೊಳಿಸಬೇಕು ಎಂದು ಆಗ್ರಹಿಸಿ ಮಂಗಳವಾರ ಇಲ್ಲಿನ ನಗರಸಭೆಯ ಪೌರಾಯುಕ್ತರ ಕಚೇರಿ ಎದುರು ಗಡೆ ತಾಲೂಕು ಬಹುಜನ ಸಮಾಜ ಪಕ್ಷದ ಘಟಕದಿಂದ ಸಾಂಕೇತಿಕ ಧರಣಿ ನಡೆಸಲಾಯಿತು. ಬರೆದ ಮನವಿ ಪತ್ರವನ್ನು ಸ್ಥಳಕ್ಕೆ ಭೇಟಿ ನೀಡಿದ ಗ್ರೇಡ್ - 2 ತಹಶೀಲ್ದಾರಾದ ರಮೇಶ ಬಾಬು ಅವರಿಗೆ ಮನವಿ ಸಲ್ಲಿಸಿದರು. ತ್ರಿಪುರಾಂತದ ಜಮೀನಿನಲ್ಲಿ ಅಕ್ರಮವಾಗಿ ಖಾತೆ ನೋಂದಣಿ ಮಾಡಿದ್ದು ಕಂಡುಬಂದಿದೆ. ಎಸ್.ಸಿ.ಪಿ. ಟಿ. ಎಸ್. ಪಿ. ಅನುದಾನವನ್ನು ದುರುಪಯೋಗಪಡಿಸಿ ಮಾಡಿಕೊಂಡಿರುತ್ತಾರೆ. ಕೂಡಲೇ ತನಿಖೆ ಮಾಡಬೇಕು. ನಗರಗಳಲ್ಲಿ ಕೆಲವು ಬಡಾವಣೆಗಳಲ್ಲಿ ರಾತ್ರಿ ವೇಳೆ ವಿದ್ಯುತ್

2ನೇ ಪುಟನೋಡಿ

## ಕುರ್ಚಿಯ ಕಾದಾಟ, ಶೀಘ್ರ ಅಂತ್ಯದಾಟ



ಮಲ್ಲಮ್ಮ ನುಡಿ, ಬೆಂಗಳೂರು,

ರಾಜ್ಯ ಕಾಂಗ್ರೆಸ್ ನಲ್ಲಿನ ಸಿಎಂ ಕುರ್ಚಿ ಕಲಹ ಮತ್ತೊಂದು ತಿರುವು ಪಡೆದಿದೆ. ಸಿದ್ದರಾಮಯ್ಯ ಬಣ ಕೂಡಾ ಯಾವುದೇ ಕಾರಣಕ್ಕೂ ಅವರನ್ನು ಬದಲಾವಣೆ ಮಾಡಬಾರದು ಎಂದು ಹೈಕಮಾಂಡ್ ಮೇಲೆ ಒತ್ತಡ ಹೇರುವ ತಂತ್ರ ಅನುಸರಿಸಲು ಸಿದ್ಧವಾಗಿದೆ. ಕಾಂಗ್ರೆಸ್‌ನಲ್ಲಿನ ಗೊಂದಲಕ್ಕೆ ತೆರೆ ಎಳೆಯುವಂತೆ ಹೈಕಮಾಂಡ್ ಗೆ ಹೇಳಿದ್ದ ಸಿದ್ದರಾಮಯ್ಯ, 'ಕಾದು ನೋಡುವ' ಮನಸ್ಥಿತಿಯಲ್ಲಿದ್ದಾರೆ ಎನ್ನಲಾಗಿದೆ.

ಹೈಕಮಾಂಡ್ ಪ್ರೀತಿ: ಟ್ರಬಲ್ ಶೂಟರ್ ಡಿಕೆ ಶಿವಕುಮಾರ್‌ಗೆ ಒಂದು ವೇಳೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ, ಹಿರಿಯ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಸಿಎಂ ಗಾದಿಯಲ್ಲಿ ಕೂರಿಸಲು ಒಲವು ತೋರಿದ್ರೆ, ಸಿದ್ದರಾಮಯ್ಯ ಬೆಂಬಲಿಗರು ಸಿಡಿದೇಳಲು ಸಜ್ಜಾಗುತ್ತಿದ್ದಾರೆ. ಬೇರೆಯವರಿಗೆ ಸಿಎಂ ಪಟ್ಟ ಕಟ್ಟಲು ಪಕ್ಷ ಹೇಳಿದ್ರೆ, ಪರ್ಯಾಯ ಹೆಸರು ನೀಡಲಾಗುವುದು ಎಂದು ಮೂಲಗಳು ಹೇಳಿವೆ.

ಪರ್ಯಾಯ ಧುರೀಣ ಯಾರು?: ಇದು 2023 ವಿಧಾನಸಭಾ ಚುನಾವಣೆಯಲ್ಲಿ ಜನಾದೇಶ

2ನೇ ಪುಟನೋಡಿ

### ಖರ್ಗೆ-ರಾಹುಲ್ ಸಭೆ

ಜಾರಕಿಹೊಳಿ ಕೂಡ ಡಿಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿದ್ದಾರೆ ಆದರೆ ಎರಡೂ ಕಡೆಯವರು ಸಭೆಯ ವಿವರಗಳನ್ನು ಬಹಿರಂಗಪಡಿಸಿಲ್ಲ. ಈ ಸಮಸ್ಯೆಯನ್ನು ಪರಿಹರಿಸಲು ಖರ್ಗೆ ಮತ್ತು ಗಾಂಧಿ ಕುಟುಂಬ ಇಂದು ಅಥವಾ ನಾಳೆ ಸಭೆ ಸೇರುವ ನಿರೀಕ್ಷೆಯಿದೆ. ಸೋನಿಯಾ, ರಾಹುಲ್ ಮತ್ತು ನಾನು ಅದನ್ನು ಸರಿಪಡಿಸುತ್ತೇವೆ. ರಾಹುಲ್ ಗಾಂಧಿ ಭೇಟಿಯ ನಂತರ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಅವರನ್ನು ದೆಹಲಿಗೆ ಕರೆಯಲಾಗುವುದು ಎಂದು ಖರ್ಗೆ ತಿಳಿಸಿದ್ದಾರೆ.

### ಶ್ರೀಗಳಿಂದ ಸಿದ್ದು, ಡಿಕೆಶಿ ಪರ ವಿರೋಧ ಬ್ಯಾಟ್

ರಾಜ್ಯದಲ್ಲಿ ಸಿಎಂ ಬದಲಾವಣೆ ಕುರಿತು ತೀವ್ರವಾದ ಚರ್ಚೆ ನಡೆಯುತ್ತಿರುವಂತೆಯೇ ಮಠಾಧೀಶರು ಇದೀಗ ಅಖಾಡ ಪ್ರವೇಶಿಸಿದ್ದಾರೆ. ಡಿಕೆ ಶಿವಕುಮಾರ್ ಪರ ಒಕ್ಕಲಿಗ ಸಮುದಾಯದ ಆದಿಚುಂಚನಗಿರಿ ಮಠದ ನಿರ್ಮಲಾನಂದ ಸ್ವಾಮೀಜಿ ಬ್ಯಾಟಿಂಗ್ ಮಾಡುತ್ತಿದ್ದಂತೆಯೇ ಇದೀಗ ಕಾಗಿನೆಲೆ ಕನಕ ಗುರುಪೀಠದ ನಿರಂಜನಾನಂದಪುರಿ ಸ್ವಾಮೀಜಿ ಬೆಂಬಲ ಘೋಷಿಸಿದ್ದಾರೆ. ನಿರ್ಮಲಾನಂದ ಸ್ವಾಮೀಜಿ ಹೇಳಿಕೆ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ನಿರಂಜನಾನಂದಪುರಿ ಸ್ವಾಮೀಜಿ, ಮಠಾಧೀಶರು ಹೇಳಿದ ತಕ್ಷಣ, ಅವರನ್ನು ಹೇಳಿದವರನ್ನು ಮುಖ್ಯಮಂತ್ರಿ ಮಾಡಲು ಸಂವಿಧಾನದಲ್ಲಿ ಅವಕಾಶ ಇದೆಯಾ ಎಂದು ಪ್ರಶ್ನಿಸಿದ್ದಾರೆ.

## ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿಗಳಿಗೆ ಸುವಿಧ ವಿಶ್ರಾಂತಿ ಕೊಠಡಿ ವ್ಯವಸ್ಥೆ ಮಾಡಿ: ಪಿ. ರಘು

ಮಲ್ಲಮ್ಮ ನುಡಿ, ಬೆಂಗಳೂರು,



ಕರ್ನಾಟಕ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರಾದ ಪಿ. ರಘು ರವರು ಇಂದು ಯಲಹಂಕದ ಎನ್.ಇ.ಎಸ್ ಬಳಿ ಇರುವ ಡಾ: ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಬೆಂಗಳೂರು ಉತ್ತರ ನಗರಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು, ಲೋಡರ್ಸ್, ಕ್ಲೀನರ್ಸ್, ಆಟೋಟಿಪ್ಪರ್ ಚಾಲಕರು, ಇತರೆ ಸ್ವಚ್ಛತಾ ಸಿಬ್ಬಂದಿಗಳೊಂದಿಗೆ ಕುಂದುಕೊರತೆ ಬಗ್ಗೆ ಸಂವಾದ ನಡೆಸುವ ಸಲುವಾಗಿ ಆಯೋಜಿಸಲಾಗಿದ್ದ **ನೇರ ಸಂವಾದ ಕಾರ್ಯಕ್ರಮ'**ದಲ್ಲಿ ಮಾತನಾಡಿದ ಅವರು ನಗರದ ಸ್ವಚ್ಛತೆಗಾಗಿ ಶ್ರಮಿಸುತ್ತಿರುವ ಪೌರಕಾರ್ಮಿಕರು ಹಾಗೂ ಎಲ್ಲಾ ಸ್ವಚ್ಛತಾ ಸಿಬ್ಬಂದಿಗಳ ಉಪಯೋಗಕ್ಕಾಗಿ ಸುವಿಧ ವಿಶ್ರಾಂತಿ ಕೊಠಡಿಗಳಿಲ್ಲದ ಕಡೆ ಎಲ್ಲಾ ಮಸ್ಟರಿಂಗ್ ಪಾಯಿಂಟ್‌ಗಳಲ್ಲಿ ಕೊಠಡಿ ನಿರ್ಮಿಸಲು ಕ್ರಮ ಕೈಗೊಳ್ಳಲು ಸೂಚಿಸಿದರು.

ಬೆಂಗಳೂರು ಉತ್ತರ ನಗರಪಾಲಿಕೆ ವ್ಯಾಪ್ತಿಯ 7 ವಿಧಾನಸಭಾಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 300 ಜನ ಪೌರಕಾರ್ಮಿಕರು, ಲೋಡರ್ಸ್, ಕ್ಲೀನರ್ಸ್, ಆಟೋ ಟಿಪ್ಪರ್‌ಗಳ ಚಾಲಕರು ಈ ನೇರ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಪೌರಕಾರ್ಮಿಕರು ಮತ್ತು ಸ್ವಚ್ಛತಾ ಸಿಬ್ಬಂದಿಗಳು ಅಧ್ಯಕ್ಷರೊಂದಿಗೆ

2ನೇ ಪುಟನೋಡಿ

## ಬಂಗಾಳಕೊಲ್ಲಿಗೆ ದಿತ್ವಾ ಚಂಡಮಾರುತದ ಭೀತಿ; ತಮಿಳುನಾಡು, ಆಂಧ್ರದ ಕರಾವಳಿ ಜಿಲ್ಲೆಗಳಲ್ಲಿ ಕಟ್ಟೆಚ್ಚರ

# ಒಂದನೇ ಪುಟದಿಂದ

## ಅಮಾನತಿಗೆ ಒತ್ತಾಯ : ಬಿಎಸ್ಪಿ

ದೀಪಗಳು ಕೆಟ್ಟು ಹೋಗಿವೆ ಸಾರ್ವಜನಿಕರಿಗೆ ಓಡಾಡುವುದು ಬಹಳಷ್ಟು ತೊಂದರೆ ಅನುಭವಿಸುವಂತಾಗಿದೆ. ಅಲ್ಲದೆ ಚರಂಡಿ. ಸಿ. ಸಿ. ರಸ್ತೆ ಹದಗೆಟ್ಟು ಹೋಗಿದೆ ಎಂದರು. ಸುಮಾರು ತಿಂಗಳು ಕಳೆದರೂ ಯಾವುದೇ ಕ್ರಮ ಕೈಗೊಂಡಿಲ್ಲ ಕೂಡಲೇ ಕಾಮಗಾರಿಗಳನ್ನು ಸರಿಪಡಿಸ ಬೇಕು ಎಂದು ಮನವಿ ಮಾಡಿದರು ಯಾವುದೇ ಕ್ರಮ ಕೈಗೊಂಡಿಲ್ಲ ಆದ್ದರಿಂದ ಶೀಘ್ರದಲ್ಲಿ ನಗರಸಭೆಯ ಪೌರಾಯುಕ್ತರನ್ನು ಅಮಾನತುಗೋಳಿಸಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಬಿ. ಎಸ್. ಪಿ. ತಾಲ್ಲೂಕು ಅಧ್ಯಕ್ಷರಾದ ಶಂಕರ್ ಫುಲೆ ನೇತೃತ್ವದಲ್ಲಿ ನಡೆದ ಧರಣಿಯಲ್ಲಿ ರಾಜ್ಯ ಕಾರ್ಯದರ್ಶಿಗಳಾದ ಅಶೋಕ ಮಂಠಾಳಕರ್. ಜ್ಞಾನೇಶ್ವರ್ ಸಿಂಗಾರೆ. ಜಿಲ್ಲಾ ಅಧ್ಯಕ್ಷರಾದ ಕಪಿಲ್ ಗೋಡಬೋಲೆ. ಉಪಾಧ್ಯಕ್ಷರಾದ ಸಚಿನ್ ಗಿರಿ. ತಾಲ್ಲೂಕ ಉಪಾಧ್ಯಕ್ಷರಾದ ರಮೇಶ ರಾಠೋಡ. ಸಚಿನ ಕಾಂಬಳೆ. ತಾಲ್ಲೂಕು ಸಂಯೋಜಕ ಮಕುಬಲ್ ಸಾಬ. ಪ್ರಧಾನ ಕಾರ್ಯದರ್ಶಿ ರವಿ ಉದಾತ. ಮಹಾದೇವ ಗಾಯಕವಾಡ. ಚಂದ್ರಶೀಲ ಗಾಯಕವಾಡ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕೊಠಡಿ ವ್ಯವಸ್ಥೆ ಮಾಡಿ: ಪಿ. ರಘು

ಮೂಲಭೂತ ಸೌಕರ್ಯಗಳ ಹಾಗೂ ಕುಂದುಕೊರತೆಗಳ ಬಗ್ಗೆ ಹೇಳಿಕೊಂಡರು.

**ಅಧ್ಯಕ್ಷರಿಂದ ಆಯುಕ್ತರ ಶ್ಲಾಘನೆ:**

ಉತ್ತರ ನಗರ ಪಾಲಿಕೆ ಆಯುಕ್ತರವರು ಹಿಂದಿನ ಹಲವು ಇಲಾಖೆಗಳಲ್ಲಿ ನಿರ್ವಹಿಸಿದ ಅಭಿವೃದ್ಧಿ ಕಾರ್ಯಗಳ ಹಾಗೂ ಇತರೆ ಕಾರ್ಯಗಳಲ್ಲಿನ ಸುಧಾರಣೆ ಹಾಗೂ ಪ್ರಸ್ತುತ ಬೆಂಗಳೂರು ಉತ್ತರ ನಗರಪಾಲಿಕೆಯಲ್ಲಿ ಅವರ ಕಾರ್ಯವೈಖರಿಯ ಕುರಿತು ಮಾನ್ಯ ಅಧ್ಯಕ್ಷರು ಶ್ಲಾಘನೆ ವ್ಯಕ್ತಪಡಿಸಿದರು.

ಸಂವಾದ ಕಾರ್ಯಕ್ರಮ ಮುಗಿದ ನಂತರ ಅಧಿಕಾರಿಗಳೊಂದಿಗೆ ★ ಸಭೆ ನಡೆಸಿದ ಅಧ್ಯಕ್ಷರು, ಪೌರ ಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿಗಳ ಈ ಕೆಳಕಂಡ ಸಮಸ್ಯೆಗಳ ಬಗ್ಗೆ ತ್ವರಿತವಾಗಿ ★ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.

ಪಾಲಿಕೆ ವ್ಯಾಪ್ತಿಯ ಎಲ್ಲಾ ಹೋಟೆಲ್ ಗಳಲ್ಲಿ ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿಗಳು ಶೌಚಾಲಯ ಬಳಕೆ ಮಾಡಲು ಅನುಮತಿಸುವಂತೆ ಆದೇಶ ಹೊರಡಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರವರ ಗಮನಕ್ಕೆ ತರುವುದು.

- ★ **ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಒಟ್ಟು 27 ಸುವಿಧ ವಿಶ್ರಾಂತಿ ಕೊಠಡಿ ಇದ್ದು, ಪ್ರತಿ ಮಸ್ಟರಿಂಗ್ ಪಾಯಿಂಟ್ ನಲ್ಲಿಯೂ ಕೊಠಡಿ ವ್ಯವಸ್ಥೆ ಹಾಗೂ ಶೌಚಾಲಯ ವ್ಯವಸ್ಥೆ ಕಲ್ಪಿಸುವುದು.**
- ★ **ಆರೋಗ್ಯ ತಪಾಸಣೆ ಕೈಗೊಳ್ಳತಕ್ಕದ್ದು.**
- ★ **ಸಕಾಲಕ್ಕೆ ವೇತನ ಪಾವತಿ ಮಾಡುವುದು.**
- ★ **ಕಲ್ಯಾಣ ಕಾರ್ಯಕ್ರಮಗಳ ಅಡಿಯಲ್ಲಿ ಮಕ್ಕಳ ಶಿಕ್ಷಣದ ಶುಲ್ಕ ಮರುಪಾವತಿಸುವುದು.**
- ★ **ಖಾಯಂ ನೇಮಕಾತಿ ಆದೇಶ ನೀಡುವುದು.**
- ★ **ವಸತಿ ಯೋಜನೆಗಳ ಬಗ್ಗೆ ಕ್ರಮ ವಹಿಸತಕ್ಕದ್ದು**
- ★ **ಮೊರಾರ್ಜಿ ದೇಸಾಯಿ ಮತ್ತು ಇತರೆ ವಸತಿ ಶಾಲೆಯಲ್ಲಿ ಸ್ವಚ್ಛತಾ ಸಿಬ್ಬಂದಿಗಳ ಮಕ್ಕಳ ವಿದ್ಯಾಭ್ಯಾಸಕ್ಕೆ ಕ್ರಮ ವಹಿಸುವುದು.**
- ★ **250 ಕ್ಕೂ ಹೆಚ್ಚು ಪೌರಕಾರ್ಮಿಕರು ವಾಸಿಸುತ್ತಿರುವ ಕೋಗಿಲು ಬಂಡೆ ಪ್ರದೇಶದಲ್ಲಿ ಶೌಚಾಲಯ ವ್ಯವಸ್ಥೆಗೆ ಕ್ರಮ ವಹಿಸತಕ್ಕದ್ದು.**
- ★ **ಸೇವೆಯಲ್ಲಿರುವಾಗಲೇ ಮೃತಪಟ್ಟ ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿಗಳ ಕುಟುಂಬಕ್ಕೆ ನೀಡಬೇಕಾದ ಪರಿಹಾರ ಒದಗಿಸಲು ಕ್ರಮ ವಹಿಸತಕ್ಕದ್ದು.**
- ★ **ಬಿಡುವಿಲ್ಲದೆ ನಿರಂತರವಾಗಿ ಶ್ರಮಿಸುತ್ತಿರುವ ಪೌರ ಕಾರ್ಮಿಕರು ಮತ್ತು**

**ಸ್ವಚ್ಛತಾ ಸಿಬ್ಬಂದಿಗಳು ಆತ್ಮ ವಿಶ್ವಾಸ ಹೆಚ್ಚಿಸಿಕೊಳ್ಳಬೇಕು: ಪೊಮ್ಮಲ ಸುನೀಲ್ ಕುಮಾರ್**

ಪೌರಕಾರ್ಮಿಕರೊಂದಿಗಿನ ನೇರ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಬೆಂಗಳೂರು ಉತ್ತರ ನಗರಪಾಲಿಕೆ ಆಯುಕ್ತರಾದ ಶ್ರೀ ಪೊಮ್ಮಲ ಸುನೀಲ್ ಕುಮಾರ್ ★ ವರು ಮಾತನಾಡಿ ನಗರಪಾಲಿಕೆಯ ಸ್ವಚ್ಛತೆಯನ್ನು ಕಾಪಾಡುವ ನಿಟ್ಟಿನಲ್ಲಿ ಬಿಡುವಿಲ್ಲದ ನಿರಂತರ ಸೇವೆ ಮಾಡುತ್ತಿರುವ ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿಗಳು, ಸ್ವಚ್ಛತಾ ಕಾರ್ಯ ನಿರ್ವಹಣೆ, ಅಂಗಡಿ ಮುಂಗಟ್ಟುಗಳ ಮಾಲೀಕರಿಗೆ / ಸಾರ್ವಜನಿಕರಿಗೆ ಅರಿವು ಮೂಡಿಸುವಲ್ಲಿ, ಹೋಟೆಲ್ ಮುಂತಾದ ಸಾರ್ವಜನಿಕ ಸ್ಥಳಗಳಲ್ಲಿ ಶೌಚಾಲಯ ಬಳಸುವಲ್ಲಿ ಯಾರಿಗೂ ಅಂಜದಂತೆ ಧೈರ್ಯ ಮತ್ತು ಆತ್ಮವಿಶ್ವಾಸದಿಂದ ಇರಬೇಕೆಂದು, ಯಾರಾದರೂ ತೊಂದರೆ ನೀಡಿದಲ್ಲಿ ಅಂತಹವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿಗಳು ಪ್ರಾಮಾಣಿಕತೆಯಿಂದ ಕೆಲಸ ನಿರ್ವಹಣೆ ಮಾಡಬೇಕಾಗಿ ತಿಳಿಸಿದರು. ಕಲ್ಯಾಣ ಕಾರ್ಯಕ್ರಮಗಳ ಅಡಿಯಲ್ಲಿ ಪೌರ ಕಾರ್ಮಿಕರಿಗೆ ನೀಡಬೇಕಾಗಿರುವ ಸೌಲಭ್ಯಗಳಿಗೆ ಅವಶ್ಯವಿರುವ ಅನುದಾನವನ್ನು ಮುಂದಿನ ಆರ್ಥಿಕ ವರ್ಷದಲ್ಲಿ ಮೀಸಲಿಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಶೌಚಾಲಯ ಇಲ್ಲದ ಕಡೆ ಪರ್ಯಾಯ ವ್ಯವಸ್ಥೆಯಾಗಿ ತಾತ್ಕಾಲಿಕವಾಗಿ ಪೌರಕಾರ್ಮಿಕರಿಗೆ ಉದ್ಯಾನವನಗಳಲ್ಲಿನ ಶೌಚಾಲಯ ಬಳಕೆ ಮಾಡಲು ಅನುವಾಗುವಂತೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಿದರು. ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಮೀಸಲಿರುವ ಅನುದಾನದಲ್ಲಿ ಶೌಚಾಲಯ ನಿರ್ಮಾಣ ವ್ಯವಸ್ಥೆ ಮಾಡಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಪ್ರತಿ 3 ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆ ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿಯೂ ಹಂತಹಂತವಾಗಿ ಎಲ್ಲ ರೀತಿಯ ಆರೋಗ್ಯ ತಪಾಸಣೆಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಈ ಸಂವಾದ ಕಾರ್ಯಕ್ರಮದಲ್ಲಿ ಅಪರ ಆಯುಕ್ತರಾದ ಶ್ರೀಮತಿ ಲತಾ, ಶ್ರೀ ಅಮರೇಶ್, ಸಫಾಯಿ ಕರ್ಮಚಾರಿ ಆಯೋಗದ ಕಾರ್ಯದರ್ಶಿ ಶ್ರೀಮತಿ ಸುಮಯ ರೂಹಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀ ಸುರೇಶ್, ಜಂಟಿ ಆಯುಕ್ತರುಗಳಾದ ಶ್ರೀ ಮೊಹಮ್ಮದ್ ನಯೀಮ್ ಮೊಮಿನ್, ಶ್ರೀಮತಿ ಪಲ್ಲವಿ, ಬೆಂ.ಘ.ತ್ಯಾ. ನಿಯಮಿತದ ಮುಖ್ಯ ಕಾರ್ಯಾಚರಣೆ ಅಧಿಕಾರಿಯಾದ ಶ್ರೀಮತಿ ರಮಾಮಣಿ, ಡಿ.ಜಿಎಂ., ಎ.ಜಿಎಂ. ಗಳು, ಕಾರ್ಯಪಾಲಕ ಅಭಿಯಂತರರು, ಕಾರ್ಮಿಕ ಇಲಾಖೆ ಅಧಿಕಾರಿಗಳು, ಪೌರಕಾರ್ಮಿಕರ ಮತ್ತು ಸ್ವಚ್ಛತಾ ಸಿಬ್ಬಂದಿಗಳ ಸಂಘದ ಪ್ರತಿನಿಧಿಗಳು ಭಾಗವಹಿಸಿದ್ದರು.

## ಬರೆದುಕೊಳ್ಳುತ್ತಿದ್ದ ವ್ಯಕ್ತಿ ಬಂಧನ

ಸಿಬ್ಬಂದಿಗಳಾದ ಮೃತ್ಯುಂಜಯ, ಸುನೀಲಕುಮಾರ, ಯಲ್ಲಪ್ಪ, ಅಶೋಕ ಕಟಕೆ, ಶಿವಕುಮಾರ ಮತ್ತು ನಾಗರಾಜ ಅವರು ದಾಳಿ ನಡೆಸಿ ಮಹಾದೇವ ನಗರದ ಶರಣಬಸಪ್ಪ ತಂದೆ ಹಣಮಂತರಾಯ ಕಾಳೆ (45) ಎಂಬಾತನನ್ನು ಬಂಧಿಸಿ 10,020 ರೂ.ನಗದು ಜಪ್ತಿ ಮಾಡಿದ್ದಾರೆ.

## ಅಡ್ಡೆ ಮೇಲೆ ದಾಳಿ

ಬಂಧಿಸಿ ಗ್ಯಾಸ್ ಸಿಲಿಂಡರ್, ತೂಕದ ಯಂತ್ರ, ಹೆಚ್.ಪಿ.ಮೋಟಾರ್ ಸೇರಿ 7,500 ರೂ.ಮೌಲ್ಯದ ವಸ್ತುಗಳು ಮತ್ತು 450 ರೂ.ನಗದು ಜಪ್ತಿ ಮಾಡಿದ್ದಾರೆ. ಈ ಸಂಬಂಧ ಪರಶುರಾಮ ಕೋಟನೂರ ವಿರುದ್ಧ ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕನ್ನಡ ರತ್ನ ಪ್ರಶಸ್ತಿಗೆ ಶಿವಲಿಂಗಯ್ಯ ಮಠ ಆಯ್ಕೆ



**ಮಲ್ಲಮ್ಮ ನುಡಿ ವಾರ್ತೆ**

**ಚಿಟಗುಪ್ಪ:** ತಾಲೂಕಿನ ನಿರ್ಣಾ ಗ್ರಾಮದ ನಿವಾಸಿ ಶಿವಲಿಂಗಯ್ಯ ಮಠ ಅವರಿಗೆ ಕನ್ನಡ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನವಂಬರ್ 30ರಂದು ಪಟ್ಟಣದ ಗಾಂಧಿ ವೃತ್ತದಲ್ಲಿ ನಡೆಯುವ 70ನೇ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಕನ್ನಡ ರತ್ನ ಪ್ರಶಸ್ತಿ ನೀಡಲಾಗುತ್ತದೆ ಎಂದರು. ಶಿವಲಿಂಗಯ್ಯ ರವರ ಧಾರ್ಮಿಕ ಮತ್ತು ಸಮಾಜ ಸೇವೆಯನ್ನು ಹಗಲಿರಳು ಬಡ ಜನರಿಗೆ, ನಿರ್ಗತಿಕರಿಗೆ ಸಲ್ಲಿಸುತ್ತಿರುವ ಸೇವೆ ಶ್ಲಾಘನೀಯವಾಗಿದೆ. ಇವರ ಕಾರ್ಯವನ್ನು ಮೆಚ್ಚಿ ನಮಗೆ ಸಂತಸ ತಂದಿದೆ. ಶಿವಲಿಂಗಯ್ಯ ಮಠ ಅವರು ನಿರ್ಣಾ ಗ್ರಾಮ ಅಲದೇ ವಿವಿಧ ಹಳ್ಳಿ-ಹಳ್ಳಿಯಲ್ಲಿ ಬಡ ಜನರಿಗೆ ಸಮಾಜ ಸೇವೆ ಮಾಡುವ ವ್ಯಕ್ತಿ ಇವರಾಗಿದ್ದಾರೆ. ಇವರ ಸಾಧನೆಯನ್ನು ಮೆಚ್ಚಿ ಕನ್ನಡ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

# ಕನ್ನಡ ರತ್ನ ಪ್ರಶಸ್ತಿಗೆ ರಾಠೋಡ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ



ಚಿಟಗುಪ್ಪ: ಸುಮಾರು 8 ವರ್ಷಗಳಿಂದ ಅರಣ್ಯ ಇಲಾಖೆಯಲ್ಲಿ ಪ್ರಾದೇಶಿಕ ಮತ್ತು ಸಾಮಾಜಿಕ ವಲಯ ಅರಣ್ಯಾಧಿಕಾರಿಯಾಗಿ ಮಂಗಳೂರು, ಚಿಂಚೋಳಿ ಹಾಗೂ ಚಿಟಗುಪ್ಪ ತಾಲೂಕಿನ ಪ್ರಾದೇಶಿಕ ವಲಯ ಅರಣ್ಯಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವ ಶ್ರೀಕಾಂತ ರಾಠೋಡ ಇವರಿಗೆ ಕನ್ನಡ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕನ್ನಡ ಸೇನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ತಿಳಿಸಿದ್ದಾರೆ. ನ.30ರಂದು ಪಟ್ಟಣದ ಗಾಂಧಿ ವೃತ್ತದಲ್ಲಿ ಕನ್ನಡ ಸೇನೆ ಕರ್ನಾಟಕ ಸಂಘಟನೆ ಆಯೋಜಿಸಿದ್ದ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪ್ರಶಸ್ತಿಯನ್ನು ನೀಡಲಾಗುತ್ತದೆ. ಶ್ರೀಕಾಂತ ರಾಠೋಡ ರವರು ಅರಣ್ಯ ಸಂರಕ್ಷಣೆಗೆ ಹಗಲಿರಳನ್ನದೇ, ಕರ್ತವ್ಯ ನಿರ್ವಹಿಸುತ್ತಿರುವ ಇವರ ಕಾರ್ಯ ಶ್ಲಾಘನೀಯವಾಗಿದೆ. ಇವರ ಕಾರ್ಯವನ್ನು ಮೆಚ್ಚಿ ನಮಗೆ ಸಂತಸ ತಂದಿದೆ. ಶ್ರೀಕಾಂತ ರಾಠೋಡ ಅವರು ಒಂದು ವರ್ಷದಿಂದ ಚಿಟಗುಪ್ಪ ತಾಲೂಕಿನ ವಲಯ ಅರಣ್ಯಾಧಿಕಾರಿಯಾಗಿ ಅರಣ್ಯ ಸಂರಕ್ಷಣೆ ಹಾಗೂ ಪರಿಸರ ಸಂರಕ್ಷಣೆಗೆ ಹೆಚ್ಚು ಒತ್ತು ನೀಡಿ ಕಾರ್ಯನಿರ್ವಹಿಸುತ್ತಿರುವುದನ್ನು ಮೆಚ್ಚಿ ಇವರನ್ನು ಕನ್ನಡ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ್ಯಂಟಿಬಯೋಟಿಕ್‌ಗಳ ಮಿತ ಬಳಕೆ ಇರಲಿ



ವೈದ್ಯರ ಪ್ರಿಸ್ಕ್ರಿಪ್ಷನ ಇಲ್ಲದೆ ಪ್ರತಿಜೀವಕಗಳನ್ನು ಸೇವಿಸಬಾರದು ಮತ್ತು ಆಂಟಿಬಯೋಟಿಕ್ ಕೋರ್ಸ್ ಅನ್ನು ಪೂರ್ಣಗೊಳಿಸುವುದು ಒಳ್ಳೆಯದು ಇಲ್ಲದಿದ್ದರೆ ಸೋಂಕು ನಿವಾರಣೆಯಾಗುವುದಿಲ್ಲ ಎಂದು ಗುಲ್ಬರ್ಗಾ ವಿಶ್ವವಿದ್ಯಾಲಯದ ಜೈವಿಕ ತಂತ್ರಜ್ಞಾನ ವಿಭಾಗದ ಹಿರಿಯ ಪ್ರೊಫೆಸರ ಡಾ ಚಂದ್ರಕಾಂತ ಕೆಳಮಣಿ ಹೇಳಿದರು. ಅವರು ಗುರುವಾರ ಕೆಬಿಎನ ವಿವಿಯ ಜೈವಿಕ ತಂತ್ರಜ್ಞಾನ ವಿಭಾಗದಿಂದ ಏರ್ಪಡಿಸಲಾದ ಆಂಟಿ ಮೈಕ್ರೋಬಿಯಲ ಪ್ರತಿರೋಧ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಆ್ಯಂಟಬಯೋಟಿಕಗಳ ಮಹತ್ವ ಮತ್ತು ಆ್ಯಂಟಿಬಯಾಟಿಕ್‌ಗಳ ಸರಿಯಾದ ಬಳಕೆ ಕುರಿತು ತಿಳಿ ಹೇಳಿದರು.

ಆ್ಯಂಟಬಯೋಟಿಕ್ ನಿರೋಧಕ ಬ್ಯಾಕ್ಟೀರಿಯಾಗಳಿಗೆ ಸಂಬಂಧಿಸಿದ ಹೆಚ್ಚುತ್ತಿರುವ ಸಮಸ್ಯೆಗಳು ಮತ್ತು ಮಾನವನ ಆರೋಗ್ಯದ ಮೇಲೆ ಅವುಗಳ ಗಂಭೀರ ಪರಿಣಾಮಗಳ ಬಗ್ಗೆ ಹೇಳುತ್ತಾ, ಪ್ರತಿಜೀವಕಗಳ ಬಳಕೆಯಲ್ಲಿ ಸಂವೇದನಾಶೀಲರಾಗುವುದು ಉತ್ತಮ. ಸಣ್ಣ ರೋಗಲಕ್ಷಣಗಳಿಗೆ ಪ್ರತಿಜೀವಕಗಳನ್ನು ತಪ್ಪಿಸುತ್ತಾ ರ್ಫೇಜ್ ಥೆರಪಿಯಂತಹ ಬ್ಯಾಕ್ಟೀರಿಯಾದ ಸೋಂಕುಗಳಿಗೆ ಪರ್ಯಾಯ ಚಿಕಿತ್ಸೆ ಅಳವಡಿಸಿ ಕೊಂಡಲ್ಲಿ ಅನವಶ್ಯಕ ಪ್ರತಿಜೀವಕಗಳ ಬಳಕೆ ಕಡಿತಗೊಳಿಸಬಹುದು ಎಂದು ತಿಳಿಸುದರು.

ಕೆಬಿಎನ ಸಮ ಉಪ ಕುಲಪತಿ ಡಾ ಆಶಾಫ್ಕ ಅಹ್ಮದ್ ಇವರು ಮಾತನಾಡುತ್ತ, ಸದ್ಯದ ಪರಿಸ್ಥಿತಿಯಲ್ಲಿ ಸೋಶಿಯಲ್ ಮೀಡಿಯಾ, ಜಾಹಿರಾತುಗಳ ಪ್ರಭಾವಕ್ಕೆ ಒಳಗಾಗಿ ಅಡ್ಡ ಪರಿಣಾಮಗಳ ಪರಿವಿಲ್ಲದೇ ಜನರು ಮಾತ್ರೆಗಳನ್ನು ತೆಗೆದುಕೊಳ್ಳುತ್ತಿದ್ದಾರೆ, ಅದಕ್ಕೆ ಇಂತಹ ಜಾಗೃತಿ ಕಾರ್ಯಕ್ರಮಗಳ ಅವಶ್ಯಕತೆ ಇದೆ. ಕಾರ್ಯಕ್ರಮವನ್ನು ಆಯೋಜಿಸಿದ ಜೈವಿಕ ತಂತ್ರಜ್ಞಾನ ವಿಭಾಗವನ್ನು ಶ್ಲಾಘಸಿದರು.

ವಿದ್ಯಾರ್ಥಿನಿ ಯಾರದ ಆಯೇಶಾ ನಿರೂಪಾಸಿದರೆ, ರುಖಯ್ಯ ಪರ್ವಿನ್ ಸ್ವಾಗತ ಭಾಷಣ ಮಾಡಿದರು. ಶಿಫಾ ಸೆಹರ್ ಅತಿಥಿ ಪರಿಚಯ ಮಾಡಿದರೆ, ಸಿಂಧುರಾಣಿ ವಂದಿಸಿದರು.

ಈ ಕಾರ್ಯಕ್ರಮದಲ್ಲಿ ಆಗಿ

ಯೋಜಕ ವಿಭಾಗವಾದ ಜೈವಿಕ ತಂತ್ರಜ್ಞಾನ ಮುಖ್ಯಸ್ಥೆ ಡಾ ಜಹಾನಾರ ಖುಡ್ಸಿ, ಸಹ ಪ್ರಾಧ್ಯಪಕರದ ಡಾ ಗೀತಂಜಲಿ ಕಾಂಬಳೆ, ಸಹಾಯಕ ಪ್ರಧ್ಯಾಪಕರಾದ ಡಾ ಎಮ್ ಎ ಮುಜೀಬ, ಡಾ ನೀಲಮ್ಮ ಮಿಶ್ರ, ಡಾ ಬದರಿನಾಥ ಕುಲಕರ್ಣಿ ಹಾಗೂ ವಿಜ್ಞಾನ ನಿಕಾಯದ ಎಲ್ಲ ಉಪನ್ಯಾಸಕರು ಮತ್ತು ಎಲ್ಲ ವಿದ್ಯಾರ್ಥಿಗಳು ಹಾಜರಿದ್ದರು.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಮಲ್ಲಮ್ಮ ನುಡಿ ವಾರ್ತೆ**

**ಬೀದರ**, ಪಿಯುಸಿ ವಿದ್ಯಾರ್ಥಿಗಳು ಹೊರತುಪಡಿಸಿ ಉಳಿದ ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿ ವೇತನ", "ಶುಲ್ಕ ಮರುಪಾವತಿ" ಮತ್ತು "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್.20ರವರೆಗೆ ವಿಸ್ತರಿಸಲಾಗಿದೆ.

# ಅಣದೂರ ಗ್ರಾಮದ ವಾರ್ಡ್ 02 ರಲ್ಲಿ ಗ್ಯಾರಂಟಿ ಯೋಜನೆಗಳ ಕ್ರಾಂತಿ



**ಮಲ್ಲಮ್ಮ ನುಡಿ ವಾರ್ತೆ**

**ಬೀದರ್ :** ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಅಣದೂರ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಅನ್ನಭಾಗ್ಯ ಯೋಜನೆ: ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ.

ಯುವನಿಧಿ: ಈ ಯೋಜನೆ ಪದವೀಧರರು ಮತ್ತು ಡಿಪ್ಲೋಮಾ ಮುಗಿಸಿದ ಯುವಕರಿಗೆ ಯೋಜನೆಯ ಕುರಿತು ಪೂರ್ಣ ಮಾಹಿತಿ ಇಲ್ಲದಿರುವ ಕಾರಣ, ಸಮಿತಿಯು ಕಾಲೇಜುಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ವಿಶೇಷ ಪ್ರಚಾರ ಆಂದೋಲನಗಳನ್ನು ನಡೆಸುತ್ತಿದೆ. ನೋಂದಣಿ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿದೆ. ಮತ್ತು ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಸೇವಾದಳ ಅಧ್ಯಕ್ಷ ಮೋಹಿನ್ ಪಾಠಣ್, ಗ್ರಾಮ ಪಂಚಾಯತ ಸದಸ್ಯರಾದ ಶಾಂತಕುಮಾರ್ ಬಸಶೆಟ್ಟಿ,

ಮುಖಂಡರಾದ ಪ್ರಭು ಪಸರ್ಗಿ, ಯೂತ್ ಕಾಂಗ್ರೆಸನ್ ತಾಲ್ಲೂಕ್ ಉಪಾಧ್ಯಕ್ಷ ಸನ್ನಿ ಜಾನ್, ಪವನ ಬಾಪೂರೆ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಎಲ್ಲರೂ ಒಂದೇ ಎಂಬ ಭಾವನೆ ಬೆಳೆಸಿಕೊಳ್ಳಬೇಕು: ಕೃಷ್ಣಾಚಾರ್ಯ ಪಂಚಾಳ



**ಮಲ್ಲಮ್ಮ ನುಡಿ ವಾರ್ತೆ**

**ಚಿಟಗುಪ್ಪ:** ಎಲ್ಲರೂ ಒಂದೇ ಎಂಬ ಭಾವನೆಯನ್ನು ಬೆಳೆಸಿಕೊಳ್ಳುವುದರ ಜೊತೆಗೆ ಸಂವಿಧಾನ ನೀಡಿರುವ

ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ತಿಳಿದುಕೊಂಡಾಗ ಮಾತ್ರ ಅದರ ಆಶಯ ಈಡೇರಬಲ್ಲದು ಎಂದು ತಾಲೂಕಿನ ಮೀನಕೇರಾ ಗ್ರಾಮದ ನ್ಯಾಷನಲ್ ಪ್ರೌಢ ಶಾಲೆಯಲ್ಲಿ 76ನೇ ಸಂವಿಧಾನ ಸಮರ್ಪಣಾ ದಿನಾಚರಣೆಯಲ್ಲಿ ಪತ್ರಕರ್ತ ಕೃಷ್ಣಾಚಾರ್ಯ ಪಂಚಾಳ ಮಾತನಾಡುತ್ತ ನುಡಿದರು.

ಶಿಕ್ಷಕರಾದ ಯಲ್ಲಾಲಿಂಗ ದಂಡಿನ ಮಾತನಾಡಿ, ಭಾರತದ ಇತಿಹಾಸದಲ್ಲಿ ಡಾ. ಬಿ. ಆರ್. ಅಂಬೇಡ್ಕರ್ ಅವರ ಹೆಸರು ಸದಾ ಅಜರಾಮರ ಅವರು ಕೇವಲ ಸಂವಿಧಾನದ ಪಿತಾಮಹ ಎಂದು ನೆನಪಿಸಿಕೊಳ್ಳುವುದಲ್ಲಾ. ಅವರ ಚಿಂತನೆ ದೂರ ದೃಷ್ಟಿ ಅವರ ಕೊಡುಗೆ ಸಮಾಜದ ಎಲ್ಲಾ ವರ್ಗಕ್ಕೆ ಸೇರಿದ್ದು. ಪ್ರತಿಯೊಬ್ಬ ಭಾರತೀಯರ ಏಳಿಗೆ ಸಂವಿಧಾನವು ತುಂಬಾ ಅವಶ್ಯಕ ತುಳಿತಕ್ಕೋಳಗಾದ ಸಮುದಾಯಗಳ ಜೊತೆಗೆ ಪ್ರತಿಯೊಬ್ಬ ಮನುಷ್ಯನಿಗೆ ಸ್ವಾಭಿಮಾನ ಮತ್ತು ಗೌರವವಿತ ಜೀವನ ಸಿಗಬೇಕು ಎಂಬುವುದು ಅವರ ಆಶಯವಾಗಿತ್ತು.

ಅವರು ರಚಿಸಿರುವ ಸಂವಿಧಾನ ಜಾತಿ ಮತ ಲಿಂಗ ಭೇದವಿಲ್ಲದೆ. ಸಮಸ್ತ ನಾಗರಿಕರಿಗೆ ನ್ಯಾಯ ಸ್ವತಂತ್ರ ಸಮಾನತೆ ಭಾತೃತ್ವದ ಭದ್ರತೆಯನ್ನು ನೀಡುತ್ತದೆ ಎಂದರು. ಭಾರತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ನಾಗೇಶ್ ಕೋಟಗಿ, ವಿಠ್ಠಲ್ ರೆಡ್ಡಿ, ವಿಶಾಲ್ ಮಾಲೆಕರ್, ಶರಣಬಸವ ಸ್ವಾಮಿ, ಮಮತಾ ಹುಡುಗಿ, ಪ್ರೀತಿ ಪಾಟೀಲ್ ಸೇರಿದಂತೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 46ನೇ ಶರಣ ಕಮ್ಮಟ ಅನುಭವ ಮಂಟಪ ಉತ್ಸವ; ಈಶ್ವರ್ ಖಂಡ್ರೆ

**ಮಲ್ಲಮ್ಮ ನುಡಿ ವಾರ್ತೆ**

**ಬೀದರ್:** ಈ ತಿಂಗಳ 29 ಹಾಗೂ 30ರಂದು ಬಸವಣ್ಣನವರ ಕರ್ಮಭೂಮಿ ಬಸವಕಲ್ಯಾಣದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ 46ನೇ ಶರಣ ಕಮ್ಮಟ ಅನುಭವ ಮಂಟಪ ಉತ್ಸವ ಜರುಗಲಿದೆ ಎಂದು ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿಗಳಾದ ಈಶ್ವರ ಖಂಡ್ರೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ವಿಶ್ವ ಬಸವಧರ್ಮ ಅನುಭವ ಮಂಟಪ ಟ್ರಸ್ಟಿನಿಂದ ಬಸವಕಲ್ಯಾಣದ ಅನುಭವ ಮಂಟಪ ಪರಿಸರದಲ್ಲಿ ಹಮ್ಮಿಕೊಂಡಿರುವ ಈ ಉತ್ಸವಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ನಾಡಿನ ವಿವಿಧ ಮಠಾಶರು, ಜನಪ್ರತಿನಿಗಳು, ಸಾಹಿತಿಗಳು, ಚಿಂತಕರು, ಗಣ್ಯರು ಸೇರಿ ಅಪಾರ ಬಸವಭಕ್ತರು ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ ಎಂದರು.

ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷರಾದ ಶ್ರೀ ಡಾ.ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನ್ನಿಧ್ಯದಲ್ಲಿ ಎರಡು ದಿನದ ಉತ್ಸವಕ್ಕಾಗಿ ಅನುಭವ ಮಂಟಪ ಹತ್ತಿರದ ವಿಶಾಲ ಮೈದಾನದಲ್ಲಿ ಬೃಹತ್ ಪೆಂಡಾಲ ಹಾಕುತ್ತಿದ್ದು, ಭವ್ಯ ವೇದಿಕೆ ತಲೆ ಎತ್ತುತ್ತಿದೆ. ಕಾರ್ಯಕ್ರಮದ ಉದ್ಘಾಟನೆ, ಸಮಾರೋಪ ಸೇರಿ ಮಹತ್ವದ ಗೋಷ್ಠಿ, ಚಿಂತನ-ಮಂಥನ, ಸಾಮೂಹಿಕ ಇಷ್ಟಲಿಂಗ ಪೂಜೆ, ಸಾಧಕರಿಗೆ ಪ್ರಶಸ್ತಿ ಪ್ರದಾನ, ಗ್ರಂಥ ಬಿಡುಗಡೆ ಇತರ ಕಾರ್ಯಕ್ರಮಗಳು ನಡೆಯಲಿವೆ ಎಂದು ವಿವರಿಸಿದರು.

ಬಸವಣ್ಣನವರ ತತ್ವ, ವಿಚಾರಗಳು ವಿಶ್ವವ್ಯಾಪಿ ಆಗಬೇಕು. ಮಾನವ ಕಲ್ಯಾಣಕ್ಕೆ ಆಧಾರವಾಗಿರುವ ವಚನ ಸಾಹಿತ್ಯ ಜಾಗತಿಕವಾಗಿ ಎಲ್ಲರಿಗೂ ಗೊತ್ತಾಗಲಿ ಎಂಬ ಸದಾಶಯದಿಂದ 46 ವರ್ಷಗಳಿಂದ ಅನುಭವ ಮಂಟಪ ಉತ್ಸವ, ಶರಣ ಕಮ್ಮಟವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಕರ್ನಾಟಕ ಅಲ್ಲದೆ ನೆರೆಯ ಮಹಾರಾಷ್ಟ್ರ, ತೆಲಂಗಾಣ ಸೇರಿ ನಾನಾ ಕಡೆಗಳಿಂದ ಸಹಸ್ರಾರು ಬಸವ ಭಕ್ತರು ಉತ್ಸವಕ್ಕೆ ಆಗಮಿಸಲಿದ್ದಾರೆ. ಎಲ್ಲರಿಗೂ ಊಟ, ವಸತಿ ಸೇರಿ ಅಗತ್ಯ ವ್ಯವಸ್ಥೆ ಮಾಡಿದ್ದು, ಇದಕ್ಕಾಗಿ ವಿವಿಧ ಸಮಿತಿಗಳು ಸಕ್ರಿಯ ಕೆಲಸ ಮಾಡುತ್ತಿವೆ ಎಂದರು.

ನ.29ರಂದು ಬೆಳಗ್ಗೆ 9.30ಕ್ಕೆ ಗುರುಬಸವ ಪೂಜೆ, ವಚನ ಪಠಣ ಹಾಗೂ ಷಟಸ್ಥಲ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ. ಬೆಳಗ್ಗೆ 11ರಂದು ಉತ್ಸವವನ್ನು ಆಂಧ್ರಪ್ರದೇಶ ರಾಜ್ಯಪಾಲ ಎಸ್. ಅಬ್ದುಲ್ ನಜೀರ್ ಉದ್ಘಾಟಿಸುವರು. ಪೂಜ್ಯ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಆದಿಚುಂಚನಗಿರಿ, ಡಾ.ಚನ್ನವೀರ ಶಿವಾಚಾರ್ಯರು ಹಾರಕೂಡ, ಡಾ.ಶಿವಾನಂದ ಸ್ವಾಮೀಜಿ ಹುಲಸೂರು, ಪೂಜ್ಯ ಡಾ.ಗಂಗಾಂಬಿಕೆ ಅಕ್ಕ ಸಾನ್ನಿಧ್ಯ



ವಹಿಸುವರು.

ಕೇಂದ್ರ ಸಚಿವ ವಿ.ಸೋಮಣ್ಣ ಗ್ರಂಥ ಲೋಕಾರ್ಪಣೆ ಮಾಡುವರು. ಪೌರಾಡಳಿತ ಸಚಿವ ರಹೀಮ್ ಖಾನ್, ಸಂಸದ ಸಾಗರ್ ಖಂಡ್ರೆ, ಶಾಸಕರಾದ ಶರಣು ಸಲಗರ, ಸಂಜಯ ಬನಸೋಡೆ, ಪಿ.ಸಂಜೀವರಡ್ಡಿ ಇತರರು ಪಾಲ್ಗೊಳ್ಳುವರು. ಕಾರ್ಯಕ್ರಮದಲ್ಲಿ ವಿವಿಧ ಪ್ರಶಸ್ತಿ ಪ್ರದಾನ ನಡೆಯಲಿದೆ. ಮಧ್ಯಾಹ್ನ 3ಕ್ಕೆ ಜಾಗತಿಕ ನೆಲೆಯಲ್ಲಿ ಬಸವ ತತ್ವದ ಪ್ರಸ್ತುತತೆ ಗೋಷ್ಠಿ, ಸಂಜೆ ಶಿವಯೋಗಿ ಸಿದ್ದರಾಮೇಶ್ವರ ನಾಟಕ ಪ್ರದರ್ಶನ ಇದೆ ಎಂದು ತಿಳಿಸಿದರು.

ನ.30ರಂದು ಬೆಳಗ್ಗೆ 6ಕ್ಕೆ ನಗೆಯೋಗ ಕೂಟ, ಬೆಳಗ್ಗೆ 7.30ಕ್ಕೆ ಸಾಮೂಹಿಕ ಇಷ್ಟಲಿಂಗ ಪೂಜಾ, ಬೆಳಗ್ಗೆ 10ಕ್ಕೆ ಲಿಂಗಾಯತ ಹೋರಾಟ ಮತ್ತು ರಾಷ್ಟ್ರೀಯತೆ ಗೋಷ್ಠಿ ಇದೆ. ಮಧ್ಯಾಹ್ನ 1ಕ್ಕೆ ಸಮಾರೋಪ ಸಮಾರಂಭ ಜರುಗಲಿದೆ. ಗುರುಬಸವ ಪಟ್ಟದ್ದೇವರು ಸಾನ್ನಿಧ್ಯ, ಸಣ್ಣ ಕೈಗಾರಿಕೆ ಸಚಿವ ಶರಣಬಸಪ್ಪ ದರ್ಶನಾಪುರ ಅಧ್ಯಕ್ಷತೆ ವಹಿಸುವರು. ಶಾಸಕರಾದ ಪ್ರಭು ಚವ್ಹಾಣ್, ಡಾ.ಶೈಲೇಂದ್ರ ಬೆಲ್ದಾಳೆ, ಡಾ.ಸಿದ್ದಲಿಂಗಪ್ಪ ಪಾಟೀಲ್, ಮಾಜಿ ಸಚಿವ ರಾಜಶೇಖರ ಪಾಟೀಲ್, ತೆಲಂಗಾಣ ಮಾಜಿ ಸಂಸದ ಸುರೇಶ ಶೆಟಕಾರ, ವಿಧಾನ ಪರಿಷತ್ ಸದಸ್ಯರಾದ ಎಂ.ಜಿ. ಮೂಳೆ, ತಿಪ್ಪಣ್ಣ ಕಮಕನೂರು, ಡಾ.ಚಂದ್ರಶೇಖರ ಪಾಟೀಲ್, ಮಾಜಿ ವಿಧಾನ ಪರಿಷತ್ ಸದಸ್ಯರಾದ ವಿಜಯಸಿಂಗ್, ಮಾಜಿ ಶಾಸಕ ಪ್ರಕಾಶ ಖಂಡ್ರೆ, ಮಲ್ಲಿಕಾಜರ್ ಖೂಬಾ, ಮೀನುಗಾರಿಕೆ ನಿಗಮದ ಅಧ್ಯಕ್ಷೆ ಮಾಲಾ ನಾರಾ ನಾರಾಯಣರಾವ, ಪ್ರಮುಖರಾದ ಗುರುನಾಥ ಕೊಳ್ಳುರ್, ಎಸ್.ದಿವಾಕರ, ಬಾಬು ವಾಲಿ ಇತರರು ಭಾಗವಹಿಸುವರು ಎಂದು ಹೇಳಿದರು.

ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷರಾದ ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಪ್ರತಿ ವರ್ಷ ಈ ಶರಣ ಕಮ್ಮಟ ಅನುಭವ ಮಂಟಪ ಉತ್ಸವ ವ್ಯಾಪಕವಾಗಿ ಬೆಳೆಯುತ್ತಿದ್ದು, ಮುಂದೊಂದು ದಿನ ಇದು ರಾಷ್ಟ್ರಮಟ್ಟದ ಕಾರ್ಯಕ್ರಮವಾಗಿ ಹೊರಹೊಮ್ಮಲಿದೆ.

ನಿತ್ಯ ಸಾಮೂಹಿಕ ಯೋಗಾಭ್ಯಾಸ, ಸಾಮೂಹಿಕ ವಚನ ಪಾರಾಯಣ, ಪರಿಸರ ಜಾಗೃತಿಗಾಗಿ ಸೈಕಲ್ ರ್‍ಯಾಲಿ ಇತ್ಯಾದಿ ವಿಭಿನ್ನ ಕಾರ್ಯಕ್ರಮಗಳು ಜರುಗಲಿವೆ. ಪ್ರಸಾದಕ್ಕಾಗಿ ಹುಮನಾಬಾದ್‌ದಿಂದ ಈಗಾಗಲೆ 50 ಸಾವಿರ ಶೇಂಗಾ ಹೋಳಿಗೆ ಬಂದಿವೆ. ಶೇಂಗಾ ಚಟ್ನಿ, ಇತ್ಯಾದಿ ತಿನಿಸು ಪದಾರ್ಥಗಳು ತಲುಪಿವೆ ಎಂದವರು ತಿಳಿಸಿದರು.

ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಪೂಜ್ಯ ಗುರುಬಸವ ಪಟ್ಟದೇವರು, ಭಾರತೀಯ ಬಸವ ಬಳಗದ ರಾಜ್ಯಾಧ್ಯಕ್ಷ ಬಾಬು ವಾಲಿ, ಪ್ರಮುಖರಾದ ಆನಂದ ದೇವಪ್ಪ, ಶಕುಂತಲಾ ಬೆಲ್ದಾಳೆ, ಬಸವರಾಜ ಧನ್ನೂರ, ಜಯರಾಜ ಖಂಡ್ರೆ, ಹಾವಶೆಟ್ಟಿ ಪಾಟೀಲ್, ಚಂದ್ರಶೇಖರ ಹೆಬ್ಬಾಳೆ, ಶಶಿಕಾಂತ ದುರ್ಗೆ ಹಾಗೂ

### 2026ರ ಅಂತ್ಯದೊಳಗೆ ಅನುಭವ ಮಂಟಪ ನೂತನ ಕಟ್ಟಡದ ಉದ್ಘಾಟನೆ: ಈಶ್ವರ್ ಖಂಡ್ರೆ

2026ರ ಅಂತ್ಯದೊಳಗೆ ನೂತನ ಅನುಭವ ಮಂಟಪದ ಕಟ್ಟಡ ಕಾಮಗಾರಿ ಪೂರ್ಣಗೊಂಡು ಉದ್ಘಾಟನೆಗೊಳ್ಳಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಇಶ್ವರ್ ಖಂಡ್ರೆ ತಿಳಿಸಿದರು.

ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, 742ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಈ ಭವ್ಯ ಹಾಗೂ ಈತಿಹಾಸಿಕ ಅನುಭವ ಮಂಟಪಕ್ಕೆ ಮಾಜಿ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ತಮ್ಮ ಬಜೆಟ್‌ನಲ್ಲಿ ಘೋಷಿಸಿದ್ದರು. ಅದಕ್ಕೆ ಪ್ರತಿಯಾಗಿ 100 ಕೋಟಿ ನೀಡಿದ್ದರು. ನಮ್ಮ ಸರ್ಕಾರ ಬಂದ ಬಳಿಕ ಇಲ್ಲಿಯ ವರೆಗೆ 200 ಕೋಟಿ ನೀಡಿದ್ದು, ಉಳಿದ ಕಾಮಗಾರಿ ಗುಣಮಟ್ಟದಿಂದ ಪೂರ್ತಿಯಾಗಲು ಸಂಬಂಧಪಟ್ಟವರಿಗೆ ಸೂಚಿಸಲಾಗಿದೆ. ಒಟ್ಟಾರೆ ಈ ಅನುಭವ ಮಂಟಪ ವಿಶ್ವದ ಒಂದು ಪಾರಂಪರಿಕ ತಾಣವಾಗಿ ನಿಲ್ಲಲಿದೆ ಎಂದು ಖಂಡ್ರೆ ಹೇಳಿದರು.

# ದೇಶದ ಭವಿಷ್ಯ ಸಂವಿಧಾನದ ಪರಿಣಾಮಕಾರಿ ಅಳವಡಿಕೆಯಲ್ಲಿದೆ'

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಬದುಕುವ, ಸರ್ವರಿಗೂ ಸಮಪಾಲು, ಶತಮಾನದ ಶೋಷಣೆಗೆ ಮುಕ್ತಿ, ಧ್ವನಿಯಿಲ್ಲದವರಿಗೆ ಧ್ವನಿ, ಪ್ರಜಾಪ್ರಭುತ್ವ ವ್ಯವಸ್ಥೆ, ಎಲ್ಲರಿಗೂ ಸಮನಾದ ಒಂದೇ ಮತದಾನ ನೀಡಿದೆ. ದೇಶದ ಭವಿಷ್ಯ ಸಂವಿಧಾನದ ಪರಿಣಾಮಕಾರಿ ಅಳವಡಿಕೆಯಲ್ಲಿದೆ ಎಂದು ಹಿರಿಯ ಸಾಹಿತಿ, ಪ್ರಗತಿಪರ ಚಂತಕ ಡಾ.ಕೆ.ಎಸ್.ಬಂಧು ಅಭಿಮತಪಟ್ಟರು.

ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪವಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಾಲೇಜು, ಕೇಂದ್ರ ಸಂವಹನ ಇಲಾಖೆ, ಎನ್.ಎಸ್.ಎಸ್ ಘಟಕ ಮತ್ತು ಮೌಲಾನಾ ಅಜಾದ್ ಮಾದರಿಯ ಶಾಲೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಬುಧವಾರ ಏರ್ಪಡಿಸಲಾಗಿದ್ದ "76ನೇ ಸಂವಿಧಾನ ದಿನಾಚರಣೆ"ಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ಸಂವಿಧಾನವಿಲ್ಲದಿದ್ದರೆ ಜನ ಹೈವಾನವಾಗುತ್ತಾರೆ ಎಂದರು. ಸಿಬಿಸಿ ಉಪಾಧ್ಯಕ್ಷ ರವೀಂದ್ರಕುಮಾರ ವೈ. ಕೋಳಕೂರ ಮಾತನಾಡಿ, ದೇಶಕ್ಕೆ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಕೊಡುಗೆ ಅನನ್ಯವಾಗಿದೆ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಎಲ್ಲರೂ ಸಾಗಬೇಕು ಎಂದರು.




ಚಿಂತಕ ಭಗವಂತರಾಯ ಬೆಣ್ಣೂರ ವಿಶೇಷ ಉಪನ್ಯಾಸ ನೀಡಿದರು. ಜಿಲ್ಲಾ ಕನ್ನಡ ಜಾಗೃತಿ ಸಮಿತಯ ಸದಸ್ಯ ಕಾಶಿನಾಥ ಮಂದೇವಾಲ ಮತ್ತು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪತ್ರಕರ್ತ ಮರೆಪ್ಪ ಬೇಗಾರ ಅವರಿಗೆ ವಿಶೇಷವಾಗಿ ಸತ್ಕರಿಸಲಾಯಿತು.

ಕಾಲೇಜಿನ

ಪ್ರಾಚಾರ್ಯ ರವೀಂದ್ರಕುಮಾರ ಸಿ. ಬಟಗೇರಿ, ಶಿಕ್ಷಣ ಪ್ರೇಮಿ ಬಸವರಾಜ ಹಡಪದ, ಮೌಲಾನಾ ಆಜಾದ್ ಶಾಲೆಯ ಪ್ರಾಚಾರ್ಯೆ ಲಕ್ಷ್ಮೀ ನಾಯಕ, ಕೇಂದ್ರ ಸಂವಹನ ಇಲಾಖೆಯ ಸಹಾಯಕ ಅಧಿಕಾರಿ ನಾಗಪ್ಪ ಅಂಬಾಗೋಳ, ಕಾಲೇಜಿನ ಸಾಂಸ್ಕೃತಿಕ ಕಾರ್ಯದರ್ಶಿ ಮತ್ತು ಎನ್.ಎಸ್.ಎಸ್ ಅಧಿಕಾರಿ ಎಚ್.ಬಿ.ಪಾಟೀಲ್, ಕಲಾವಿದ ಕಲ್ಯಾಣರಾವ ಶ್ರೀಗಣಿ, ನಾರಾಯಣಸ್ವಾಮಿ ಸೇರಿದಂತೆ ಕಾಲೇಜಿನ ಉಪನ್ಯಾಕರು, ಮೌಲಾನಾ ಶಾಲೆಯ ಶಿಕ್ಷಕರು ಹಾಗೂ ಉಭಯ ಸಂಸ್ಥೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಿದ್ಯಾರ್ಥಿನಿಯರಾದ ಶಾರದಾ ಮತ್ತು ಮಲಕಮ್ಮ ಪ್ರಾರ್ಥಿಸಿದರು. ಉಪನ್ಯಾಸಕರಾದ ಕೀರ್ತಿ ಭುಜುರಕೆ ಸ್ವಾಗತಿಸಿದರು. ವೀರೇಶ ಗೋಗಿ ನಿರೂಪಿಸಿದರು. ಸುವರ್ಣಲತಾ ಭಂಡಾರಿ ವಂದಿಸಿದರು. ಸಂವಿಧಾನದ ಪ್ರಸ್ತಾವನೆಯನ್ನು ಸಾಮೂಹಿಕವಾಗಿ ವಾಚಿಸಲಾಯಿತು.

ದಿನಾಚರಣೆ ಪ್ರಯುಕ್ತ

ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ನಂತರ ಆಳಂದನ ಲೋಹಿಯಾ ಕಲಾ ತಂಡದವರಿಂದ ಸಂವಿಧಾನ ಜಾಗೃತಿಯ ಗೀತೆಗಳು, ನಾಟಕ ಪ್ರಸ್ತುತಪಡಿಸಲಾಯಿತು.




ಕಲಬುರಗಿ: ನಗರ ಸಂಚಾರ ಪೊಲೀಸ್ ವತಿಯಿಂದ ನಗರದಲ್ಲಿ ಹಮ್ಮಿಕೊಂಡಿದ್ದ ಹೆಲೆಟ್ ಜಾಗೃತಿ ಕಾರ್ಯಕ್ರಮಕ್ಕೆ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಉಪ ಪೊಲೀಸ್ ಆಯುಕ್ತ ಪ್ರವೀಣ್ ನಾಯ್, ಎಸಿಪಿ ಸುಧಾ ಆದಿ, ಇನ್ಸೆಕ್ಟರ್‌ಗಳಾದ ಶಕೀಲ್ ಅಹ್ಮದ್ ಅಂಗಡಿ, ಶಿವಾನಂದ ವಾಲಿಕಾರ ಹಾಗೂ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

# ಸಂವಿಧಾನ ಸಮರ್ಪಣ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಜಗತ್ ವೃತ್ತದ ಡಾ: ಅಂಬೇಡ್ಕರ ಪುತ್ಥಳಿ ಹತ್ತಿರದ ಆವರನದಲ್ಲಿ ಕರ್ನಾಟಕ ಸಮತಾ ಸೈನಿಕದಳ ಕೆಎಸ್‌ಎಸ್‌ಡಿ ಜಿಲ್ಲಾ ಸಮಿತಿ ಹಾಗೂ ವಿವಿಧ ಘಟಕದ ವತಿಯಿಂದ 76 ನೇ ವರ್ಷದ ಸಂವಿಧಾನ ಸಮರ್ಪಣ ದಿನಾಚರಣೆಯನ್ನು ಕೆಎಸ್‌ಎಸ್‌ಡಿ ರಾಜ್ಯ ಉಪಾಧ್ಯಕ್ಷರಾದ ಸಂಜೀವ ಟಿ ಮಾಲೆಯವರ ನೇತೃತ್ವದಲ್ಲಿ ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಸಂವಿಧಾನ ಬದ್ಧವಾಗಿ ಉತ್ತಮ ಸೇವೆಗೈದ ಮಹನೀಯರನ್ನು ಸನ್ಮಾನಿಸಲಾಯಿತು. ಸದರಿ ಕಾರ್ಯಕ್ರಮದಲ್ಲಿ ಮಾಜಿ ಸಿಂಡಿಕೇಟ್ ಸದಸ್ಯರಾದ ಡಾ. ಸುನಿಲಕುಮಾರ್ ಒಂಟಿ ಅವರು ಅತಿಥಿಗಳಾಗಿ ಆಗಮಿಸಿದರು, ಜಿಲ್ಲಾಧ್ಯಕ್ಷ ಈರಣ್ಣ ಜಾನೆ, ಮಹಾದೇವ ನಾಟಿಕರ್, ಮಲ್ಲಿಕಾರ್ಜುನ್ ಉದಯಕರ್, ವಿಜಯಕುಮಾರ್ ಉದ್ದಾ, ಶರಣು ಮದ್ನಾಳ, ಸಿದ್ದಾರ್ಥ್ ಕಣಮಸ್, ಶರಣು ಕಡಗಂಚಿ, ಅಮೃತರಾವ್ ನಾಯ್ಕೋಡಿ, ಸವಿತಾ ಒಂಟಿ, ಸಾಹಿತಿ ಬಾಬುರಾವ್ ಕಾಂಬಳೆ, ವಿಜಯಕುಮಾರ್ ಸಾವಳಗಿ, ಶಿವಮೂರ್ತಿ ಬಳಿಚಕ್ರ, ಇಂದುಬಾಯಿ ಭರತನೂರ, ಪದ್ಮ ಅಟ್ಟೂರ, ಜ್ಯೋತಿ ಎಸ್ ದರ್ಗಿ, ಕಪಿಲ್ ಜಾನೆ, ಮಲ್ಲು ನಂದೂರ್, ಕಾವೇರಿ ಗೋರಂಪಳ್ಳಿ, ಲಲಿತಾಬಾಯಿ ಬಿಲ್ಕರ್, ಉಮೇಶ್ ಪಾಳಾ ಸೇರಿದಂತೆ ಇನ್ನಿತರರು ಭಾಗವಹಿಸಿದ್ದರು. ಸಾಹಿತಿ ಎಂ. ಎನ್ ಸುಗಂಧಿ ರಾಜಾಪೂರ ಸಂವಿಧಾನ ಪೀಠಿಕೆ ಬೋಧಿಸಿದರು, ಈರಣ್ಣ ಜಾನೆ ಸ್ವಾಗತ ಮಾಡಿದರು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಪ್ಪಾರಾವ ಭಾವಿಮನಿ ವಂದನಾರ್ಪಣೆ ಮಾಡಿದರು.



ಕಲಬುರಗಿ: ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ಮನೆ ಮನೆಗೆ ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿಗಳ ಯಶಸ್ವಿಯನ್ನು ತಿಳಿಸುವ ಅಭಿಯಾನ ಪೋಸ್ಟರ್ ಬಿಡುಗಡೆಯನ್ನು ಉತ್ತರ ಕ್ಷೇತ್ರದ ಶಾಸಕಿ ಕನೀಜ್ ಫಾತಿಮಾ ಅವರು ಮಾಡಿದರು. ಈ ಸಂದರ್ಭದಲ್ಲಿ ಯುವ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಶಕೀಲ್ ಅಹಮದ್ ಸರಡಗಿ, ನೂರುಲ್ ಇಸ್ಲಾಂ, ಅಜ್ಜಲ್ ಗೋಲಾ, ಗೌಸ್ ಮತ್ತಿಮೂಡ್, ಪರಶುರಾಮ ನಾಟೀಕಾರ, ಕಾರ್ತಿಕ್ ನಾಟೇಕರ್, ಸಯ್ಯದ್ ರಾಖಿಬ್, ಅಸ್ಲಾಂ ಸಿಂದಗಿ, ಶರಪುದ್ದೀನ್ ಮಿಸ್ತ್ರಿ, ತಂಜಿಎಲ್ ಫರಾಜ್, ಮೊಹಮ್ಮದ್ ಆಸ್ವಾನ್, ಸಂಗಪಾಲ್ ಕಾಂಬಳೆ, ಫಾರೂಖ್ ಪಟೇಲ್ ಮುದಬಾಳ, ಮೊಹಮ್ಮದ್ ಆರಿಫ್, ಶೈಖ್ ಸಂರೀನ್ ಮತ್ತು ಶಾಹೀನ್ ಹಾಗೂ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

# ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಶ್ರಮಿಸುತ್ತಿರುವ ಎಲ್ಲಾ ಸ್ವಯಂ ಸೇವಾ ಸಂಘ ಸಂಸ್ಥೆಗಳು ಹಾಗೂ ಎಂ.ಆರ್.ಡಬ್ಲ್ಯೂ/ಯು.ಆರ್.ಡಬ್ಲ್ಯೂ/ವಿ.ಆರ್.ಡಬ್ಲ್ಯೂ. ಇವುಗಳ ಸಂಯುಕ್ತಾಶ್ರಯದಲ್ಲಿ 2025ರ ಡಿಸೆಂಬರ್ 3 ರಂದು ಬೆಳಿಗ್ಗೆ 10 ಗಂಟೆಗೆ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಕಲಬುರಗಿ ನಗರದ ಡಾ. ಎಸ್. ಎಂ. ಪಂಡಿತ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ

ಬಿ.ಆರ್. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್ ಅವರು ಗೌರವ ಉಪಸ್ಥಿತಿ ವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಎಂ.ವೈ. ಪಾಟೀಲ, ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಶಶೀಲ ಜಿ. ನಮೋಶಿ, ಚಂದ್ರಶೇಖರ ಪಾಟೀಲ, ಡಾ. ಬಿ.ಜಿ.ಪಾಟೀಲ, ಸುನೀಲ್ ವಲ್ಲ್ಯಾಪುರೆ, ಡಾ. ತಿಮ್ಮಣ್ಣಪ್ಪ ಕಮಕನೂರ, ಡಾ. ತಳವಾರ ಸಾಬಣ್ಣ, ಜಗದೇವ ಗುತ್ತೇದಾರ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮುಹಮ್ಮದ್ ಅಲಿ ಅಲ್ ಹುಸೇನಿ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣಕುಮಾರ್ ಎಂ.ವೈ. ಪಾಟೀಲ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಸೈಯ್ಯದ್ ಮಹೆಬೂಬ್ ಚಿಸ್ತಿ ಸಾಹೇಬ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಹಾಗೂ ಮಹಾನಗರಪಾಲಿಕೆ ಮಹಾಪೌರ ವರ್ಷಾ ರಾಜೀವ ಜಾನೆ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್, ಜೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಶಾಂತನು ಸಿನ್ಹಾ, ಕೆ.ಕೆ.ಆರ್.ಟಿ.ಸಿ. ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲಾ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ನಲಿನ್ ಅತುಲ್ ಹಾಗೂ ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಪಾಂಡ್ವೆ ರಾಹುಲ್ ತುಕಾರಾಮ್ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು. ಕಾರ್ಯಕ್ರಮದಲ್ಲಿ ಕಲಬುರಗಿ ಶರಣಬಸವೇಶ್ವರ ಕಲಾ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾದ ಡಾ. ಶಿವರಾಜ ಶಾಸ್ತ್ರೀ ಅವರು ಉಪನ್ಯಾಸ ನೀಡುವರು. "ಸಾಮಾಜಿಕ ಪ್ರಗತಿಯನ್ನು ಸಾಧಿಸಲು ವಿಕಲಚೇತನರನ್ನು ಒಳಗೊಂಡ ಸಮಾಜಗಳನ್ನು ರೂಪಿಸುವುದು" ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ವಿಶ್ವ ವಿಕಲಚೇತನರ

ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ದಿನಾಚರಣ ' ಅಂಗವಾಗಿ ವಿಕಲಚೇತನರ ದಿನಾಚರಣೆ ಕುರಿತು ಅರಿವು ಮೂಡಿಸುವ ಜಾಥಾ, ಬಹುಮಾನ

ವಿತರಣೆ, ವಿಶೇಷಚೇತನರಿಂದ/ವಿಶೇಷ ಶಾಲೆಗಳ ವತಿಯಿಂದ ಸಾಂಸ್ಕೃತಿಕ ಮತ್ತು

ನೃತ್ಯ/ಗಾಯನ ಕಾರ್ಯಕ್ರಮಗಳು, ಅಂಗವಿಕಲರ ವ್ಯಕ್ತಿಗಳ ಹಕ್ಕು ಅಧಿನಿಯಮ 2016 ಕಾಯ್ದೆ/ನಿಯಮಗಳ ಬಗ್ಗೆ ಉಪನ್ಯಾಸ ಕಾರ್ಯಕ್ರಮ ಹಾಗೂ ಅಲಿಂಕೋ ಮತ್ತು ಡಿ.ಡಿ.ಆರ್.ಸಿ. ಇವರಿಂದ ಸಾಧನ ಸಲಕರಣೆಗಳ ವಿತರಣೆ ಕಾರ್ಯಕ್ರಮ ಜರುಗಲಿದೆ.

# ನವೆಂಬರ್ 28 ರಂದು ನರ್ಸಿಂಗ್ ಸೀಟುಗಳ ಹಂಚಿಕೆ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:**–ಪ್ರಸಕ್ತ 2025–26ನೇ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಬಿ.ಎಸ್ಸಿ. ನರ್ಸಿಂಗ್ ಸೀಟುಗಳು ಹಂಚಿಕೆಯಾದ ನಂತರ ಉಳಿದ 02 ಸೀಟುಗಳನ್ನು ಇದೇ ನವೆಂಬರ್ 28 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಜೇವರ್ಗಿ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದಲ್ಲಿ ವಾಕ್–ಇನ್–ಅಡ್ಮಿಶನ್ (Walk-In Admission) ಮೂಲಕ ಹಂಚಿಕೆ ಮಾಡಲಾಗುತ್ತಿದೆ ಎಂದು ಜೇವರ್ಗಿ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ಪ್ರಾಂಶುಪಾಲರು ತಿಳಿಸಿದ್ದಾರೆ.

ಇದುವರೆಗೂ ಸಿ.ಇ.ಟಿ. ಮೂಲಕ ಯಾವುದೇ ಸೀಟು ಹಂಚಿಕೆಯಾಗದಿರುವ ಅಭ್ಯರ್ಥಿಗಳಿಗೆ ಸಿ.ಇ.ಟಿ. ಮೆರಿಟ್ ಸಂಖ್ಯೆ ಆಧಾರದ ಮೇಲೆ ಸೀಟುಗಳನ್ನು ಹಂಚಿ ಪ್ರವೇಶಾತಿ ನೀಡಲಾಗುತ್ತದೆ. ಆದ್ದರಿಂದ ಅರ್ಹ ಅಭ್ಯರ್ಥಿಗಳು ಮೇಲ್ಕಂಡ ದಿನದಂದು ನಡೆಯುವ ವಾಕ್–ಇನ್–ಅಡ್ಮಿಶನ್‌ಗೆ ಕಡ್ಡಾಯವಾಗಿ ತಮ್ಮ ಮೂಲ ದಾಖಲೆಗಳೊಂದಿಗೆ ಹಾಜರಾಗಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ

# ಅನ್ನ ಸಂತರ್ಪಣೆ ಹಾಗೂ ಕಂಬಳಿ ವಿತರಣೆ

ಕಲಬುರಗಿ: ನಗರದ ಬಿದ್ದಾಪೂರ ಕಾಲನಿಯಲ್ಲಿರುವ ನಿರಾಶ್ರೀತರ ಪರಿಹಾರ ಕೇಂದ್ರದಲ್ಲಿ ಭಾರತ ಸರ್ಕಾರದ ಜನಪ್ರಿಯ ಆಹಾರ ಮತ್ತು ನಾಗರೀಕ ಪೂರೈಕೆ, ನವಿಕರಣ ಇಂಧನ, ವ್ಯವಹಾರಗಳ ಜನಪ್ರಿಯ ಮಂತ್ರಿಗಳು ಹುಬ್ಬಳ್ಳಿ ಧಾರವಾಡದ ಸಂಸದ ಸದಸ್ಯರು ಹಾಗೂ ರಾಷ್ಟ್ರೀಯ ಬಿ.ಜೆ.ಪಿ. ನಾಯಕರಾದ ಪ್ರಹ್ಲಾದ ಜೋಶಿ ಜೀ ಅವರ 63ನೇ ಜನ್ಮದಿನದ ಪಯುಕ್ತ ನಿರಾಶ್ರೀತರಿಗೆ ಅನ್ನ ಸಂತರ್ಪಣೆ ಹಾಗೂ ಕಂಬಳಿ (ಃಟಚಿಟಿಞಜಣ) ವಿತರಿಸಲಾಯಿತು.

ಈ ಸಂದರ್ಭದಲ್ಲಿ ಫರಹತಾಬಾದ ಕೇಸರಿ ಬೆಟ್ಟದ ಪರಮ ಪೂಜ್ಯ ಉಪಚಾರ್ಯ ರತ್ನ ಶ್ರೀ ಷ.ಬ್ರ, ಬಾಲ ತಪಸ್ವಿ ದ್ವಿತೀಯ ಸಾಂಬ ಶಿವಾಚಾರ್ಯ ಮಹಾಸ್ವಾಮಿಗಳು, ಕಡಗಂಚಿ ಕೇಂದ್ರೀಯ ವಿಶ್ವ ವಿದ್ಯಾಲಯ ಕುಲಸಚಿವರಾದ ಪ್ರೊ, ಆರ್. ಆರ್. ಬಿರಾದಾರ, ಬಿಜೆಪಿ ಹಿರಿಯ ಮುಖಂಡ ಸುಭಾಷ್ ಬಿರಾದಾರ ಕಮಲಾಪೂರ, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಕರ್ನಾಟಕ ಸರ್ಕಾರದ ನೀ ಪೂ ನಿರ್ದೇಶಕ ಜಗದೀಶ್ ಹುನಗುಂದ, ಕಾರ್ಯಕ್ರಮದ ಸಯೋಜಕರು, ಬಿಜೆಪಿ ಮುಖಂಡರು ಹಾಗೂ (ಎ.ಬಿ.ಬಿ.ಎಮ್.ಎಸ್.) ರಾಜ್ಯ ಕಾರ್ಯದರ್ಶಿ ಗುರುರಾಜ ಭರತನೂರ್, ಅವಿನಾಶ್ ಕುಲಕರ್ಣಿ, ಮುಕುಂದ ದೇಶಪಾಂಡೆ ಸೇಡಂ, ಬಸರಾಜ ಮದ್ರಿಕಿ, ಶಿವಾ ಅಷ್ಟಗಿ, ಗೋಪಾಲ ಕೃಷ್ಣ ಕುಲಕರ್ಣಿ , ಪ್ರದೀಪ್ ಕುಲಕರ್ಣಿ, ಮಂಜುನಾಥ್




ಕಲಬುರಗಿ: ನಗರದ ಶ್ರೀಮತಿ ಪಿಲ್ಲೂ ಹೋಮಿ ಇರಾಣಿ ಮಹಿಳಾ ಮಹಾವಿದ್ಯಾಲಯದಲ್ಲಿ "ಸಂವಿಧಾನ ಸಮರ್ಪಣಾ" ದಿನವನ್ನು ಸಂವಿಧಾನ ಪೀಠಿಕೆ ಪ್ರತಿಜ್ಞಾವಿಧಿ ಭೋದಿಸಲಾಯಿತು. ಮತ್ತು ವಿದ್ಯಾರ್ಥಿನೀಯರು ಸಂವಿಧಾನದ ಪಯಣ ಹಾಗೂ ಸಂವಿಧಾನದ ಪೀಠಿಕೆಯನ್ನು ನೃತ್ಯದ ಮೂಲಕ ಅಭಿವ್ಯಕ್ತಪಡಿಸಿದರು. ಈ ದಿನದ ಅಂಗವಾಗಿ ಮಹಾವಿದ್ಯಾಲಯದಲ್ಲಿ ಪ್ರಬಂಧ ಸ್ಪರ್ಧೆ, ರಂಗೋಲಿ ಸ್ಪರ್ಧೆ ಏರ್ಪಡಿಸಲಾಯಿತು. ಹೀಗೆ ಸಂವಿಧಾನ ಸಮರ್ಪಣಾ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಮುಖ್ಯ ಅತಿಥಿಗಳಾಗಿ ವಕೀಲರು ಹಾಗೂ ಸಿದ್ದಾರ್ಥ ಕಾನೂನು ಮಹಾವಿದ್ಯಾಲಯ ರಾಜ್ಯಶಾಸ್ತ್ರ ಉಪನ್ಯಾಸಕ ಪ್ರೋ.ಮಹಾಂತೇಶ ಬಿದನೂರ ಮಾತನಾಡಿದರು. ಮಹಾವಿದ್ಯಾಲಯದ ಪ್ರಾಂಶುಪಾಲರು ಹಾಗೂ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಡಾ: ಜ್ಯೋತಿ ಎಮ್. ಸ್ವಾಮಿ, ರಾಜ್ಯಶಾಸ್ತ್ರ ಉಪನ್ಯಾಸಕರಾದ ಶ್ರೀಮತಿ ಗೌರಿ ಬೇಟಿಗೇರಿ, ಕುಮಾರಿ ಕಾಂಬಳೆ ಸಿಬ್ಬಂದಿವರ್ಗ ದೇವಿಕಾ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಲಬುರಗಿಯಲ್ಲಿ ಮೂರು ದಿನಗಳ ಕಾಲ ಆಹಾರ ಆಯೋಗದಿಂದ ಪರಿಶೀಲನೆ–ಡಾ.ಹೆಚ್. ಕೃಷ್ಣ

ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಆಹಾರ ಭದ್ರತೆ ಕಾಯ್ದೆಯ ಸಮರ್ಪಕ ಅನುಷ್ಠಾನ ಮತ್ತು ಲೋಪದೋಷ ಸರಿಪಡಿಸುವ ನಿಟ್ಟಿನಲ್ಲಿ ಆಯೋಗವು ಇಂದಿನಿಂದ 3 ದಿನಗಳ ಕಾಲ ಕಲಬುರಗಿಯಲ್ಲಿ ಪ್ರವಾಸಕ್ಕೆಗೊಂಡಿದ್ದು, ಶಾಲಾ, ಆಸ್ಪತ್ರೆ, ವಸತಿ ನಿಲಯ, ಅಂಗನವಾಡಿಗೆ ಭೇಟಿ ನೀಡಿ ಆಹಾರ ಸುರಕ್ಷತೆ ಮತ್ತು ಪೂರೈಕೆಯ ಗುಣಮಟ್ಟದ ಕುರಿತು ಪರಿಶೀಲನೆ ನಡೆಸಲಿದೆ ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ.ಹೆಚ್. ಕೃಷ್ಣ ಹೇಳಿದರು

ಗುರುವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ನಡೆಸಿದ ಅವರು, ಸದಸ್ಯರು ಪ್ರತಿ ತಾಲೂಕಿಗೆ ಭೇಟಿ ನೀಡಿ ಅನಿರೀಕ್ಷಿತವಾಗಿ ವಸತಿ ನಿಲಯ, ನ್ಯಾಯ ಬೆಲೆ ಅಂಗಡಿ, ಮಧ್ಯಾಹ್ನ ಬಿಸಿಯೂಟ, ಪ್ರಾಥಮಿಕ ಆರೋಗ್ಯ ಕೇಂದ್ರ, ಜಿಲ್ಲಾ ಮತ್ತು ತಾಲೂಕು ಆಸ್ಪತ್ರೆಗಳಿಗೆ ಭೇಟಿ ನೀಡಿ ಪರಿಶೀಲಿಸಲಿದ್ದಾರೆ ಎಂದರು.

ಅನ್ನ ಭಾಗ್ಯ ಯೋಜನೆಯಡಿ ನೀಡಲಾಗುವ ಅಕ್ಕಿ ಅಕ್ರಮವಾಗಿ ಕಾಳಸಂತೆಯಲ್ಲಿ ಮಾರಾಟ ಮತ್ತು ಸಾಗಾಟದ ಬಗ್ಗೆ ವ್ಯಾಪಕ ದೂರು ಬಂದಿವೆ. ಹೀಗಾಗಿ ಆಯೋಗ ಇದೆಲ್ಲದರ ಬಗ್ಗೆ ಪರಿಶೀಲನೆ ಮಾಡಲಿದೆ. ಗೋಡೌನ್ ಗಳಿಗೆ ಹಠಾತ್ ಭೇಟಿ ನೀಡಲಿದೆ. ಅನ್ನ ಭಾಗ್ಯ ಮತ್ತು ಆಹಾರ ಭದ್ರತೆಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಏನೇ ಅಕ್ರಮ, ಲೋಪದೋಷಗಳಿದಲ್ಲಿ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಇದರಿಂದ ಬಾಧಿತ ವ್ಯಕ್ತಿಗಳು ಆಯೋಗದ ಸದಸ್ಯರನ್ನು ಸಂಪರ್ಕಿಸಬಹುದಾಗಿದೆ ಎಂದು ಆಯೋಗದ ಅಧ್ಯಕ್ಷ ಡಾ.ಹೆಚ್. ಕೃಷ್ಣ ತಿಳಿಸಿದರು.

ಇನ್ನು ಆಯೋಗದ ಎಲ್ಲಾ ಸದಸ್ಯರು ತಾಲೂಕಾ ಪ್ರವಾಸ ಮುಗಿಸಿದ ನಂತರ ಶನಿವಾರ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಲಾಗುತ್ತದೆ. ಅಲ್ಲಿ ಜಿಲ್ಲೆಯಲ್ಲಿ ಆಯೋಗಕ್ಕೆ ಕಂಡುಬಂದ ನ್ಯೂನತೆಗಳನ್ನು ಮತ್ತು ಸಮಸ್ಯೆಗಳನ್ನು ಪರಿಹರಿಸುವಂತೆ ನಿಟ್ಟಿನಲ್ಲಿ ಜಿಲ್ಲಾಡಳಿತಕ್ಕೆ ನಿರ್ದೇಶನ ನೀಡಲಾಗುವುದು ಎಂದರು.



ಸಭೆಯಲ್ಲಿ ಆಯೋಗದ ಸದಸ್ಯರಾದ ಲಿಂಗರಾಜ ಕೋಟೆ, ಸುಮಂತ್ ರಾವ್, ಮಾರುತಿ ಎಂ. ದೊಡ್ಡಲಿಂಗಣ್ಣವರ, ಎ.ರೋಹಿಣಿ ಪ್ರಿಯ, ಕೆ.ಎಸ್.ವಿಜಯಲಕ್ಷ್ಮಿ, ಅಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಭಾರಿ ಉಪನಿರ್ದೇಶಕ ಮುನಾವರ ದೌಲಾ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಡಿ.ಎಚ್.ಓ ಡಾ.ಶರಣಬಸಪ್ಪ ಕ್ಯಾತನಾಳ, ಡಿ.ಡಿ.ಪಿ.ಐ ಸುರ್ಯಕಾಂತ ಮದಾನೆ, ಕಾನೂನು ಮಾಪನಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕ ರಫೀಕ್ ಲಾಡಜಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

## ಹಿರಿಯ ಜೀವಿಗಳು ನಮಗೆ ಮಾರ್ಗದರ್ಶಕರು
# ಹಿರಿಯರನ್ನು ಗೌರವಿಸಲು ಸಲಹೆ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಹಿರಿಯ ಜೀವಿಗಳು ನಮಗೆ ಮಾರ್ಗದರ್ಶಕರು ಇದ್ದರು ಸಹ ಮನುಷತ್ವ ಗುಣ ಬೆಳೆಸಿಕೊಳ್ಳಬೇಕು ಹಾಗೆಯೇ ಹಿರಿಯರನ್ನು ಗೌರವಿಸಬೇಕು, ಹಿರಿಯ ನಾಗರಿಕರ ಬಗ್ಗೆ ಕಾನೂನು ಸೌಲಭ್ಯಗಳು ಬಗ್ಗೆ ಸಲಹೆ ನೀಡಲಾಯಿತು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯಕಾರ್ಯದರ್ಶಿಗಳು ಹಾಗೂ ಜಿಲ್ಲಾ ಸಿವಿಲ್ ನ್ಯಾಯಾಧೀಶರಾದ ಗೌರವಾನ್ವಿತ ಮರಿಯಪ್ಪ ಅವರು ಹೇಳಿದರು. ಅಬ್ಬೆತುಮಕೂರ ಗ್ರಾಮದಲ್ಲಿ ಯಾದಗಿರಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರಿನ ನೈಟಿಂಗಲ್ ಮೆಡಿಕಲ್ ಟ್ರಸ್ಟ್, ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಯಾದಗಿರಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ ಸಂಯುಕ್ತಾಶ್ರಯದಲ್ಲಿ ವಿಶ್ವಹಿರಿಯ ನಾಗರಿಕರ ದಿನಾಚರಣೆ, ಹಿರಿಯ ನಾಗಿಕರಿಗೆ ಕ್ರೀಡೆ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಹಿರಿಯ ಜೀವಿಗಳು ನಮಗೆ ಮಾರ್ಗದರ್ಶಕರು ಇದ್ದರು ಸಹ ಮನುಷತ್ವ ಗುಣ ಬೆಳೆಸಿಕೊಳ್ಳಬೇಕು ಹಾಗೆಯೇ ಹಿರಿಯರನ್ನು ಗೌರವಿಸಬೇಕು, ಹಿರಿಯ ನಾಗರಿಕರ ಸೌಲಭ್ಯಗಳ ಸಲಹೆ ನೀಡಿದರು.

ಯಾದಗಿರಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶರಣಪ್ಪ ಪಾಟೀಲ್ ಅವರು ಮಾತನಾಡಿದರು, ಹಿರಿಯ ನಾಗರಿಕರ ಸರ್ಕಾರಿ ಸೌಲಭ್ಯಗಳ ಬಗ್ಗೆ ಮಾಹಿತಿಗಳನ್ನು ನೀಡಿದರು, ಹಿರಿಯರು ಯಾರಿಗು ಹೊರೆಯಲ್ಲಾ ಅವರು ಮನೆಗೆ ಒಂದು ಕಣ್ಣು ಇದ್ದಾಗೆ, ಹಿರಿಯರ ಬಗ್ಗೆ ಕಾಳಜಿ ವಹಿಸಬೇಕು ಎಂದರು.

ಡಾ.ವಿನಯ ಪಾಟೀಲ್ ಅವರು ಮಾತನಾಡಿದರು, ಹಿರಿಯ ನಾಗರಿಕರು ಇಳಿ ವಯಸಿನ ಕಾಲದಲ್ಲಿ ಯಾವ ರೀತಿ ಆಹಾರ ಪದ್ಧತಿ ಅಳವಡಿಸಿಕೊಳ್ಳಬೇಕು ಹಾಗೂ ಸ್ವಚ್ಛೆಯಿಂದ ಇದ್ದರೆ ರೋಗರುಜಿನುಗಳು ಬರುವುದಿಲ್ಲಾ ಎಂದು ಕಿವಿ ಮಾತು ತಿಳಿಸಿದರು.

ಈ ಸಂದರ್ಭದಲ್ಲಿ ಸುರೇಕಾಂತ್ ಕರದಳ್ಳಿ.ಆರ್ ಮಹಾದೇವಪ್ಪ ಅಬ್ಬೆತುಮಕೂರ ಸಿದ್ದಲಿಂಗಪ್ಪ ಹಿರಿಗೌಡ ವಿಶ್ವನಾಥ ಆಲೂರು ಸಾಮವೇಲ, ಸುರೇಶಬಾಬ ಪ್ರವೀಣಕುಮಾರ ಮರೆಪ್ಪಬಡಿಗೇರಾ, ಹಿರಿಯ ನಾಗರಿಕರು, ಸಿಬ್ಬಂದಿ ಶ್ರೀಮತಿ ರೇಣುಕಾ ಎಂ.ಶ್ರೀಮತಿ ವಿಜಯಲಕ್ಷ್ಮೀ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ವಿಶ್ವನಾಥ ರೆಡ್ಡಿ ಅಬ್ಬೆತುಮಕೂರು ಉಪಸ್ಥಿತರಿದ್ದರು. ಕಾರ್ಯಕ್ರಮ ಪ್ರಾರ್ಥನ ಗೀತೆ ಶ್ರೀಮತಿ ಯಶೋಧ ಯು.ಪಿ. ನಿರೂಪಿದರು. ಶ್ರೀಮತಿ ಲಲಿತಾ ಕಡಕಲ್ ಸ್ವಾಗತಿಸಿದರು. ಡಾ.ಗೀತಾ ಕಂಬಾರ ಕಾರ್ಯಕ್ರಮದ ವಂದನಾರ್ಪಣೆ ನೆರವೇರಿಸಿದರು.

# ಗ್ರಾಮ ಪಂಚಾಯಿತಿಗಳಲ್ಲಿ ಒಂದು ದಿನದ ಕರ ವಸೂಲಿ ವಿಶೇಷ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನವೆಂಬರ್ ಗ್ರಾಮ ಪಂಚಾಯಿತಿಗಳ ಆದಾಯದ ಮೂಲ ಕರ ಸಂಗ್ರಹಿಸಲು ಜಿಲ್ಲೆಯ ಪಂಚಾಯತದಿಂದ ಗ್ರಾಮ ಪಂಚಾಯಿತಿಗಳಲ್ಲಿ ಹಮ್ಮಿಕೊಂಡ ಒಂದು ದಿನದ ಕರ ವಸೂಲಿ ವಿಶೇಷ ಅಭಿಯಾನದಲ್ಲಿ ಪ್ರತಿ ಗ್ರಾಮ ಪಂಚಾಯತಿದಿಂದ 2 ಲಕ್ಷ ರೂ.ಗಳ ತೆರಿಗೆ ಸಂಗ್ರಹವಾಗುಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಅಧಿಕಾರಿ ಸಿ.ಬಿ.ದೇವರಮನಿ ಅವರು ಹೇಳಿದರು.

ಗ್ರಾಮ ಪಂಚಾಯಿತಿಗಳ ತೆರಿಗೆ ಸಂಗ್ರಹದಲ್ಲಿ ಕರ್ನಾಟಕ ರಾಜ್ಯದಲ್ಲಿ ಯಾದಗಿರಿ ಜಿಲ್ಲೆ ಕೊನೆ ಸ್ಥಾನದಲ್ಲಿದ್ದ ಹಿನ್ನಲೆಯಲ್ಲಿ ನಿರ್ದೇಶನದಂತೆ ನ.27 ರಂದು ಜಿಲ್ಲೆಯಲ್ಲಿ ಹಮ್ಮಿಕೊಂಡ 2 ಕೋಟಿ ಕರ ಸಂಗ್ರಹ ಒಂದು ದಿನದ ವಿಶೇಷ ಅಭಿಯಾನದ ಅಂಗವಾಗಿ ಯಾದಗಿರಿ ತಾಲೂಕಿನ ರಾಮುಸಮದ್ರ, ಬಳಿಚಕ್ರ, ಅರಿ-ಕೇರಾ.ಕೆ, ಹಾಗೂ ಗುರುಮಿಠಕಲ್ ತಾಲ್ಲೂಕಿನ ಪಸಪುಲ್, ಕಂದಕೂರ, ಯಲ್ಹೇರಿ, ಕಾಳೆಬೆಳಗುಂದಿ ಗ್ರಾಮ ಪಂಚಾಯಿತಿಗಳಲ್ಲಿ ಭೇಟಿ ನೀಡಿ, ಬಾಕಿ ಇರುವ ಹಾಗೂ ಪ್ರಸಕ್ತ ಸಾಲಿನ ಕರ ವಸೂಲಿ ಮಾಡಲು




ಗ್ರಾಮದ ಪ್ರತಿ ಮನೆ ಮನೆಗೆ ಭೇಟಿ ನೀಡಿ, ನಿಗದಿತ ಕರ ವಸೂಲಿ ಮಾಡಬೇಕು ಎಂದು ಸೂಚಿಸಿದರು.

ಜಿಲ್ಲೆಯ ಪ್ರತಿ ತಾಲೂಕಿಗೆ ಜಿಲ್ಲಾ ಪಂಚಾಯಿತಿ ನೀಡಿದ 2 ಕೋಟಿ ಕರ ಸಂಗ್ರಹಿಸುವ ನಿಗದಿತ ಗುರಿ ಹಾಗೂ ನಿರ್ದೇಶನದಂತೆ ನವೆಂಬರ್ 27 ರಂದ 2 ಕೋಟಿ ಕರ ಸಂಗ್ರಹಿಸುವ ಒಂದು ದಿನದ ವಿಶೇಷ ಅಭಿಯಾನದ ಗ್ರಾಮ ಪಂಚಾಯಿತಿಗಳಲ್ಲಿ ಪಿಡಿಒ, ಕಾರ್ಯದರ್ಶಿ, ಕರವಸೂಲಿಗಾರರು, ಜಿಲ್ಲಾ ಐಇಸಿ ಸಂಯೋಜಕರು, ಎನ್‌ಆರ್‌ಎಲ್‌ಎಮ್ ಮಹಿಳಾ ಸ್ವಸಹಾಯ ಸಂಘದ ಸಂಪನ್ಮೂಲ ವ್ಯಕ್ತಿಗಳು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಸದಸ್ಯರು ಸೇರಿ ಮನೆ-ಮನೆಗೆ ಭೇಟಿ ನೀಡಿ ಕರ ವಸೂಲಿ ಬಗ್ಗೆ ಗ್ರಾಮದ ಜನರಲ್ಲಿ ಜಾಗೃತಿ ಮೂಡಿಸಿ, ಕರ ಪಾವತಿಸುವಂತೆ ಮನವೊಲಿಸಿ ತೆರಿಗೆ ಸಂಗ್ರಹಿಸಲಾಯಿತು.

ಗ್ರಾಮ ಪಂಚಾಯಿತಿಗಳು ಅನುಷ್ಠಾನ ಮಾಡುವ ವಿವಿಧ ಅಭಿವೃದ್ಧಿ ಕಾಮಗಾರಿ ಹಾಗೂ ಕಾರ್ಯಕ್ರಮಗಳ ನಿರ್ವಹಣೆಗೆ ಸರಕಾರ ನೀಡುವ ಅನುದಾನದತ್ತ ನೋಡುವುದು ಕಡಿಮೆಯಾಗಬೇಕು. ಗ್ರಾಮ ಪಂಚಾಯಿತಿಗಳ ಆದಾಯದ ಮೂಲ ಕರ ಸಂಗ್ರಹ ಮಾಡಲು ಮುಂದಾಗಬೇಕು. ತೆರಿಗೆ ಸಂಗ್ರಹದಲ್ಲಿ ಗುರಿ ಮಿರಿದ ಸಾಧನೆ ಮಾಡಲು ಕರ ವಸೂಲಿಗೆ ಪ್ರಥಮ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಯಾದಗಿರಿ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಹಾದೇವ ಬಬಲಗಿ, ಗುರುಮಿಠಕಲ್ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿ ಅಮರೇಶ ಪಾಟೀಲ್, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಐಇಸಿ ಸಂಯೋಜಕರಾದ ಪರಶುರಾಮ, ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಗ್ರಾಮಚಾಯತಿ ಸದಸ್ಯರು ಉಪಸ್ಥಿತರಿದ್ದರು.

# ಜನ ಸುರಕ್ಷಾ ಯೋಜನೆ ಜಾಗೃತಿ ಮೂಡಿಸಿ : ಸಿಇಒ ಲವೀಶ್ ಒರಡಿಯಾ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : : ಕುಟುಂಬಗಳ ಆರ್ಥಿಕ ಸುರಕ್ಷತೆಗೆ ಪೂರಕವಾದ ಜನ ಸುರಕ್ಷಾ ಯೋಜನೆ ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ಹಾಗೂ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ವಿಮಾ ಯೋಜನೆಗಳ ಮಹತ್ವದ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಡಿಸಿಸಿ, ಡಿಎಲ್‌ಆರ್‌ಸಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಭಾರತೀಯ ಸ್ಟೇಟ್ ಬ್ಯಾಂಕ್, ಲೀಡ್ ಬ್ಯಾಂಕ್, ಸರ್ಕಾರ ಮಹತ್ವಾಕಾಂಕ್ಷಿ ಯೋಜನೆಗಳ ಪ್ರಗತಿ ಕುರಿತು ಚರ್ಚಿಸಲಾಯಿತು, ಪಿಎಂಎಸ್‌ಬಿವೈ ಪಿಎಂಜೆಜೆಬಿವೈ ಯೋಜನೆಯಡಿ ನೋಂದಣಿಯಾಗಿ ಮೃತರಾದ ಕುಟುಂಬದ ಸದಸ್ಯರಿಗೆ ನಾಲ್ಕು ಲಕ್ಷ ರೂ ಪರಿಹಾರ ಚೆಕ್ ವಿತರಣೆ ಮಾಡಿದರು ಮತ್ತು ಮುದ್ರಾ, ಉದ್ಯೋಗಿನಿ, ಟ್ಯಾಕ್ಸಿ ಫಲಾನುಭವಿಗಳಿಗೆ ಆರ್ಥಿಕವಾಗಿ ಸಬಲರಾಗಲು 2 ಲಕ್ಷ ರೂ.ಗಳ ಚೆಕ್ ವಿತರಣೆ ಮಾಡಲಾಯಿತು.

ಗ್ರಾಮೀಣ ಪ್ರದೇಶದ ಪ್ರತಿ ಕುಟುಂಬದ ಭವಿಷ್ಯದ ಆರ್ಥಿಕ ಸುರಕ್ಷತೆ ಹಾಗೂ ಭದ್ರತೆಗೆ ಸರಕಾರ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಹಾಗೂ ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ವಿಮಾ ಯೋಜನೆ ಜಾರಿಗೊಳಿಸಿ,18 ವರ್ಷ ಮೇಲ್ಪಟ್ಟವರು ಈ ವಿಮೆಯಡಿ ಹೆಸರು ನೋಂದಣಿಗೆ ಅರ್ಹರಾಗಿದ್ದು, ಪ್ರತಿಯೊಬ್ಬರೂ ಈ ಜನ ಸುರಕ್ಷಾ ಯೋಜನೆಯ ಲಾಭ ಪಡೆಯಲು ಜನರಲ್ಲಿ ಜಾಗೃತಿ ಮೂಡಿಸಿ, ಹೆಸರು ನೋಂದಣಿಗೆ ಪ್ರೋತ್ಸಾಹ ನೀಡಿ ಎಂದು ಸೂಚಿಸಿದರು.

ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ವಿಮಾ ಯೋಜನೆಗೆ ವಾರ್ಷಿಕ 20 ರೂ.ಗಳು ಹಾಗೂ ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ವಿಮಾ ಯೋಜನೆಗೆ ವಾರ್ಷಿಕ 436 ರೂ. ಗಳು ಪಾವತಿಸಿ, ಎರಡು ವಿಮಾ ಯೋಜನೆಯಡಿ ಹೆಸರು ನೋಂದಾಯಿಸಿದರೆ ಪ್ರತಿ ವರ್ಷ 456 ರೂ. ಪಾವತಿಸಿದರೆ, ವಿಮೆ ಮಾಡಿಕೊಂಡ ವ್ಯಕ್ತಿ ಅಪಘಾತದಲ್ಲಿ ಮೃತಪಟ್ಟರೆ ಎರಡು ವಿಮೆ ಸೇರಿ ಒಟ್ಟು 4 ಲಕ್ಷ ರೂ.ಗಳ ಮೃತನ ಕುಟುಂಬಕ್ಕೆ ಸೇರುತ್ತದೆ ಎಂದು ಜನರಿಗೆ ಮನವರಿಕೆ ಮಾಡಿ ಎಂದರು.

ಅಪಘಾತದಲ್ಲಿ ಅಂಗವೈಕಲ್ಯ ಉಂಟಾದರೆ 1ಲಕ್ಷ ರೂ.ಗಳ ಪರಿಹಾರ ಸಿಗುತ್ತದೆ. ಸಾಮಾನ್ಯ ಸಾವು ಉಂಟಾದರೆ, ಮೃತನ ಕುಟುಂಬಕ್ಕೆ 2 ಲಕ್ಷ ರೂ. ಗಳ ಪರಿಹಾರ ರೂಪದಲ್ಲಿ ಆರ್ಥಿಕ ಸಹಾಯ ಸಿಗುತ್ತದೆ ಎಂದು ಜಾಗೃತಿ ಮೂಡಿಸಿ ಎಂದರು.

ಜನ ಸುರಕ್ಷಾ ಯೋಜನೆಗಳಡಿ ಹೆಸರು ನೋಂದಾಯಿಸಿಕೊಂಡ ವ್ಯಕ್ತಿ ಮೃತಪಟ್ಟ ಹಿನ್ನಲೆಯಲ್ಲಿ ಮೃತನ ಕುಟುಂಬದ ಅವಲಂಬಿತರಿಗೆ ವಿಮೆಯ ಪರಿಹಾರ ಧನದ ಚೆಕ್‌ಗಳನ್ನು ಬ್ಯಾಂಕ್‌ಗಳ ವ್ಯವಸ್ಥಾಪಕರ ಸಮ್ಮುಖದಲ್ಲಿ ಜಿಲ್ಲಾ ಪಂಚಾಯತ ಸಿಇಒ ಶ್ರೀ ಲವೀಶ್ ಒರಡಿಯಾ ಅವರು ವಿತರಿಸಿದರು.

ಸರಕಾರದ ಸಾಮಾಜಿಕ ಭದ್ರತಾ ವಿಮಾ ಯೋಜನೆ ಪಿಎಂಎಸ್‌ಬಿವೈ ಪಿಎಂಜೆಜೆಬಿವೈ ಕುರಿತು ಗ್ರಾಮೀಣ ಜನರಲ್ಲಿ ಹೆಚ್ಚು ಪ್ರಚಾರ ಮಾಡಿ ವಿಮೆಯಡಿ ಹೆಸರು ನೋಂದಣಿಗೆ ಅರ್ಜಿ ಸ್ವೀಕರಿಸುವಲ್ಲಿ ಸಹಕರಿಸಿದ ಜಿಲ್ಲೆಯ ಅಧಿಕಾರಿಗಳಿಗೆ ಯಾದಗಿರಿ ಜಿಪಂ ಅಇಔ ಶ್ರೀ ಲವೀಶ್ ಒರಡಿಯಾ ಅವರು ಪ್ರಶಂಸನಾ ಪತ್ರ ನೀಡಿ, ಗೌರವಿಸುವ ಮೂಲಕ ಅಭಿನಂಧಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವೆಂಕಟೇಶ ಚಟ್ನಳಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರು ದೇವರಮನಿ, ಹರಿಬನ್ಸ್ ನಾರಾಯಣ ಸಿಎಂ ಕ್ರೆಡಿಟ್ ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಸುನೀಲ್ ಬತ್ತಿನಿ, ಪೈ ಡಿಡಿಎಂ ನಬಾರ್ಡ ಶ್ರೀಮತಿ ಯಮುನಾ, ಬೆಂಗಳೂರು ಭಾರತೀಯ ರಿಸರ್ವ್ ಬ್ಯಾಂಕ್ ಶ್ರೀಮತಿ ನೀಶಾ ಠಾ-ಕೂರ್, ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕರು ಜಿ.ಎಸ್ ಕೂಡ್ಲಿಗಿ, ಲೀಡ್ ಬ್ಯಾಂಕ್ ಸಿಬ್ಬಂದಿ ಕುಮಾರ ಸ್ವಾಮಿ, ಅಮೀರ್ ಪಟೇಲ್ ಇನ್ನಿತರರು ಅಧಿಕಾರಿಗಳು ಉಪಸ್ಥಿತರಿದ್ದರು.

# ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ನ. ಮಕ್ಕಳ ಹಕ್ಕುಗಳನ್ನು ಉಲ್ಲಘನೆ ಆಗದಂತೆ ನೋಡಿಕೊಳುವುದು ಮತ್ತು ಅವರ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಮೇಶ ಸುಲ್ಪಿ ಹೇಳಿದರು.

ತಾಲ್ಲೂಕಿನ ನಾರಾಯಣಪೂರ ಗ್ರಾಮದ ಸರಕಾರಿ ಶಾಲೆಯಲ್ಲಿ ಗುರುವಾರ ಹಮ್ಮಿಕೊಂಡ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿ ಇಂದಿನ ಮಕ್ಕಳು ಇಂದಿನ ಪ್ರಜೆಗಳು ಮಾತಿನಂತೆ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ಆರೋಗ್ಯ ಸೇರಿದಂತೆ ಅವರ ಹಕ್ಕಿನಿಂದ ವಂಚಿತ ರಾಗದಂತೆ ಕೆಲವು ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದರು.

ಕ್ರೀಡೆ, ಸಾಂಸ್ಕೃತಿ, ಶೈಕ್ಷಣಿಕ, ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಮತ್ತು ಮಕ್ಕಳ ಹಕ್ಕುಗಳ ರಕ್ಷಣೆಯ ಪೇಸ್ ಬುಕ್ ಪೇಜ್ ರಚಿಸುವುದು, ಮಕ್ಕಳ ದೂರು ಪೆಟ್ಟಿಗೆ ಅಳವಡಿಸುವುದು ಮತ್ತು ಜನವಸತಿ, ವಾರ್ಡ್ ಗ್ರಾಮ



ಮಟ್ಟದಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆ ಹಮ್ಮಿಕೊಳ್ಳುವ ಮೂಲಕ ಮಕ್ಕಳ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು. ಗ್ರಾಮ ಪಂಚಾಯತ್ ಉಪಾಧ್ಯಕ್ಷರಾದ ಚೇತನ ಕಾಡೆ ಅವರು ಮಾತನಾಡಿ ನಿಮ್ಮ ಸಮಸ್ಯೆಗಳು ನಮ್ಮ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬಂದರೆ ಖಂಡಿತವಾಗಿ ಶೀಘ್ರದಲ್ಲಿ ಎಲ್ಲವು ಇಡೇರಿಸಿ ಕೊಡುತ್ತೇವೆ ಎಂದು ಭರವಸೆ ನೀಡಿದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕವೀತಾ ಶೃಂಗೇರಿ ಅವರು ಮಾತನಾಡಿ, ಸಭೆಯಲ್ಲಿ ವಿದ್ಯಾರ್ಥಿಗಳು ಗಮನಕ್ಕೆ ತಂದ ಎಲ್ಲಾ ಸಮಸ್ಯೆಗಳನ್ನು ಗ್ರಾಮ ಪಂಚಾಯತ್ ವತಿಯಿಂದ ಇಡೇರಿಸಲಾಗುವುದು ಎಂದರು.

ಆರ್.ಎಲ್.ಎಚ್.ಪಿ. ಸಂಯೋಜಕ ನಾಗರಾಜ ಶೀಲವಂತ ಅವರು ಮಕ್ಕಳ ಹಕ್ಕುಗಳ ಬಗ್ಗೆ ಉಪನ್ಯಾಸ ನೀಡಿದರು.

ಗ್ರಾಮ ಪಂಚಾಯತ ಸದಸ್ಯರಾದ ಪೋಪಟ ಜಮಾದಾರ ಅವರು ಮಾತನಾಡಿದರು. ಗ್ರಾಮ ಪಂಚಾಯತ್ ಕಾರ್ಯದರ್ಶಿ ಅಶೋಕ ಉಚ್ಛೇಕರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಎಸ್.ಡಿ.ಎಂ.ಸಿ.ಅಧ್ಯಕ್ಷರಾದ ಪ್ರೇಮಕುಮಾರ, ಶಾಲೆಯ ಮುಖ್ಯಗುರು ಉಮಾದೇವಿ ಕುಲಕರ್ಣಿ, ಶರಣಬಸಪ್ಪಾ ಬಿರಾದಾರ್, ಐಇಸಿ ಸಂಯೋಜ-ಕರಾದ ವೀರಾರೆಡ್ಡಿ, ಅರಿವು ಕೇಂದ್ರ ಮೇಲ್ವಿಚಾರಕಿ ಸುರೇಖಾ, ಡಿಇಒ ರಾಚಯ್ಯಾ ಸ್ವಾಮಿ, ಬಿಸಿ ಸಂತೋಷ ಸೇರಿದಂತೆ ಶಾಲಾ ಸಿಬ್ಬಂದಿ ಹಾಗೂ ಗ್ರಾ.ಪಂ ಸಿಬ್ಬಂದಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಬಾಲಚಂದ್ರ ಪಾಟೀಲ್ ನಿರೂಪಿಸಿ, ವಂದಿಸಿದರು.

## ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸಲು ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ ಬೀದರ್: ಬೀದರ್ ಜಿಲ್ಲೆಯ ದಕ್ಷಿಣ ಕ್ಷೇತ್ರದ ಕಮಠಾಣಾ ಮತ್ತು ಮನ್ನಾಎಖೇಳ್ಳಿ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ_ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸಲು ಸನ್ಮಾನ್ಯ ಶ್ರೀ ಅಶೋಕ ಖೇಣಿ ಮಾಜಿ ಶಾಸಕ ರವರ ಸತತ ಪ್ರಯತ್ನದ ಪರಿಶ್ರಮದಿಂದ ಇಂದು ಪಟ್ಟಣ-ಪಂಚಾಯಿತಿಗಳಾಗಿ ಮೇಲ್ದರ್ಜೆಗೊಳಿಸಿದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ನವರಿಗೆ ಮತ್ತು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ ರವರಿಗೂ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಸನ್ಮಾನ್ಯ ಶ್ರೀ ಈಶ್ವರ ಬಿ. ಖಂಡ್ರೆ ರವರಿಗೂ ಮತ್ತು ಪೌರಾಡಳಿತ ಸಚಿವರಾದ ಸನ್ಮಾನ್ಯ ಶ್ರೀ ರಹೀಮ್ ಖಾನ ರವರಿಗೆ ಸಮಸ್ತ ಕಮಠಾಣ ಮತ್ತು ಮನ್ನಾಎಖೇಳ್ಳಿ ಗ್ರಾಮಸ್ಥರಿಂದ ಅಭಿನಂದನೆಗಳು.




ಬಸವಕಲ್ಯಾಣ :– ಇಲ್ಲಿನ ಅಕ್ಕಮಹಾದೇವಿ ಮೈದಾನದಲ್ಲಿ ಅನುಭವ ಮಂಟಪ ಉತ್ಸವದ ನಿಮಿತ್ಯವಾಗಿ ಹಮ್ಮಿಕೊಂಡಿರುವ ಕಲ್ಯಾಣ ದರ್ಶನ ಪ್ರವಚನ ನೀಡುತ್ತಿರುವ ಅತ್ತಿವೇರಿ ಬಸವಧಾಮದ ಪೂಜ್ಯಶ್ರೀ ಬಸವೇಶ್ವರಿ ತಾಯಿ ಅವರೊಂದಿಗೆ ಲಾವಣ್ಯ ಮಾತಾಜಿ. ಪ್ರವಚನ ಸೇವಾ ಸಮಿತಿ ಅಧ್ಯಕ್ಷರಾದ ಜಗನ್ನಾಥ ಪತಂಗೆ. ವೀರಶೆಟ್ಟಿ ಮಲಶೆಟ್ಟಿ ಹಾಗೂ ಶಿಕ್ಷಕರಾದ ನಾಗಪ್ಪ ನಿಣ್ಣೆ, ಅನಿಲಕುಮಾರ ಸೂಗಿ, ಸೂರ್ಯಕಾಂತ ಟೀಕೆಕರ, ಶಿವರಾಜ ನೀಲಕಂಠೆ , ವೈಜಿನಾಥ ಸ್ವಾಮಿ, ಮಲ್ಲಿಕಾರ್ಜುನ ಶೀಲವಂತ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು (ಮಲ್ಲಮ್ಮ ನುಡಿ ಚಿತ್ರ)

# ಸಂವಿಧಾನ ಭಾರತದ ಎಲ್ಲಾ ಪ್ರಜೆಗಳಿಗೆ ಹಕ್ಕು ನೀಡಿದ್ದು, ದೇಶವನ್ನು ಸಂವಿಧಾನವೇ ಮುನ್ನಡೆಸುತ್ತಿದೆ




ಯಾದಗಿರಿ : ನವೆಂಬರ್ 27, (ಕ.ವಾ) : ಸಂವಿಧಾನವು ಭಾರತದ ಎಲ್ಲಾ ಪ್ರಜೆಗಳಿಗೆ ಹಕ್ಕುಗಳನ್ನು ನೀಡಿದ್ದು, ಸಾರ್ವಜನಿಕರು ತಮ್ಮ ಹಕ್ಕುಗಳನ್ನು ಅನುಭವಿಸುತ್ತಾ ಅವುಗಳಿಗೆ ಚ್ಯುತಿಯಾದಲ್ಲಿ ನ್ಯಾಯಾಲಯಗಳ ಮೊರೆಹೋಗಬಹುದಾಗಿದೆ. ಸಂವಿಧಾನದ ರಚನೆ ಕಾರ್ಯವನ್ನು ಅದರ ನಿರ್ಮಾತೃಗಳು ಬಹಳಷ್ಟು ಕಷ್ಟ ಪಟ್ಟು ಮಾಡಿದ್ದು, ಸಂವಿಧನಾವನ್ನು ಉಳಿಸಿಕೊಂಡು ಹೊಗಬೇಕಾಗಿದ್ದು, ಕಾಲಕಾಲಕ್ಕೆ ಅನುಗುಣವಾಗಿ ನಾಗರಿಕರ ಅನುಕೂಲಕ್ಕಾಗಿ ಸಂವಿಧಾನಕ್ಕೆ ತಿದ್ದುಪಡಿ ತರಲಾಗಿದೆ. ದೇಶವನ್ನು ಸಂವಿಧಾನವೇ ಮುನ್ನಡೆಸುತ್ತಿದೆ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಮರುಳುಸಿದ್ದಾರಾಧ್ಯ ಹೆಚ್.ಜೆ ಅವರು ಹೇಳಿದರು. ನಗರದ ನ.26 ರಂದು ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಂಯುಕ್ತಾಶ್ರಯದಲ್ಲಿ "ಸಂವಿಧಾನ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸಂವಿಧಾನ ನಿರ್ಮಾತೃ ಡಾ.ಬಿ.ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮೂಲಕ ಮತ್ತು ಸಂವಿಧಾನದ ಪೀಠಿಕೆ ಎಲ್ಲರಿಗೂ ಓದಿಸುವುದರ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಗೌರವಾನ್ವಿತರು ತಮ್ಮ ಉದ್ಘಾಟನ ನುಡಿಯಲ್ಲಿ ಸಂವಿಧಾನವು ಭಾರತದ ಎಲ್ಲಾ ಪ್ರಜೆಗಳಿಗೆ ಹಕ್ಕುಗಳನ್ನು ನೀಡಿದ್ದು, ಸಾರ್ವಜನಿಕರು ತಮ್ಮ ಹಕ್ಕುಗಳನ್ನು ಅನುಭವಿಸುತ್ತಾ ಅವುಗಳಿಗೆ ಚ್ಯುತಿಯಾದಲ್ಲಿ ನ್ಯಾಯಾಲಯಗಳ ಮೊರೆಹೋಗಬಹುದಾಗಿದೆ. ಸಂವಿಧಾನದ ರಚನೆ ಕಾರ್ಯವನ್ನು ಅದರ ನಿರ್ಮಾತೃಗಳು ಬಹಳಷ್ಟು ಕಷ್ಟ ಪಟ್ಟು ಮಾಡಿದ್ದು, ಸಂವಿಧನಾವನ್ನು ಉಳಿಸಿಕೊಂಡು ಹೊಗಬೇಕಾಗಿದ್ದು, ಕಾಲಕಾಲಕ್ಕೆ ಅನುಗುಣವಾಗಿ ನಾಗರಿಕರ ಅನುಕೂಲಕ್ಕಾಗಿ ಸಂವಿಧಾನಕ್ಕೆ ತಿದ್ದುಪಡಿ ತರಲಾಗಿದೆ. ದೇಶವನ್ನು ಸಂವಿಧಾನವೇ ಮುನ್ನಡೆಸುತ್ತಿದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಯಾದಗಿರಿ ಸಿ.ಜೆ.ಎಂ. ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಶ್ರೀ ಬಾಳಸಾಹೇಬ ವಡವಾಡೆ, ವಕೀಲರು ಮಹಿಪಾಲ್ ರೆಡ್ಡಿ ಹತ್ತಿಕುಣಿ, ಡಿ.ಜಿ.ಪಿ ಹಾಗೂ ಕಾನೂನು ನೆರವು ಅಭಿರಕ್ಷಕರ ಕಛೇ-ರಿಯ ವಕೀಲರಾದ ಶ್ರೀಮತಿ ಕೃಷ್ಣವೇಣಿ ನಿರ್ಮಲಕರ್ ಅವರು ಸಂವಿಧಾನ ಮತ್ತು ಸಂವಿಧಾನ ಕೊಡಮಾಡಿದ ಹಕ್ಕುಗಳ ಕುರಿತು ವಿವರವಾಗಿ ಮಾತನಾಡಿದರು.

ಸಂವಿಧಾನ ದಿನಾಚರಣೆ ಅಂಗವಾಗಿ ನ್ಯಾಯಾಲಯದ ಸಿಬ್ಬಂದಿ ಮತ್ತು ವಕೀಲರಿಗೆ ವಿವಿಧ ಕ್ರೀಡಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿತ್ತು, ಕ್ರಿಕೆಟ್ ಪಂದ್ಯಾವಳಿಯಲ್ಲಿ ಡಿ.ಎಲ್.ಎಸ್.ಎ ಘಿಖ ತಂಡವು ಪ್ರಥಮ ಸ್ಥಾನ ಮತ್ತು ನ್ಯಾಯಾಲಯದ ಸಿಬ್ಬಂದಿಗಳ ತಂಡವು ದ್ವಿತೀಯ ಸ್ಥಾನ ಪಡೆದುಕೊಂಡಿತು.

ಸಂವಿಧಾನ ದಿನಾಚರಣೆ-ಯ ಅಂಗವಾಗಿ ಪದವಿ ಪೂರ್ವ ಕಾಲೇಜ್‌ಗಳಲ್ಲಿ ಸಂವಿಧಾನದ ಕುರಿತು ಪ್ರಬಂಧ ಸ್ಪರ್ಧೆ, ಕ್ವಿಜ್ ಮತ್ತು ಚರ್ಚಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಈ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿ, ವಿದ್ಯಾರ್ಥಿನಿಯರಾದ ವಿವಿಧ ಕಾನೂನುಗಳ ಬಗ್ಗೆ ಮಾಹಿತಿ ಇರುವ ಪುಸ್ತಕಗಳನ್ನು ಬಹುಮಾನವಾಗಿ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯದರ್ಶಿ ಮರಿಯಪ್ಪ, ಒಂದನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರಾದ ಎ.ಈರಣ್ಣ, ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಅರುಣ್ ಚೌಗುಲೆ, ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ರಾಹುಲ್ ರಾವ್ ಹಾಗೂ ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಆರ್.ಎಸ್. ಪಾಟೀಲ್ ವಕೀಲರು, ಹಿರಿಯ ಮತ್ತು ಕಿರಿಯ ನ್ಯಾಯವಾದಿಗಳು, ನ್ಯಾಯಾಲಯಗಳ ಸಿಬ್ಬಂದಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು. ವಕೀಲರಾದ ಬಿ.ಜಿ.ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು. ವಕೀಲರಾದ ಎಸ್.ಪಿ.ನಾಡೇಕರ್ ಸ್ವಾಗತಿಸಿದರು. ಜಿಲ್ಲಾ ನ್ಯಾಯವಾದಿಗಳ ಸಂಘದ ಕಾರ್ಯದರ್ಶಿಯಾದ ಶ್ರೀ ಭೀಮಾಶಂಕರ ಆಶನಾಳ ಅವರು ವಂದನಾರ್ಪಣೆ ನೆರವೇರಿಸಿದರು.

# ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿಗೆ ಒತ್ತಾಯ ಹೋರಾಟ ಸಮಿತಿಯಿಂದ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿ ಹೋರಾಟ ಸಮಿತಿ ರಾಜ್ಯ ಸಮಿತಿಯು ಬುಧವಾರ ಪತ್ರಿಕಾ ಭವನದಲ್ಲಿನಡೆಸಿದಮಾಧ್ಯಮಗೋಷ್ಠಿಯಲ್ಲಿ, ಒಳಮೀಸಲಾತಿ ಜಾರಿಯಲ್ಲಿ ಸರ್ಕಾರ ತೋರಿಸುತ್ತಿರುವನಿರ್ಲಕ್ಷ್ಯಮತ್ತುನಿರಂತರ ವಿಳಂಬದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಸಮಿತಿಯ ರಾಜ್ಯಾಧ್ಯಕ್ಷ ಶಿವರಾಯ ಅಕ್ಕರಕಿ ಅವರು, ಪರಿಶಿಷ್ಟ ಜಾತಿ ಸಮುದಾಯಗಳ ಸಂವಿಧಾನಬದ್ಧ ಹಕ್ಕನ್ನು ಖಚಿತಪಡಿಸುವಲ್ಲಿ ಸರ್ಕಾರ ತೋರಿಸುತ್ತಿರುವ ಮೀನಾಮೇಷಜನರಲ್ಲಿ ಆಕ್ರೋಶ ಹೆಚ್ಚಿಸಿದೆ ಎಂದು ಹೇಳಿದರು.

ಅವರು, "ಸಮಾನತೆ ಮತ್ತು ಸಾಮಾಜಿಕ ನ್ಯಾಯದಬಲವರ್ಧನೆಗೆಒಳಮೀಸಲಾತಿಜಾರಿ ಅವಶ್ಯಕ.ಹೋರಾಟಮುಂದುವರಿಯಲಿದೆ" ಎಂದು ಸ್ಪಷ್ಟಪಡಿಸಿದರು.

ಡಿಸೆಂಬರ್ 6ರಿಂದ ಕಾಲ್ನಡಿಗೆ ಜಾಥಾ ಡಿಸೆಂಬರ್ 11ರಂದು ಮೈಸೂರಿನಲ್ಲಿ ಮಹಾಪ್ರತಿಭಟನೆ

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಪರಿನಿರ್ವಾಣ ದಿನದ ಅಂಗವಾಗಿ ಡಿಸೆಂಬರ್ 6ರಂದು ಸಿದ್ದರಾಮನ ಹುಂಡಿಯಿಂದ ಮೈಸೂರಿನತ್ತ ಕಾಲ್ನಡಿಗೆ ಜಾಥಾ ಆರಂಭಗೊಳ್ಳಲಿದೆ.

ಡಿಸೆಂಬರ್ 11ರಂದು ಮೈಸೂರಿನ ಟೌನ್‌ಹಾಲ್ ಮುಂಭಾಗದಲ್ಲಿ ಮಧ್ಯಾಹ್ನ 12 ಗಂಟೆಗೆ ರಾಜ್ಯಮಟ್ಟದ ಬೃಹತ್ ಪ್ರತಿಭಟನಾ ಸಮಾವೇಶ ಜರುಗಲಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಹೋರಾಟಗಾರರು ಆಗಮಿಸಲಿದ್ದಾರೆ.

ಸರ್ಕಾರದ ವಿಳಂಬ: 2025ರ ಸಚಿವ ಸಂಪುಟ ತೀರ್ಮಾನ ಜಾರಿಗೆ ಬರದೇ ಜನರ ಅಸಮಾಧಾನ

11-08-2025ರಂದು ಸಚಿವ ಸಂಪುಟವು ಪರಿಶಿಷ್ಟ ಜಾತಿಗಳನ್ನು ಪ್ರವರ್ಗ-ಎ, ಬಿ, ಸಿ ಎಂದು ವಿಂಗಡಿಸಿ ಒಟ್ಟು 175 ಒಳಮೀಸಲಾತಿ ಹಂಚಿಕೆ ಮಾಡುವ ತೀರ್ಮಾನ ಕೈಗೊಂಡಿದ್ದರೂ, ಇದನ್ನು ಸರ್ಕಾರ ಇನ್ನೂ ಜಾರಿಗೆ ತರುವಲ್ಲಿ ಆಸಕ್ತಿ ತೋರದಿರುವುದನ್ನು ಸಮಿತಿ ಖಂಡಿಸಿದೆ.

ಕಂದಾಯ ಇಲಾಖೆಯಿಂದ ಮೂಲ ಜಾತಿ ಹೆಸರಿನಂತೆ ಪ್ರಮಾಣಪತ್ರ ವಿತರಣೆ ಹಾಗೂ ಪ್ರವರ್ಗ ಎ ಮೇಲ್ವಿಚಾರಣಾ ಸಮಿತಿಗಳ ರಚನೆ ಇನ್ನೂಂದುವರೆಯದೇ ಇರುವುದನ್ನೂ ಅವರು ತೀವ್ರವಾಗಿ ಟೀಕಿಸಿದರು.

ಹೋರಾಟ ಸಮಿತಿಯ 10 ಪ್ರಮುಖ ಬೇಡಿಕೆಗಳು

ಸಮಾಜ ಕಲ್ಯಾಣ ಸಚಿವರ ವಿರುದ್ಧ ಆರೋಪ

ವಕೀಲ ಮಾರಪ್ಪ ಮಾತನಾಡಿ, ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಹಾಗೂ ಇಲಾಖೆಯ ಆಯುಕ್ತ ಸಲಹೆಗಾರರು ಉದ್ದೇಶಪೂರ್ವಕವಾಗಿ ಒಳಮೀಸಲಾತಿ ಜಾರಿಗೆ ಬ್ರೇಕ್ ಹಾಕುತ್ತಿದ್ದಾರೆ ಎಂದು ಆರೋಪಿಸಿದರು.

ಸಚಿವರು ಮಾತುಕತೆಯಲ್ಲಿ 10 ದಿನದಲ್ಲಿ ಕ್ರಮಕ್ಕೆ ಭರವಸೆ ನೀಡಿದರೂ, ಕಡತವನ್ನು ಮಂತ್ರಿಮಂಡಲ ಸಭೆಗೂ ಮಂಡಿಸದಿರುವುದು ಗಂಭೀರ ನಿಷ್ಕ್ರಿಯತೆಯ ಉದಾಹರಣೆ ಎಂದು ಅವರು ಟೀಕಿಸಿದರು.

ಮುಂದಿನ ಹೋರಾಟ

ಡಿಸೆಂಬರ್ 11ರ ಪ್ರತಿಭಟನೆಗೂ ಸರ್ಕಾರ ಸ್ಪಂದಿಸದಿದ್ದರೆ ಹೋರಾಟವನ್ನು ಬೆಂಗಳೂರಿಗೆ ಸ್ಥಳಾಂತರ

ಮುಖ್ಯಮಂತ್ರಿ ನಿವಾಸಕ್ಕೆ ಮುತ್ತಿಗೆ ಎಐಸಿಸಿ ಕಚೇರಿಗೆ ಮುತ್ತಿಗೆ ಜಿಲ್ಲಾಸ್ಥರದಲ್ಲಿ ಅಘೋಷಿತ ಘೆರಾವ್-ಮುತ್ತಿಗೆ ಹೋರಾಟಗಳು

ಎಂಬ ಹಂತಬದ್ಧ ಹೋರಾಟ ಮುಂದುವರಿಸುವುದಾಗಿ ಸಮಿತಿ ಘೋಷಿಸಿದೆ. ಮಾಧ್ಯಮ ಗೋಷ್ಠಿಯಲ್ಲಿ, ಹೇಮರಾಜ ಅಸ್ಥಿಹಾಳ, ನರಸಿಂಹಲು, ಶ್ರೀನಿವಾಸ್, ಆಬ್ರಹಾಂ, ಆಂಜನೇಯ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಕರಡು ಮತದಾರರ ಪಟ್ಟಿ ಪ್ರಕಟ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 27- ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಕರಡು ಮತದಾರರ ಪಟ್ಟಿಯನ್ನು ಪ್ರಚುರಪಡಿಸುವುದಕ್ಕೆ ಸಂಬಂಧಿಸಿದಂತೆ ಚರ್ಚಿಸಲು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನವೆಂಬರ್ 27ರಂದು ರಾಜಕೀಯ ಪಕ್ಷಗಳ ಪ್ರತಿನಿಗಳೊಂದಿಗೆ ಸಭೆ ನಡೆಯಿತು.

ಈ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿಗಳು, ಭಾರತ ಚುನಾವಣಾ ಆಯೋಗವು ದಿನಾಂಕ 12.09.2025ರಂದು ಹೊರಡಿಸಿದ ವೇಳಾಪಟ್ಟಿಗನುಗುಣವಾಗಿ ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಕರಡು ಮತದಾರರ ಪಟ್ಟಿಯನ್ನು ಪ್ರಚುರಪಡಿಸಲಾಗಿದೆ ಎಂದು ತಿಳಿಸಿದರು.

ಈ ಕರಡು ಮತದಾರರ ಪಟ್ಟಿಯ ಭೌತಿಕ ಪ್ರತಿಯು ಸಂಬಂಧಪಟ್ಟ ಕ್ಷೇತ್ರದ ವ್ಯಾಪ್ತಿಯ ಎಲ್ಲಾ ಸಹಾಯಕ ಮತದಾರರ ನೋಂದಣಾಧಿಕಾರಿಗಳಾದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ, ಮಹಾನಗರಪಾಲಿಕೆಯ ಆಯುಕ್ತರು ಹಾಗೂ ತಹಸೀಲ್ದಾರ ಕಚೇರಿಯಲ್ಲಿ ಲಭ್ಯವಿದ್ದು ಮತದಾರರು ಪರಿಶೀಲಿಸಿಕೊಳ್ಳಬಹುದಾಗಿದೆ. ಇದನ್ನು ಹೊರತುಪಡಿಸಿಯು ಸಹ ಸರ್ಕಾರದ ಅಧಿಕೃತ ಅಂತರ್ಜಾಲದಲ್ಲಿಯು ಸಹ ಮಾಹಿತಿಗಾಗಿ ಲಭ್ಯವಿದ್ದು ಇದನ್ನು ಮತದಾರರು ಅವಲೋಕಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಹೀಗೆ ಪಚುರಪಡಿಸಲಾದ ಕರಡು ಮತದಾರರ ಪಟ್ಟಿಯಲ್ಲಿ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಸಂಬಂಧಪಟ್ಟ ಮತದಾರರು ಲಿಖಿತವಾಗಿ ಆಯಾ ಸಹಾಯಕ ಮತದಾರರನೋಂದಣಾಧಿಕಾರಿಗಳಿಗೆ ಆಕ್ಷೇಪಣೆಯನ್ನು ಡಿಸೆಂಬರ್ 10ರವರೆಗೆ ಸಲ್ಲಿಸಬಹುದೆಂದು ಸಾರ್ವಜನಿಕರಿಗೆ ತಿಳಿಯಪಡಿಸಿದೆ ಎಂದರು.

ಇದನ್ನು ಹೊರತುಪಡಿಸಿಯು ಸಹ ಇದೊಂದು ನಿರಂತರ ನೋಂದಣಿ ಪ್ರಕ್ರಿಯೆಯಾಗಿರುವ ಹಿನ್ನೆಲೆಯಲ್ಲಿ, ನಾಮಪತ್ರ ಸಲ್ಲಿಸುವ ಕೊನೆಯ ದಿನಾಂಕದವರೆಗೂ ಅರ್ಹ ಮತದಾರರು ಅವಶ್ಯಕ ದಾಖಲೆಗಳೊಂದಿಗೆ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಲು ಅವಕಾಶವಿರುತ್ತದೆಂದು ಅಪರ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಸಾರ್ವಜನರಿಕರಿಗೆ ತಿಳಿಸಿದರು. ಸಭೆಯಲ್ಲಿ ವಿವಿಧ ರಾಜಕೀಯ ಪಕ್ಷಗಳು ಪ್ರತಿನಿಧಿಗಳು, ಚುನಾವಣೆಯ ಶಾಖೆಯ ಶಿರಸ್ತೇದಾರರು ಇದ್ದರು.

### ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ

## ಮಕ್ಕಳ ಹಕ್ಕುಗಳ ಕುರಿತು ಹೆಚ್ಚೆಚ್ಚು ಜಾಗೃತಿ ಮೂಡಿಸಿ-ಇಒ ಸುಲ್ಪಿ ಸರ್



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಮಕ್ಕಳ ಹಕ್ಕುಗಳನ್ನು ಉಲ್ಲಘನೆ ಆಗದಂತೆ ನೋಡಿಕೊಳುವುದು ಮತ್ತು ಅವರ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಪಿ ಹೇಳಿದರು.

ತಾಲ್ಲೂಕಿನ ನಾರಾಯಣಪೂರ ಗ್ರಾಮದ ಸರಕಾರಿ ಶಾಲೆಯಲ್ಲಿ ಗುರುವಾರ ಹಮ್ಮಿಕೊಂಡ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿ, ಇಂದಿನ ಮಕ್ಕಳು ಇಂದಿನ ಪ್ರಜೆಗಳು ಮಾತಿನಂತೆ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ಆರೋಗ್ಯ ಸೇರಿದಂತೆ ಅವರ ಹಕ್ಕಿನಿಂದ ವಂಚಿತ ರಾಗದಂತೆ ಕೆಲವು ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದರು.

ಕ್ರೀಡೆ, ಸಾಂಸ್ಕೃತಿ, ಶೈಕ್ಷಣಿಕ, ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ-ಯ ಪೇಸ್ ಬುಕ್ ಪೇಜ್ ರಚಿಸುವುದು, ಮಕ್ಕಳ ದೂರು ಪೆಟ್ಟಿಗೆ ಅಳವಡಿಸುವುದು ಮತ್ತು ಜನವಸತಿ, ವಾರ್ಡ್ ಗ್ರಾಮ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆ ಹಮ್ಮಿಕೊಳ್ಳುವ ಮೂಲಕ ಮಕ್ಕಳ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಗ್ರಾಮ ಪಂಚಾಯತ್ ಉಪಾಧ್ಯಕ್ಷ ಚೇತನ ಕಾಡೆ ಅವರು ಮಾತನಾಡಿ, ನಿಮ್ಮ ಸಮಸ್ಯೆಗಳು ನಮ್ಮ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬಂದರೆ ಖಂಡಿತವಾಗಿ ಶೀಘ್ರವದಲ್ಲಿ ಎಲ್ಲವು ಇಡೇರಿಸಿ ಕೊಡುತ್ತೆವೆ ಎಂದು ಭರವಸೆ ನೀಡಿದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಕವೀತಾ ಶೃಂಗೇರಿ ಅವರು ಮಾತನಾಡಿ, ಸಭೆಯಲ್ಲಿ ವಿದ್ಯಾರ್ಥಿಗಳು ಗಮನಕ್ಕೆ ತಂದ ಎಲ್ಲಾ ಸಮಸ್ಯೆಗಳನ್ನು ಗ್ರಾಮ ಪಂಚಾಯತ್ ವತಿಯಿಂದ ಇಡೇರಿಸಲಾಗುವುದು ಎಂದರು.

ಆರ್.ಎಲ್.ಎಚ್.ಪಿ. ಸಂಯೋಜಕ ನಾಗರಾಜ ಶೀಲವಂತ ಅವರು ಮಕ್ಕಳ ಹಕ್ಕುಗಳ ಬಗ್ಗೆ ಉಪನ್ಯಾಸ ನೀಡಿದರು.

ನಂತರ ಗ್ರಾಮ ಪಂಚಾಯತ್ ಸದಸ್ಯ ಪೋಪಟ ಜಮಾದಾರ ಅವರು ಮಾತನಾಡಿದರು. ಗ್ರಾಮ ಪಂಚಾಯತ್ ಕಾರ್ಯದರ್ಶಿ ಅಶೋಕ ಉಬ್ಬೇಕರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಎಸ್.ಡಿ.ಎಂ.ಸಿ. ಅಧ್ಯಕ್ಷ ಪ್ರೇಮಕುಮಾರ, ಶಾಲಾ ಮುಖ್ಯಗುರು ಉಮಾದೇವಿ ಕುಲಕರ್ಣಿ, ಶರಣಬಸಪ್ಪಾ ಬಿರಾದಾರ್, ಐಇಸಿ ಸಂಯೋಜಕ ವೀರಾರೆಡ್ಡಿ, ಅರಿವು ಕೇಂದ್ರ ಮೇಲ್ವಿಚಾರಕಿ ಸುರೇಖಾ, ಡಿಇಒ ರಾಚಯ್ಯಾ ಸ್ವಾಮಿ, ಬಿಸಿ ಸಂತೋಷ ಸೇರಿದಂತೆ ಶಾಲಾ ಸಿಬ್ಬಂದಿ ಹಾಗೂ ಗ್ರಾ.ಪಂ. ಸಿಬ್ಬಂದಿ ಇದ್ದರು. ಬಾಲಚಂದ್ರ ಪಾಟೀಲ್ ನಿರೂಪಿಸಿ, ವಂದಿಸಿದರು.

## ಕಾಂಗ್ರೆಸ್ ಸರ್ಕಾರ ಪತನಗೊಂಡರೆ, ಡಿಕೆಶಿಗೆ ಬೆಂಬಲ ಕೊಡಲು BJP ಸಿದ್ಧ: ಡಿ.ವಿ ಸದಾನಂದ ಗೌಡ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಪತನಗೊಂಡಿದ್ದೇ ಆದರೆ, ಡಿಕೆ.ಶಿವಕುಮಾರ್ ಅವರು ಬಿಜೆಪಿಯನ್ನು ಸಂಪರ್ಕಿಸಿದರೆ ಬೆಂಬಲ ನೀಡಲು ಸಿದ್ಧರಿದ್ದೇವೆಂದು ಮಾಜಿ ಮುಖ್ಯಮಂತ್ರಿ ಡಿವಿ ಸದಾನಂದ ಗೌಡ ಅವರು ಬುಧವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಕಾಂಗ್ರೆಸ್ ಪಕ್ಷದಿಂದ ಹೊರಬಂದು ಬಿಜೆಪಿಗೆ ಬಾಹ್ಯ ಬೆಂಬಲ ಕೊಟ್ಟರೆ ಒಪ್ಪುತ್ತೇವೆ. ಆದರೆ, ಅವರನ್ನೇ ಮುಖ್ಯಮಂತ್ರಿ ಮಾಡುತ್ತೇವೆ ಎಂದರೆ ಅದು ಕೇಂದ್ರದ ನಿರ್ಧಾರಕ್ಕೆ ಬಿಟ್ಟ ವಿಚಾರ. ಅಲ್ಲದೇ ಕೇಂದ್ರದ ವರಿಷ್ಠರು ಅವರನ್ನೇ ಮುಖ್ಯಮಂತ್ರಿ ಮಾಡಲು ಸೂಚಿಸಿದರೆ ಬೆಂಬಲ ಕೊಡುತ್ತೇವೆಂದು ಹೇಳಿದರು.

ಶಿಡ್ಲಘಟ್ಟದಲ್ಲಿ ಸೋಮವಾರ ಸಿದ್ದರಾಮಯ್ಯ ಅವರು 2,000 ಕೋಟಿ ರೂ.ಗಳಿಗೂ ಹೆಚ್ಚು ಮೌಲ್ಯದ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿದ ಕುರಿತು ಪ್ರತಿಕ್ರಿಯಿಸಿ, ಇವು ಕೇವಲ ಘೋಷಣೆಗಳಷ್ಟೇ. ಸರ್ಕಾರದ ಬಳಿ ಹಣವಿದ್ದರೆ ಬೆಂಗಳೂರಿನ ಗುಂಡಿಗಳನ್ನು ಮುಚ್ಚುತ್ತಿತ್ತು ಎಂದು ವ್ಯಂಗ್ಯವಾಡಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಆಡಳಿತ ಸತ್ತು ಹೋಗಿದೆ. ರಾಜ್ಯದ ಜನರು ಕಂಗಾಲಾಗಿದ್ದಾರೆ. ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯುವುದು ಸೇರಿದಂತೆ ರೈತರ ಹಲವು ಸಮಸ್ಯೆಗಳಿವೆ. ಅವುಗಳ ಪರಿಹಾರಕ್ಕೆ ಸರ್ಕಾರ ಮುಂದಾಗುತ್ತಿಲ್ಲ. ಆದ್ದರಿಂದ ಈ ಸರ್ಕಾರ ಇರಬಾರದು ಎಂದು ತಿಳಿಸಿದರು.

## ನಕಲಿ ನಂದಿನಿ ತುಪ್ಪ ದಂಧೆ ಬೇಧಿಸಿದ CCB ಪೊಲೀಸರು: ಕಿಂಗ್‌ಪಿನ್ ದಂಪತಿ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ತಮಿಳುನಾಡಿನಲ್ಲಿ ನಕಲಿ ತುಪ್ಪ ತಯಾರಿಕಾ ಘಟಕವನ್ನು ಸ್ಥಾಪಿಸಿ ರಾಜ್ಯಾದ್ಯಂತ ನಕಲಿ ಉತ್ಪನ್ನಗಳನ್ನು ವಿತರಿಸುತ್ತಿದ್ದ ಪ್ರಮುಖ ಸೂತ್ರಧಾರರನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಶಿವಕುಮಾರ್ ಮತ್ತು ಆತನ ಪತ್ನಿ ರಮ್ಯಾ ಎಂದು ಗುರುತಿಸಲಾಗಿದೆ. ಸಿಸಿಬಿ ಪೊಲೀಸರ ತನಿಖೆ ವೇಳೆ ಈ ದಂಪತಿಯೇ ನಕಲಿ ನಂದಿನಿ ಉತ್ಪನ್ನಗಳ ತಯಾರಿ-ಕೆ ಘಟಕದ ಕಿಂಗ್‌ಪಿನ್‌ಗಳು ಎಂಬುದು ದೃಢಪಟ್ಟಿದೆ. ಸಿಸಿಬಿ ಡಿಸಿಪಿ ಶ್ರೀಹರಿಬಾಬು ಅವರು ನೀಡಿರುವ ಮಾಹಿತಿ ಪ್ರಕಾರ, ಆರೋಪಿ ದಂಪತಿಗಳು ನೆರೆ-ಯ ತಮಿಳುನಾಡಿನಲ್ಲಿ ನಕಲಿ ತುಪ್ಪ ತಯಾರಿಕೆ ಘಟಕವನ್ನು ಸ್ಥಾಪಿಸಿದ್ದರು. ಈ ಘಟಕದ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿದಾಗ, ನಕಲಿ ತುಪ್ಪ ತಯಾರಿಸಲು ಬಳಸುತ್ತಿದ್ದ ದೊಡ್ಡ ದೊಡ್ಡ ಹೈಟೆಕ್ ಮೆಷಿನರಿಗಳು ಮತ್ತು ಅತ್ಯಾಧುನಿಕ ಯಂತ್ರಗಳು ಪತ್ತೆಯಾಗಿವೆ. ಈ ಯಂತ್ರಗಳನ್ನು ಬಳಸಿಕೊಂಡು ದಂಪತಿಗಳು ನಂದಿನಿ ಲೇಬಲ್‌ನ ನಕಲಿ ತುಪ್ಪಗಳನ್ನು ತಯಾರಿಸಿ, ರೀ-ಪ್ಯಾಕಿಂಗ್ ಮಾಡಿ ಮಾರಾಟ ಮಾಡುತ್ತಿದ್ದರು. ದಾಳಿ ವೇಳೆ ಪೊಲೀಸರು ಮೆಷಿನರಿಗಳನ್ನು ವಶಪಡಿಸಿಕೊಂಡಿದ್ದಾರೆ.

# ಇಂದು ಎಲ್‌ಬಿಎಸ್ ನಗರದ 12ನೇ ಅಂಗನವಾಡಿ ಕೇಂದ್ರದಲ್ಲಿ ಪೂರ್ವ ಪ್ರಾಥಮಿಕ ತರಗತಿ ಆರಂಭ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 27- ಬೆಂಗಳೂರಿನ ಮೇಕ್ರಿ ಸರ್ಕಲ್ ಹತ್ತಿರದ ಅರಮನೆ ಮೈದಾನದಲ್ಲಿನ ಕೃಷ್ಣ ವಿಹಾದಲ್ಲಿ ನವೆಂಬರ್ 28ರಂದು ಬೆಳಗ್ಗೆ 10.30ಕ್ಕೆ ನಡೆಯುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ರಾಜ್ಯದ 5000 ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವ ಪ್ರಾಥಮಿಕ ತರಗತಿ ಆರಂಭಿಸುವ ಬಗ್ಗೆ ಘೋಷಣೆ ಮಾಡಲಾಗುತ್ತದೆ.

ಈ ಕಾರ್ಯಕ್ರಮದ ನೇರ ಪ್ರಸಾರ ಮತ್ತು ಪೂರ್ವ ಪ್ರಾಥಮಿಕ ತರಗತಿ ಆರಂಭಿಸುವ ಕಾರ್ಯಕ್ರಮವು ರಾಯಚೂರಿನ ಎಲ್‌ಬಿಎಸ್ ನಗರದ 12ನೇ ಅಂಗನವಾಡಿ ಕೇಂದ್ರದಲ್ಲಿ ನವೆಂಬರ್ 28ರ ಬೆಳಗ್ಗೆ 10.30ಕ್ಕೆ ನಡೆಯಲಿದೆ.

ಎಲ್‌ಬಿಎಸ್ ನಗರದ 12ನೇ ಅಂಗನವಾಡಿ ಕೇಂದ್ರವು ಮೂಲಭೂತ ಸೌಕರ್ಯ ಹೊಂದಿರುವುದರ ಜೊತೆಗೆ ಅಂಗನವಾಡಿಯ ಕಾರ್ಯಕರ್ತೆಯಾದ ಶ್ರೀಮತಿ ರೇಷ್ಮಾ ಅವರ ಕಾರ್ಯನೈಪುಣ್ಯತೆ ಹಾಗೂ ವಲಯ ಮೇಲ್ವಿಚಾರಕಿ ಭಾರತಿಭಾಯಿ ಅವರ ಸೂಕ್ತ ಮಾರ್ಗದರ್ಶನ ಮೇರೆಗೆ ಪೂರ್ವ ಪ್ರಾಥಮಿಕ ತರಗತಿ ಆರಂಭಿಸುವ ಘೋಷಣೆಯ ರಾಯಚೂರು ಜಿಲ್ಲೆಯ ಮೊದಲನೇ ಅಂಗನವಾಡಿ ಕೇಂದ್ರವಾಗಿ ಆಯ್ಕೆಯಾಗಿದೆ ಎಂದು ರಾಯಚೂರು ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

### ಕರಡು ಅಭಿವೃದ್ಧಿ ಯೋಜನೆ ಸಮಿತಿ ಸಭೆಯಲ್ಲಿ ಶಾಸಕ ನಾಡಗೌಡ ಸೂಚನೆ

# ಅಭಿವೃದ್ಧಿ ಯೋಜನೆ ಶಿಸ್ತುಭದ್ಧವಾಗಿ ಸಿದ್ಧಪಡಿಸಿ

ಮಲ್ಲಮ್ಮ ನುಡಿ ವಾರ್ತೆ



ತಾಳಿಕೋಟಿ: ಮುದ್ದೇಬಿಹಾಳ ಎರಡೂ ತಾಲೂಕಿನ ಎಲ್ಲ ಇಲಾಖೆಗಳ ಸಂಯೋಜನೆಯೊಂದಿಗೆ ತಾಲೂಕ ವಾರ್ಷಿಕ ಕರಡು ಅಭಿವೃದ್ಧಿ ಯೋಜನೆಯನ್ನು ಶಿಸ್ತು ಬದ್ಧವಾಗಿ ಸಿದ್ಧಪಡಿಸಲು ಕೆ ಎಸ್ ಡಿ ಎಲ್ ಅಧ್ಯಕ್ಷ, ಶಾಸಕ ಸಿ.ಎಸ್. ನಾಡಗೌಡ(ಅಪ್ಪಾಜಿ) ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ 2026-27ನೇ ಸಾಲಿನ ವಾರ್ಷಿಕ ಕರಡು ಅಭಿವೃದ್ಧಿ ಕ್ರಿಯಾ ಯೋಜನೆ ಸಿದ್ಧಪಡಿಸಲು ಕರೆದ ತಾಲೂಕ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು. ಸಭೆಯಲ್ಲಿ ಎಲ್ಲಾ ಇಲಾಖೆಗಳು ಸಲ್ಲಿಸಿದ ಬೇಡಿಕೆಗಳನ್ನು ಪರಿಶೀಲಿಸಿದ ಅವರು ಅಧಿಕಾರಿಗಳೊಂದಿಗೆ ಚರ್ಚಿಸಿದರು. ಇನ್ನೂ ಅಗತ್ಯವಿರುವ ಕಾಮಗಾರಿಗಳ ಬೇಡಿಕೆಯನ್ನೂ ಸಲ್ಲಿಸಲು ತಿಳಿಸಿದರು. ಇವುಗಳಲ್ಲಿ ಪ್ರಮುಖವಾಗಿ ಕುಡಿಯುವ ನೀರು ಮತ್ತು ಗ್ರಾಮೀಣ ನೈರ್ಮಲ್ಯ ಇಲಾಖೆ, ಮಹಿಳಾ ಮತ್ತು ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಪ್ರಾದೇಶಿಕ ಅರಣ್ಯ ಇಲಾಖೆ, ಸಾಮಾಜಿಕ ಅರಣ್ಯ ಇಲಾಖೆ ಪ್ರಮುಖ ವಾಗಿದ್ದು ಸಂಯೋಜನೆಯೊಂದಿಗೆ ಶಿಸ್ತುಬದ್ಧವಾಗಿ ಕರಡು ಯೋಜನೆಯನ್ನು ಸಿದ್ಧಪಡಿಸಲು ತಿಳಿಸಿದರು. ಸಭೆಯಲ್ಲಿ ತಹಸಿಲ್ದಾರ್ ಡಾ.ವಿನಯಾ ಹೂಗಾರ, ತಾಪಂ ಇಓ ಅನಸೂಯಾ ಚಲವಾದಿ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಬಿ ಎಂ ಸಾಗರ, ತಾಲೂಕ ಯೋಜನಾಧಿಕಾರಿ ಖುಬಸಿಂಗ್ ಜಾಧವ, ಸಹಾಯಕ ನಿರ್ದೇಶಕ (ಗ್ರಾ.ಉ.) ಎಸ್.ಎಸ್. ಗಣಾಚಾರ್ಯ, ವಿವಿಧ ಇಲಾಖೆಗಳ ತಾಲೂಕ ಮಟ್ಟದ ಅಧಿಕಾರಿಗಳು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಹಾಗೂ ತಾಪಂ ಸಿಬ್ಬಂದಿಗಳು ಇದ್ದರು.

## ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ನವೆಂಬರ್ 27 ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ ಅವರು ನವೆಂಬರ್ 30 ರಂದು ಬೆಳಗಾವಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಬೆಳಗಾವಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಕಾರ್ಯಾಗಾರ ಮತ್ತು ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ನಂತರ ಅಂದೇ ರಾತ್ರಿ ಬೆಂಗಳೂರಿಗೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಮೈಸೂರು: ನಡು ರಸ್ತೆಯಲ್ಲಿ ಮಾರಕಾಸ್ತ್ರಗಳಿಂದ ಕೊಚ್ಚಿ ಯುವಕನ ಹತ್ಯೆ; ಹೆಚ್ಚಿದ ಆತಂಕ

ಮಲ್ಲಮ್ಮ ನುಡಿ ವಾರ್ತೆ



ಮೈಸೂರು: ಯುವಕನೊಬ್ಬನನ್ನು ಮಾರಕಾಸ್ತ್ರಗಳಿಂದ ಇರಿದು ಕೊಲೆ ಮಾಡಿರುವ ಘಟನೆ ಉದಯಗಿರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬುಧವಾರ ಬೆಳಿಗ್ಗೆ ನಡೆದಿದೆ.

ಕೊಲೆಯಾದ ಯುವಕನನ್ನು ಸಯ್ಯದ್ ಸುಫಿಯಾನ್ (19) ಎಂದು ಗುರುತಿಸಲಾಗಿದೆ. ಬುಧವಾರ ಬೆಳಿಗ್ಗೆ 5.40 ಗಂಟೆ ಸಮಯದಲ್ಲಿ ಸ್ನೇಹಿತನ ಜೊತೆ ಟೀ ಕುಡಿಯಲು ಹೋಗಿದ್ದ ವೇಳೆ ಅಲ್ಲೇ ಇದ್ದ ಇತರ ಸ್ನೇಹಿತರೊಂದಿಗೆ ಜಗಳವಾಗಿ ಪರಸ್ಪರ ಹೊಡೆದಾಡಿಕೊಂಡಿದ್ದಾರೆ. ಈ ವೇಳೆ ಮದ್ಯವಸನಿಗಳಾದ ಇಬ್ಬರು ಯುವಕರು ಚಾಕುವಿನಿಂದ ಇರಿದಿದ್ದಾರೆ. ಯುವಕ ತಪ್ಪಿಸಿಕೊಳ್ಳಲು ಯತ್ನಿಸಿದರೂ ರಸ್ತೆಯಲ್ಲಿ ಅಟ್ಟಾಡಿಸಿಕೊಂಡು ಕೊಲೆ ಮಾಡಿದ್ದಾರೆ. ಯುವಕನ ಎದೆ ಮತ್ತು ಬೆನ್ನಿನ ಭಾಗಕ್ಕೆ ಇರಿದು ಕೊಲೆ ಮಾಡಲಾಗಿದೆ ಎಂದು ಹೇಳಲಾಗುತ್ತಿದೆ. ಕೊಲೆ ನಡೆಯುವ ಸ್ಥಳದಲ್ಲಿ ಸಾರ್ವಜನಿಕರು ಓಡಾಡುತ್ತಿದ್ದರೂ ಯಾರೊಬ್ಬರೂ ಈತನ ಸಹಾಯಕ್ಕೆ ಬರಲಿಲ್ಲ.

ರಕ್ತದ ಮಡುವಿನಲ್ಲಿ ಬಿದ್ದಿದ್ದ ಯುವಕ ಸಹಾಯಕ್ಕಾಗಿ ಅಂಗಲಾಚಿದರೂ ಯಾವೊಬ್ಬ ನಾಗರೀಕರೂ ಸಹಾಯ ಮಾಡಲಿಲ್ಲ. ರಸ್ತೆಯಲ್ಲೆ ನರಳಾಡಿ ಯುವಕ ಸಾವನ್ನಪ್ಪಿದ್ದಾನೆ ಎನ್ನಲಾಗಿದೆ. ಕೊಲೆಯಾದ ಯುವಕ ಬೆಂಗಳೂರು: ಃಃಒ ವಿದ್ಯಾರ್ಥಿನಿಯನ್ನು ರೂಮಿಗೆ ಕರೆಸಿಕೊಂಡು ಭೀಕರವಾಗಿ ಕೊಲೆ ಮಾಡಿದ ಯುವಕ!

ಈ ಎಲ್ಲಾ ಸನ್ನಿವೇಶಗಳ ದೃಶ್ಯ ಸ್ಥಳೀಯ ಸಿಸಿ ಕ್ಯಾಮೆರಾದಲ್ಲಿ ದಾಖಲಾಗಿದೆ. ಉದಯಗಿರಿ ಪೊಲೀಸರು ಸ್ಥಳಕ್ಕೆ ಆಗಮಿಸಿ ಪತಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಘಟನೆ ಹಿನ್ನಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ.

ಈ ಪ್ರದೇಶದಲ್ಲಿ ಯುವಕರಿಗೆ ಗಾಂಜಾ, ದ್ರಾವಣ ಮತ್ತು ಇತರ ಮಾದಕ ವಸ್ತುಗಳು ಸುಲಭವಾಗಿ ಸಿಗುತ್ತಿದೆ, ಇದರಿಂದಾಗಿ ಯುವಕರು ಇಂತಹ ಅಪರಾಧಗಳಲ್ಲಿ ಭಾಗಿಯಾಗುತ್ತಿದ್ದಾರೆ. ಕೊಲೆಯ ಹಿಂದೆ ಅಂತಹ ಯುವಕರ ಕೈವಾಡವಿದೆ ಎಂದು ಸಂತ್ರಸ್ತನ ಕುಟುಂಬ ಸದಸ್ಯರು ಆರೋಪಿಸಿದ್ದಾರೆ.

# ಮಾಹಿತಿ ನೀಡದ ಅಧಿಕಾರಿಗಳ ವಿರುದ್ಧ ಅಸಮಾಧಾನ
# ಆರ್.ಟಿ.ಇ ಕಾಯ್ದೆ ಪ್ರಾಮಾಣಿಕವಾಗಿ ಅನುಷ್ಠಾನಗೊಳಿಸಿ



ಬಳ್ಳಾರಿ,ನ.27(ಕರ್ನಾಟಕವಾರ್ತೆ):

ಜಿಲ್ಲೆಯಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆಯನ್ನು ಪ್ರಾಮಾಣಿಕವಾಗಿ ಅನುಷ್ಠಾನಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್‌ನ ಹಳೆಯ ನಜೀರ್ ಸಾಬ್ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಆರ್.ಟಿ.ಇ ಕಾಯ್ದೆ ಅನುಷ್ಠಾನ ಕುರಿತು ಶಿಕ್ಷಣ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆಯು 6 ರಿಂದ 14 ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣವನ್ನು ಮೂಲಭೂತ ಹಕ್ಕು ಎಂದು ಗುರುತಿಸುತ್ತದೆ. ಎಲ್ಲಾ ಮಕ್ಕಳಿಗೆ ಶಿಕ್ಷಣದ ಪ್ರವೇಶಕ್ಕೆ ಇರುವ ಆರ್ಥಿಕ ಅಥವಾ ಇತರ ಅಡೆತಡೆಗಳನ್ನು ನಿವಾರಿಸುವುದು ಇದರ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಆರ್.ಟಿ.ಇ ಕಾಯ್ದೆ ಅನುಷ್ಠಾನಕ್ಕಿರುವ ನಿಯಮಾವಳಿಗಳ ಬಗ್ಗೆ ಅರಿವು ಇಲ್ಲದೇ ಇರುವುದು ದುರ್ದೈವದ ಸಂಗತಿ. ಹಾಗಾಗಿ ಅಧಿಕಾರಿಗಳು ಕಾಯ್ದೆಯ ಸಮಗ್ರ ಮಾಹಿತಿ ಹೊಂದುವ ಮೂಲಕ ಮಕ್ಕಳ ಶಿಕ್ಷಣ ಭವಿಷ್ಯಕ್ಕೆ ಕಾರಣೀಭೂತರಾಗಬೇಕು ಎಂದರು.

ಜಿಲ್ಲೆಯಲ್ಲಿ 2021-22 ನೇ ಸಾಲಿನಲ್ಲಿ ಕರೋನಾ ಸಂದರ್ಭದಲ್ಲಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡಲು ಸರ್ಕಾರದಿಂದ ಅನುದಾನ ನೀಡಿದ್ದು, ಮಕ್ಕಳಿಗಾಗಿ ಪೂರ್ಣ ಪ್ರಮಾಣದಲ್ಲಿ ಖರ್ಚು ಮಾಡಲಾಗಿದೆಯೇ? ಮಾಹಿತಿ ಎಲ್ಲಿ? ಎಲ್ಲಾ ಶಾಲೆಗಳಲ್ಲಿ ಉಳಿದುಕೊಂಡಿರುವ ಅನುದಾನ ಎಷ್ಟು? ಶಾಲೆಗಳ ಬ್ಯಾಂಕ್ ಖಾತೆ ಪರಿಶೀಲಿಸಿಲ್ಲವೇ? ಎಂದು ಮಧ್ಯಾಹ್ನ ಬಿಸಿಯೂಟದ ಯೋಜನಾಧಿಕಾರಿಗಳ ಮೇಲೆ ಗರಂ ಆದ ಅವರು, ಕೂಡಲೇ ಮಾಹಿತಿ ನೀಡಬೇಕು. ಸರ್ಕಾರ ಮಕಳಿಗಾಗಿಯೇ ನೀಡಿರುವ ಹಣವಿದೆ. ಮಕ್ಕಳಿಗೆ ತಲುಪಿಸುವ ಕಾರ್ಯ ಏಕೆ ಮಾಡಲಿಲ್ಲ, ಇದಕ್ಕೆ ಯಾರು ಹೊಣೆ ಎಂದು ಕಳವಳ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ 2021-22 ರಿಂದ 31.03.2025 ರ ಅಂತ್ಯಕ್ಕೆ ಶಾಲೆಗಳ ಎಲ್ಲಾ ಖಾತೆಗಳಲ್ಲಿ ಸೇರಿ ಒಟ್ಟು 2,24,71,138 ಹಣವಿದೆ ಎಂದು ಮಧ್ಯಾಹ್ನ ಬಿಸಿಯೂಟದ ಯೋಜನಾಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಅಧ್ಯಕ್ಷರು, ಈ ಹಣ ಮಕ್ಕಳಿಗೆ ತಲುಪಬೇಕು, ಇಲ್ಲವೇ ಸರ್ಕಾರಕ್ಕೆ ತಲುಪಬೇಕು ಎಂದರು.

ಕಂಪ್ಲಿ ತಾಲ್ಲೂಕಿನ ರಾಮಸಾಗರ ಗ್ರಾಮದ ಸರ್ಕಾರಿ ಶಾಲೆಯೊಂದರಲ್ಲಿ ಶಾಲಾ ಮುಖ್ಯೋಪಾಧ್ಯರು, ಎಸ್.ಡಿ.ಎಂ.ಸಿ ಸಮಿತಿ ಒಳಗೊಂಡು ಶಾಲಾ ಪ್ರವೇಶಾತಿ ನೆಪದಲ್ಲಿ ಹಣ ವಸೂಲಾತಿ ಮಾಡಲು ಅವಕಾಶವಿದೆಯೇ? ಎಂದು ಡಿಡಿಪಿಐ ಪ್ರಶ್ನಿಸಿದರು. ಇದರ ಸಮಗ್ರ ತನಿಖೆ ನಡೆಸಿ ಆಯೋಗಕ್ಕೆ ವರದಿ ಸಲ್ಲಿಸಬೇಕು ಎಂದು ಖಡಕ್ ಸೂಚನೆ ನೀಡಿದರು.

ಅದೇ ರೀತಿಯಾಗಿ ಮೆಟ್ರಿಗ್ರಾಮದಲ್ಲಿ ಭೇಟಿ ನೀಡಿದಾಗ ಒಂದೇ ಶಾಲೆಯಲ್ಲಿ ಪ್ರಾಥಮಿಕ ಹಂತದ 5 ಮಕ್ಕಳು, ಪ್ರೌಢ ಹಂತದ 12 ಮಕ್ಕಳು ಗೈರಾಗಿರುವುದು ಕಂಡುಬಂದಿದ್ದು, ಕಾರಣವೇನು? ಇದೇ ತರಹ ಜಿಲ್ಲೆಯ ಶಾಲೆಗಳಲ್ಲಿ ನಡೆಯುವ ಕಥೆ ಏನು? ಮಕ್ಕಳಿಗೆ ಏನಾದರೂ ಘಟನೆಗಳು ಸಂಭವಿಸಿದಲ್ಲಿ ಯಾರೂ ಉತ್ತರ ನೀಡಬೇಕು. ಶಿಕ್ಷಕರು ಮನೆ ಭೇಟಿ ನಡೆಸಬೇಕು. ಶಾಲೆಗೆ ಕರೆತರುವ ಪ್ರಯತ್ನ ಮಾಡಬೇಕು. ಶಾಲೆಯಲ್ಲಿ ಕುಡಿಯಲು ನೀರಿನ ವ್ಯವಸ್ಥೆ ಇಲ್ಲ, ಆಹಾರಧಾನ್ಯಗಳಲ್ಲಿ ಹುಳುಗಳು ಕಂಡುಬಂದಿವೆ, ಶೌಚಾಲಯ ವ್ಯವಸ್ಥೆ ಇಲ್ಲ, ಈ ಕೂಡಲೇ ಕ್ರಮವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಕಳೆದ ವರ್ಷದಲ್ಲಿ ಪ್ರೌಢ ಶಾಲೆಗಳಲ್ಲಿ (9 ಮತ್ತು 10 ತರಗತಿ) ಉತ್ತೀರ್ಣರಾದ ವಿದ್ಯಾರ್ಥಿಗಳಲ್ಲಿ ಸುಮಾರು 9,500 ವಿದ್ಯಾರ್ಥಿಗಳು ಹೊರಗುಳಿದಿದ್ದು, ಹಾಜರಾತಿಯಲ್ಲಿ ಮಾತ್ರ ಪ್ರೆಸೆಂಟ್ ಇದ್ದಾರೆ, ಆದರೆ ದೈಹಿಕವಾಗಿ ಶಾಲೆಯಲ್ಲಿಲ್ಲ. ಸರ್ಕಾರದಿಂದ ಅವರಿಗೆ ನೀಡಲಾಗುತ್ತಿರುವ ಸಮವಸ್ತ್ರ, ಶೂ-ಸಾಕ್ಸ್, ಊಟ, ಮೊಟ್ಟೆ, ಬಾಳೆಹಣ್ಣು ಎಲ್ಲಿಗೆ ಹೋಗುತ್ತಿವೆ ಎಂದು ಪ್ರಶ್ನಿಸಿದ ಅವರು, ಈ ಕುರಿತು ಆಯುಕ್ತರೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದರು.

ಶಾಲೆಗಳಲ್ಲಿ ಮಕ್ಕಳ ಆಧಾರ್ ಸೀಡಿಂಗ್ ಪ್ರಕ್ರಿಯೆ ಸಾಕಷ್ಟು ಬಾಕಿಯಿದೆ. ಇದರಿಂದ ಅವರಿಗೆ ವಿದ್ಯಾರ್ಥಿವೇತನ ಸೇರಿದಂತೆ ಇತರೆ ಕಾರ್ಯಗಳಿಗೆ ಸಮಸ್ಯೆಯಾಗಲಿದೆ. ಜಿಲ್ಲೆಯಲ್ಲಿ ಆಧಾರ್ ಕಾರ್ಡ್ ಪಡೆಯಲು ಜನ್ಮ ಪ್ರಮಾಣ ಪತ್ರ ವಿತರಣೆಗೆ ಇರುವ ತೊಡಕುಗಳ ಕುರಿತು ಡಿಸಿ ಮತ್ತು ಜಿಪಂ ಸಿಇಒ ಗಮನಕ್ಕೆ ತಂದು ಚರ್ಚಿಸಬೇಕು. ಇದರಿಂದ ಮಕ್ಕಳಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದರು.

ಆರ್.ಬಿ.ಎಸ್.ಕೆ ತಂಡದ ಅಧಿಕಾರಿಗಳು ಜಿಲ್ಲಾ ಆರೋಗ್ಯಾಧಿಕಾರಿಗಳೊಂದಿಗೆ ಚರ್ಚಿಸಿ, ನಿಯಮಿತವಾಗಿ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ನಡೆಸಬೇಕು. ಆಯೋಗಕ್ಕೆ ಜಿಪಿಎಸ್ ಪೋಟೋ ಸಹಿತ ಮಾಹಿತಿ ಸಲ್ಲಿಸಬೇಕು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ನಿಯಮಿತವಾಗಿ ಶಾಲೆಗಳಿಗೆ ಭೇಟಿ ನೀಡಬೇಕು. ಮಕ್ಕಳೊಂದಿಗೆ ಸಮಸ್ಯೆಗಳ ಕುರಿತು ಚರ್ಚಿಸಿ ಬೇಕಾದ ವ್ಯವಸ್ಥೆ ಕಲ್ಪಿಸಬೇಕು. ಇದು ಅಧಿಕಾರಿಗಳ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಕಳೆದ ಸಭೆಯಲ್ಲಿ ನಡೆದ ಚರ್ಚೆಗಳ ಕುರಿತು ನಡಾವಳಿಗಳ ಮಾಹಿತಿ ದಾಖಲಿಸದೇ ಇರುವುದರ ಕುರಿತು ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದರು.

ಸಭೆಯಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ತ್ರಿವೇಣಿ ಪತ್ತಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರಾದೇವಿ, ಶಾಲಾ ಮತ್ತು ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸದಸ್ಯರಾದ ಚೆಟ್ಲಾ ವೆಂಕಟೇಶ್, ಗೌಸಿಯಾ, ಕಾನೂನು ಪರಿವೀಕ್ಷಕ ಈಶ್ವರ್ ರಾವ್ ಸೇರಿದಂತೆ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್‌ಪಿ, ಸಿಆರ್‌ಪಿ, ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಇತರರು ಉಪಸ್ಥಿತರಿದ್ದರು.

## ವಸತಿ ನಿಲಯ ಮತ್ತು ಶಾಲೆಗೆ ಭೇಟಿ ಪರಿಶೀಲನೆ ಅಧ್ಯಕ್ಷ ಶಶಿಧರ ಭೇಟಿ



ಬಳ್ಳಾರಿ,ನ.27(ಕರ್ನಾಟಕ ವಾರ್ತೆ):

ನಗರದ ಬಸವ ಭವನ ಹತ್ತಿರದ ಹಿಂದುಳಿದ ವರ್ಗಗಳ ಬಾಲಕಿಯರ ವಸತಿ ನಿಲಯಕ್ಕೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅವರು ಗುರುವಾರ ಭೇಟಿ ನೀಡಿ ವಸತಿ ನಿಲಯದಲ್ಲಿ ಕೊಠಡಿ, ಶೌಚಾಲಯ, ಉಗ್ರಾಣ ಕೊಠಡಿ, ಕುಡಿಯುವ ನೀರಿನ ಘಟಕ, ಅಡುಗೆ ಕೋಣೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ವಸತಿ ನಿಲಯದಲ್ಲಿ ಅಡುಗೆ ಬಳಸುವ ಕಳಪೆ ತರಕಾರಿ ಮತ್ತು ಆಹಾರ ಧಾನ್ಯ ಕಂಡು ವಾರ್ಡನ್ ವಿರುದ್ಧ ಅಸಮಾಧಾನ ವ್ಯಪಡಿಸಿದರು. ಮುಂದಿನ ದಿನಗಳಲ್ಲಿ ಗುಣಮಟ್ಟ ಕಾಪಾಡುವಂತೆ ಸೂಚನೆ ನೀಡಿದರು. ವಿದ್ಯಾರ್ಥಿನಿಯರಿಗೆ ಏನಾದರೂ ಸಮಸ್ಯೆ ಇದ್ದಲ್ಲಿ ಹಾಗೂ ತೊಂದರೆ ಆದಲ್ಲಿ 1098 ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಕಿವಿಮಾತು ಹೇಳಿದರು.

ಬಳಿಕ ನಗರದ ಹೊರವಲಯದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಕಾಲೇಜಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಅಗತ್ಯ ಸಲಹೆ-ಸೂಚನೆ ನೀಡಿದರು. ನಂತರ ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ಭೇಟಿ ನೀಡಿ, ದಿನನಿತ್ಯದ ಆಹಾರ ನೀಡುವ ವೇಳಾಪಟ್ಟಿ, ಕಾಲಕಾಲಕ್ಕೆ ಖೈದಿಗಳ ಆರೋಗ್ಯ ತಪಾಸಣೆ, ಅವರಿಗೆ ಒದಗಿಸಲಾದ ಕೆಲಸ ಕುರಿತು ಕಾರಾಗೃಹ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಕೇಂದ್ರ ಕಾರಾಗೃಹದ ಅಧೀಕ್ಷಕಿ ಲತಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ, ಜಿಲ್ಲಾ ನಿರೂಪಣಾಧಿಕಾರಿ ಸವಿತಾ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣ ಘಟಕದ ಅಧಿಕಾರಿಗಳು ಹಾಜರಿದ್ದರು.

## ನ.29 ರಂದು ಬಳ್ಳಾರಿ ಗ್ರಾಮೀಣ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ:

ಬಳ್ಳಾರಿ ಗ್ರಾಮೀಣ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗ ವ್ಯಾಪ್ತಿಯ ಎನ್‌ಹೆಚ್-63 ರಾಷ್ಟ್ರೀಯ ಹೆದ್ದಾರಿ ರಸ್ತೆ ಅಗಲೀಕರಣ ಕಾಮಗಾರಿ ಕಾರ್ಯ ಕೈಗೊಳ್ಳುತ್ತಿರುವುದರಿಂದ ನ.29 ರಂದು ಬೆಳಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ 110/11 ಕೆ.ವಿ ಶ್ರೀಧರಗಡ್ಡೆ ವಿದ್ಯುತ್ ಉಪ-ಕೇಂದ್ರದ ಎಫ್-10 ಸಿಟಿ ಮಾರ್ಗದ ವಕ್ರಾಣಿ ಕ್ಯಾಂಪ್ ಮತ್ತು ಎಫ್-10 ಶ್ರೀಧರಗಡ್ಡೆ ಎನ್‌ಜೆವೈ ಫೀಡರ್ ಮಾರ್ಗದ ಸೋಮಸಮುದ್ರ, ಲಕ್ಷ್ಮಿನಗರ ಕ್ಯಾಂಪ್, ವೀರಾಂಜಿನೇಯ್ಯ ಕ್ಯಾಂಪ್, ಕೋಳೂರು, ಮಧುರೆ, ಭಾಗ್ಯನಗರ ಕ್ಯಾಂಪ್, ಮಲ್ಲಾರೆಡ್ಡಿ ಕ್ಯಾಂಪ್ ಗ್ರಾಮ, ಕೋಳೂರು ಕ್ರಾಸ್, ದಮ್ಮೂರು, ಡಿ.ಕಗ್ಗಲ್ ವಿ.ಟಿ.ಕ್ಯಾಂಪ್, ವಕ್ರಾಣಿ ಕ್ಯಾಂಪ್ ಸೇರಿದಂತೆ ಮುಂತಾದ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮೋಹನಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲಕ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ:



ನಗರದ ಅಲ್ಲಿಪುರ ಗ್ರಾಮದ ಸುಗ್ಗಲಮ್ಮ ಗುಡಿ ಹತ್ತಿರ ಶಂಕರ.ಕೆ ಎನ್ನುವ 11 ವರ್ಷದ ಬಾಲಕನು ನ.22 ರಂದು ಮನೆಯಿಂದ ಆಟವಾಡಲು ಹೋಗಿ ಬರುವುದಾಗಿ ಹೇಳಿ ಮರಳಿ ಬಾರದೇ ಕಾಣೆಯಾಗಿರುವ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಅಸಿಸ್ಟೆಂಟ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

*ಚಹರೆ ಗುರುತು:*

ಅಂದಾಜು 04 ಅಡಿ ಎತ್ತರ, ಕೋಲು ಮುಖ, ಕಪ್ಪು ಮೈಬಣ್ಣ, ಕಪ್ಪು ಕೂದಲು, ತೆಳುವಾದ ಮೈಕಟ್ಟು ಹೊಂದಿದ್ದು, ಮೂಗಿನ ಹತ್ತಿರ ಗಾಯ ಇರುತ್ತದೆ. ಕಾಣೆಯಾದ ಸಂದರ್ಭದಲ್ಲಿ ಹಸಿರು ಬಣ್ಣದ ಅರ್ಧ ತೋಳಿನ ಟಿ-ಶರ್ಟ್ ಹಾಗೂ ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.

ಬಾಲಕನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392-276461, ಮೊ.9480803049 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರ್ಯಾಗಾರದಲ್ಲಿ ಮಕ್ಕಳ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಕಳವಳ
## ಸಾಮಾಜಿಕ ಜಾಲತಾಣಗಳಿಂದ ಶೇ.99 ರಷ್ಟು ಮಕ್ಕಳಿಗೆ ಮಾನಸಿಕ ಖಿನ್ನತೆ

ಬಳ್ಳಾರಿ,ನ.27(ಕರ್ನಾಟಕವಾರ್ತೆ):

ಕೇಂದ್ರ ಮತ್ತು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಿಂದ ರಾಜ್ಯದ ಬೆಂಗಳೂರು, ಚಿಕ್ಕಮಗಳೂರು, ಬೆಳಗಾವಿ, ರಾಯಚೂರು ಮತ್ತು ಚಾಮರಾಜನಗರ ಸೇರಿ ಐದು ಜಿಲ್ಲೆಗಳಲ್ಲಿ ನಡೆಸಲಾದ ಸಮೀಕ್ಷೆಯಿಂದ ಶೇ.99 ರಷ್ಟು ಮಕ್ಕಳು ಸಾಮಾಜಿಕ ಜಾಲತಾಣಗಳಿಗೆ ವ್ಯಸನಿಗಳಾಗಿದ್ದು, ಮಾನಸಿಕವಾಗಿ ಸದೃಢರಾಗಿಲ್ಲ, ಖಿನ್ನತೆಗೆ ಒಳಗಾಗಿದ್ದಾರೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅವರು ಹೇಳಿದರು.

ಗುರುವಾರ ನಗರದ ಬಿಡಿಎಎ ಸಭಾಂಗಣದಲ್ಲಿ ರೀಡ್ಸ್ ಸಂಸ್ಥೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಸಿಎಸಿಎಲ್-ಕೆ ಇವರ ಸಂಯುಕ್ತಾಶ್ರಯದಲ್ಲಿ 'ಬಾಲ್ಯವಿವಾಹ ತಡೆಗಟ್ಟುವಲ್ಲಿ ಸವಾಲುಗಳು ಮತ್ತು ಪರಿಹಾರಗಳು' ಎಂಬ ವಿಷಯದ ಕುರಿತು ಏರ್ಪಡಿಸಿದ್ದ ಒಂದು ದಿನದ ರಾಜ್ಯಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದ ಅವರು, ಪೋಷಕರು ಪ್ರಸ್ತುತದಲ್ಲಿ ಮಕ್ಕಳಿಗೆ ಒಳ್ಳೆಯ ಚಿಂತನೆಗಳನ್ನು ಬಿತ್ತಬೇಕಿದೆ. ಅವರ ಚಲನ-ವಲನಗಳ ಮೇಲೆ ನಿಗಾವಹಿಸಬೇಕು. ಉತ್ತಮ ನಾಗರಿಕರನ್ನಾಗಿಸಬೇಕು ಎಂದು ಹೇಳಿದರು.

ಸರ್ಕಾರ ಮತ್ತು ಇಲಾಖೆಗಳಿಂದ ಎಲ್ಲಾ ಕಾರ್ಯ ನಿರ್ವಹಿಸುವುದು ಕಷ್ಟಸಾಧ್ಯ. ಸಮಾಜದಲ್ಲಿ ಸರ್ಕಾರ ಮತ್ತು ಸಾರ್ವಜನಿಕ ವಲಯಗಳಲ್ಲಿ ಸಂಪರ್ಕ ಸೇತುವೆಯಂತೆ ಸಂಘ-ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ ಎಂದರು.

ಮುಂದಿನ 2030 ರೊಳಗೆ ದೇಶದಲ್ಲಿ ಬಾಲ್ಯವಿವಾಹ ಮುಕ್ತ ಭಾರತವನ್ನಾಗಿಸಲು ಎಲ್ಲಾ ಇಲಾಖೆ, ಸಂಘ-ಸಂಸ್ಥೆಗಳು, ಸಾರ್ವಜನಿಕರು ಕೈಜೋಡಿಸಬೇಕು ಎಂದು ಕೇಂದ್ರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಅನ್ನಪೂರ್ಣದೇವಿ ಅವರು ಕರೆ ನೀಡಿದ್ದಾರೆ ಎಂದರು.

ಬಾಲ್ಯವಿವಾಹ ನಿಷೇಧಕ್ಕೆ ರಾಜ್ಯ ಸರ್ಕಾರವು ಅನೇಕ ಎಸ್‌ಓಪಿಗಳನ್ನು ಜಾರಿತಂದಿದೆ. ಸಮಾಜದಲ್ಲಿ ಅನಿಷ್ಠ ಪಿಡುಗಾಗಿ ಬೇರೂರಿರುವ ಬಾಲ್ಯವಿವಾಹ ಪದ್ಧತಿಯನ್ನು ಸಂಪೂರ್ಣವಾಗಿ ಕಿತ್ತೊಗೆಯಬೇಕಿದೆ. ಹಾಗಾಗಿ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕಿದೆ. ಇದಕ್ಕೆ ಪ್ರತಿಯೊಬ್ಬರ ಸಹಕಾರ ಅಗತ್ಯವಾಗಿದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ರಾಜ್ಯದಲ್ಲಿ 60 ಸಾವಿರಕ್ಕೂ ಹೆಚ್ಚು ಬಾಲ್ಯವಿವಾಹ ನಿಷೇಧಾಧಿಕಾರಿಗಳು ಇದ್ದು, ಅಂದರೆ ಸರಿ-ಸುಮಾರು ಪ್ರತಿ ಜಿಲ್ಲೆಯಲ್ಲಿ 2,000 ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಆದರೂ ಬಾಲ್ಯವಿವಾಹ, ಪೋಕ್ಸೋ ಪ್ರಕರಣಗಳು ಕಂಡುಬರುತ್ತಿವೆ. ಈ ಕುರಿತು ಪ್ರತಿಯೊಬ್ಬರೂ ವಿಮರ್ಶೆ ಮಾಡಿಕೊಳ್ಳಬೇಕಿದೆ. ಬಾಲ್ಯವಿವಾಹ, ಪೋಕ್ಸೋ ಕಾಯ್ದೆಗಳ ಕುರಿತು ಅರಿವು ಹೊಂದಬೇಕಿದೆ. ಸರ್ಕಾರ, ಇಲಾಖೆ ಮತ್ತು ಸ್ವಯಂ ಸೇವಾ ಸಂಸ್ಥೆಗಳೊಂದಿಗೆ ಸಾರ್ವಜನಿಕರು ಸಹ ಕೈಜೋಡಿಸಬೇಕು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಮಾತನಾಡಿ, ಸರ್ಕಾರ ಶಿಕ್ಷಣಕ್ಕಾಗಿ ಹಲವು ರೀತಿಯ ಸೌಲಭ್ಯಗಳನ್ನು ನೀಡುತ್ತಿದೆ. ಇವುಗಳನ್ನು ಮಕ್ಕಳು ಬಳಸಿಕೊಳ್ಳಬೇಕು. ಜ್ಞಾನದಿಂದ ಮಾತ್ರ ಎಲ್ಲವನ್ನು ಪಡೆಯಲು ಸಾಧ್ಯ. ಹಾಗಾಗಿ ಮಕ್ಕಳು ಓದುವ ವಯಸ್ಸಿನಲ್ಲಿ ಓದಬೇಕು. ಪ್ರೀತಿ-ಪ್ರೇಮ, ಸಾಮಾಜಿಕ ಜಾಲತಾಣಗಳು ಹಾಗೂ ಇನ್ನಿತರೆ ಚಟುವಟಿಕೆಗಳಿಗೆ ಆಕರ್ಷಿತರಾಗಬಾರದು ಎಂದು ಕಿವಿಮಾತು ಹೇಳಿದರು.

ಸಾಮಾನ್ಯವಾಗಿ ಮಕ್ಕಳು ತಪ್ಪು ಮಾಡುವುದು ಸಹಜ, ಅದನ್ನು ತಿದ್ದಿಕೊಂಡು ಆದರ್ಶ ಜೀವನ ರೂಪಿಸಿಕೊಳ್ಳಬೇಕು. ಚಿಕ್ಕವಯಸ್ಸಿನಲ್ಲಿ ಜೀವನದ ಸ್ವಾರಸ್ಯ ಕಳೆದುಕೊಂಡಲ್ಲಿ ಇಡೀ ಜೀವನ ಕತ್ತಲೆಯಲ್ಲಿ ಕಳೆಯಬೇಕಾಗುತ್ತದೆ. ಹಾಗಾಗಿ ಶಿಕ್ಷಣ ಪಡೆದುಕೊಳ್ಳಬೇಕು. ಯಾರೂ ಶಾಲೆಯಿಂದ ಹೊರಗುಳಿಯಬಾರದು. ಕಾನೂನು ಅರಿವು ಹೊಂದಬೇಕು ಎಂದು ತಿಳಿಸಿದರು.

ರೀಡ್ಸ್ ಸಂಸ್ಥೆ ಕಾರ್ಯನಿರ್ವಾಹಕ ನಿರ್ದೇಶಕ ಸಿ.ತಿಪ್ಪೇಶಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ದೇಶದ ಭವಿಷ್ಯ ಮಕ್ಕಳು. ಮಕ್ಕಳ ಮೇಲೆ ಹಲವಾರು ರೀತಿಯ ಶೋಷಣೆಗಳಾಗುತ್ತಿರುವುದು ಶೋಷನೀಯ ಸಂಗತಿ. ಬಾಲ್ಯವಿವಾಹ, ಪೋಕ್ಸೋ ಘಟನೆಗಳಲ್ಲಿ ಅಪ್ರಾಪ್ತೆಯರು ಬಾಲಗರ್ಭಿಣಿಯರಾಗುತ್ತಿದ್ದಾರೆ. ಇದಕ್ಕೆ ಪ್ರಮುಖ ಕಾರಣ ಬಡತನ, ಅನಕ್ಷರತೆ. ಸರ್ಕಾರ, ಇಲಾಖೆಗಳ ಜೊತೆಗೂಡಿ ಸ್ವಯಂ-ಸೇವಾ ಸಂಸ್ಥೆಗಳು ಸಮುದಾಯಗಳಲ್ಲಿ ಜಾಗೃತಿ ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಕ್ಕಳ ರಕ್ಷಣೆಗಾಗಿ ಕಾನೂನು ಪುಸ್ತಕ (2ನೇ ಆವೃತ್ತಿ) ಪುಸ್ತಕ, ಮಕ್ಕಳ ಸ್ನೇಹಿ ಕಿರುಪುಸ್ತಕ ಮತ್ತು ಬಾಲ್ಯವಿವಾಹ ನಿಷೇಧ ಕುರಿತು ಪೋಸ್ಟರ್ ಬಿಡುಗಡೆಗೊಳಿಸಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ನಿಕಟಪೂರ್ವ ಅಧ್ಯಕ್ಷ ಹೆಚ್.ಸಿ ರಾಘವೇಂದ್ರ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ 'ಬಾಲ್ಯವಿವಾಹ ತಡೆಗಟ್ಟುವಲ್ಲಿ ಸವಾಲುಗಳು ಮತ್ತು ಪರಿಹಾರಗಳು' ಎಂಬ ವಿಷಯ ಕುರಿತು ವಿಸ್ತಾರವಾದ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಬಳ್ಳಾರಿ ನಗರ ಡಿವೈಎಸ್‌ಪಿ ಹಾಗೂ ಎಸ್.ಜೆ.ಪಿ.ಯು ಹಿರಿಯ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ ಚಂದ್ರಕಾಂತ ನಂದಾರೆಡ್ಡಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಸುಭದ್ರಾದೇವಿ, ರೀಡ್ಸ್ ಸಂಸ್ಥೆಯ ಕಾರ್ಯಕಾರಿ ಸಮಿತಿಯ ಸದಸ್ಯ ಹನುಮಂತ ರೆಡ್ಡಿ, ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥ ಸುರೇಶ್ ಸೇರಿದಂತೆ ಸಹಾಯವಾಣಿಯ ಸಂಯೋಜಕರು 1098 ಮತ್ತು ರಾಜ್ಯದ ವಿವಿಧೆಡೆಯಿಂದ ಆಗಮಿಸಿದ್ದ ಯುವಕ-ಯುವತಿಯರು, ಸಾರ್ವಜನಿಕರು ಉಪಸ್ಥಿತರಿದ್ದರು.

ರೀಡ್ಸ್ ಸಂಸ್ಥೆಯ ಸಂಯೋಜಕ ಕೆ.ಎಂ.ತಿಪ್ಪೇಸ್ವಾಮಿ ಸ್ವಾಗತಿಸಿ, ಕಾರ್ಯಾಗಾರ ನಿರೂಪಿಸಿದರು. ಯೋಜನಾ ವ್ಯವಸ್ಥಾಪಕಿ ಕೆ.ಸೀತಾಮಹಾಲಕ್ಷ್ಮಿ ವಂದಿಸಿದರು.

## ಡಿ.01 ರಂದು ವಿಶ್ವ ಏಡ್ಸ್ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ:

ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಪೋಲಿಸ್ ಇಲಾಖೆ, ಜಿಲ್ಲಾ ಆಸ್ಪತ್ರೆ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ "ಹೆಚ್‌ಐವಿ/ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸಲು ಇರುವ ಅಡೆತಡೆಗಳನ್ನು ಕೊನೆಗಾಣಿಸೋಣ" ಎಂಬ ಘೋಷವಾಕ್ಯದಡಿ ಡಿ.01 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಸಭಾಂಗಣದಲ್ಲಿ ವಿಶ್ವ ಏಡ್ಸ್ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಅಂದು ಬೆಳಿಗ್ಗೆ 07 ಗಂಟೆಗೆ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ವಾಕ್‌ಥಾನ್ ಜಾಥಾ ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್. ಎನ್ ಹೊಸಮನೆ ಅವರು ಚಾಲನೆ ನೀಡುವರು.

ಬಳಿಕ ಬೆಳಗ್ಗೆ 10.30 ಗಂಟೆಗೆ ವೇದಿಕೆ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ ಬಾಬು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಮತ್ತು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳಾದ ಡಾ.ಇಂದ್ರಾಣಿ ವಿ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು. ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ತುಕಾರಾಂ ರಾವ್ ಬಿ.ವಿ, ಬಳ್ಳಾರಿ ತಾಲ್ಲೂಕು ಆರೋಗ್ಯ ಅಧಿಕಾರಿ ಹಾಗೂ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ., ಜಾರಿ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಅಸಾಂಕ್ರಾಮಿಕ ಅಧಿಕಾರಿ ಡಾ.ವಿರೇಂದ್ರ ಕುಮಾರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಎಫ್‌ಪಿಎಐ ವ್ಯವಸ್ಥಾಪರಾದ ವಿಜಯಲಕ್ಷ್ಮಿ, ನಿತ್ಯಜೀವನ ಸಂಸ್ಥೆಯ ಅಧ್ಯಕ್ಷರಾದ ಹೇಮಲತ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

## ಬಳ್ಳಾರಿ: ಸಂಸದ ಈ.ತುಕಾರಾಮ್ ಅವರ ಪ್ರವಾಸ

ಬಳ್ಳಾರಿ,ನ.27(ಕರ್ನಾಟಕವಾರ್ತೆ):



ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರಾದ ಈ.ತುಕಾರಾಮ್ ಅವರು ನ.28 ರಂದು ಬಳ್ಳಾರಿಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ನ.28 ರಂದು ಬೆಳಿಗ್ಗೆ 10.30 ಗಂಟೆಗೆ ಬಳ್ಳಾರಿ ಹೊರವಲಯದ ಹೊಸ ಬೈಪಾಸ್‌ಯ ವೇಣಿವೀರಾಪುರ ಹತ್ತಿರದ ರಾಷ್ಟ್ರೀಯ ಹೆದ್ದಾರಿ (ಎನ್‌ಹೆಚ್-67) ಯೋಜನೆಯಡಿ ವೇಣಿವೀರಾಪುರ ದಿಂದ ಹಗರಿ ವರೆಗೆ ನಿರ್ಮಿಸಲಾದ ಬಳ್ಳಾರಿ ಬೈಪಾಸ್ ರಸ್ತೆಯ ಉದ್ಘಾಟನೆ ನೆರವೇರಿಸುವರು.

ಮಧ್ಯಾಹ್ನ 12 ಗಂಟೆಗೆ ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಹತ್ತಿರ 2024-25ನೇ ಸಾಲಿನ ಸಂಸದರ 10 ಲಕ್ಷ ರೂ. ಅನುದಾನದಲ್ಲಿ ಬಸ್ ತಂಗುದಾಣದ ಭೂಮಿಪೂಜೆಯಲ್ಲಿ ಭಾಗವಹಿಸುವರು.

ಬಳಿಕ ಮಧ್ಯಾಹ್ನ 12.30 ಕ್ಕೆ ಜಿಲ್ಲಾ ಆಸ್ಪತ್ರೆಯಲ್ಲಿ ಎನ್.ಎಂ.ಡಿ.ಸಿ ಸಿ.ಎಸ್.ಆರ್ 1200 ಲಕ್ಷ ರೂ. ಅನುದಾನದಲ್ಲಿ ಎಂ.ಆರ್.ಐ ಸ್ಕ್ಯಾನಿಂಗ್ ಸೆಂಟರ್ ಉದ್ಘಾಟನೆ ಮಾಡುವರು. ನಂತರ ನಗರದ ರಾಘವೇಂದ್ರ ಕಾಲೋನಿಯಲ್ಲಿ 2024-25ನೇ ಸಾಲಿನ ಸಂಸದರ 25 ಲಕ್ಷ ರೂ. ಅನುದಾನದಲ್ಲಿ ನಿರ್ಮಿಸಿರುವ ಬಳ್ಳಾರಿಯ ಆದರ್ಶ ಪಾರ್ಕ್‌ನಲ್ಲಿ ಪೇವರ್ಸ್ ಅಳವಡಿಕೆ ಮತ್ತು ಪಿರಾಮಿಡ್ ಯೋಗಕೇಂದ್ರಕ್ಕೆ ಭೇಟಿ ನೀಡುವರು.

ನಂತರ ಮಧ್ಯಾಹ್ನ 02.15 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ವಿಶ್ವಕರ್ಮ ಯೋಜನೆಯಡಿ ಫಲಾನುಭವಿಗಳಿಗೆ ಕಿಟ್ ವಿತರಣೆ ಮಾಡುವರು. ಬಳಿಕ ಜಿಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬಳ್ಳಾರಿ ಜಿಲ್ಲಾ ಮಟ್ಟದ ಲೀಡ್ ಬ್ಯಾಂಕ್‌ನ ತ್ರೈಮಾಸಿಕ ಡಿ.ಎಲ್.ಆರ್.ಸಿ/ಡಿ.ಸಿ.ಸಿ ಸಭೆಯಲ್ಲಿ ಭಾಗವಹಿಸುವರು ಎಂದು ಸಂಸದರ ಆಪ್ತ ಸಹಾಯಕರು ತಿಳಿಸಿದ್ದಾರೆ.

## ಭಾರತೀಯರಿಗೆ ಸಂವಿಧಾನವು ಪವಿತ್ರ ಗ್ರಂಥ: ನ್ಯಾ.ಕೆ.ಜಿ.ಶಾಂತಿ

ಬಳ್ಳಾರಿ,ನ.27(ಕರ್ನಾಟಕ ವಾರ್ತೆ):

ವಿಶ್ವದ ಅತಿದೊಡ್ಡ ಬಲಿಷ್ಠವಾದ, ಶಕ್ತಿಯುತವಾದ ಲಿಖಿತ ಸಂವಿಧಾನ ಹೊಂದಿದ ದೇಶ ನಮ್ಮದು. ಭಾರತೀಯರಿಗೆ ಸಂವಿಧಾನವು ಒಂದು ಪವಿತ್ರಗ್ರಂಥವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಕೆ.ಜಿ.ಶಾಂತಿ ಅವರು ಹೇಳಿದರು.

ಜಿಲ್ಲಾ ನ್ಯಾಯಾಂಗ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ನಗರದ ಇವರ ಸಂಯುಕ್ತಾಶ್ರಯದಲ್ಲಿ ನಗರದ ತಾಳೂರು ರಸ್ತೆಯ ಹೊಸ ನ್ಯಾಯಾಲಯದ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಸಂವಿಧಾನದ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ನಾವೆಲ್ಲರೂ ಸಮಾನರು, ಪ್ರತಿಯೊಬ್ಬರೂ ನಮ್ಮ ಕರ್ತವ್ಯ ತಿಳಿದುಕೊಂಡು ದೇಶದ ಭದ್ರತೆಗಾಗಿ ಅಲ್ಲದೇ, ನಮ್ಮ ಭದ್ರತೆ-ಗಾಗಿ ಸಹ ಕಾನೂನುಗಳನ್ನು ಪಾಲಿಸುತ್ತ ಸಂವಿಧಾನದ ಹಕ್ಕುಗಳನ್ನು ಮತ್ತು ಕರ್ತವ್ಯಗಳನ್ನು ಪಾಲಿಸಿದರೆ ಸಂತೋಷದ ಜೀವನ ಹಾಗೂ ರಾಷ್ಟ್ರದ ಏಕತೆ, ಅಖಂಡತೆ ಮತ್ತು ವ್ಯಕ್ತಿ ಗೌರವವನ್ನು ಉಳಿಸಿಕೊಳ್ಳಬಹುದು ಎಂದರು.

ಸಂವಿಧಾನದ ಮಹತ್ವ, ಅದರ ರಚನಾಕಾರರು ಮತ್ತು ಆಧುನಿಕ ಭಾರತಕ್ಕೆ ಅದರ ಪ್ರಸ್ತುತತೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಭಾರತ ಸರ್ಕಾರವು 2015 ರಲ್ಲಿ ನವೆಂಬರ್ 26 ಅನ್ನು ಅಧಿಕೃತವಾಗಿ ಸಂವಿಧಾನ ದಿನ ಎಂದು ಘೋಷಿಸಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸಲಾಯಿತು ಎಂದು ಹೇಳಿದರು.

ನಮ್ಮ ಸಂವಿಧಾನವು ಲಿಖಿತ ರೂಪದಲ್ಲಿದ್ದು, ಆಂಗ್ಲ ಮತ್ತು ಹಿಂದಿ ಎರಡರಲ್ಲೂ ಕೈಬರಹದ ಕ್ಯಾಲಿಗ್ರಫಿಯಲ್ಲಿ ಬರೆಯಲಾಗಿದೆ. ಇದರ ಮೂಲ ಪ್ರತಿಗಳನ್ನು ಪ್ರೇಮ್ ಬಿಹಾರಿ ನಾರಾಯಣ ರೈಜಾದಾ ಅವರು ದೇವನಾಗರಿ ಲಿಪಿಯಲ್ಲಿ ಬರೆದಿದ್ದಾರೆ. ಆಚಾರ್ಯ ನಂದಲಾಲ್ ಬೋಸ್ ಅವರ ನೇತೃತ್ವದಲ್ಲಿ ಶಾಂತಿನಿಕೇತನದ ಕಲಾವಿದರು ಕೈಯಿಂದ ರಚಿಸಿದ್ದಾರೆ. ಮೂಲ ಪ್ರತಿಗಳನ್ನು ಈಗಲೂ ಸಹ ಸಂಸತ್ತಿನ ಗ್ರಂಥಾಲಯದಲ್ಲಿ ಸಂರಕ್ಷಿಸಲಾಗಿದೆ ಎಂದರು.

ಸಮಾಜದಲ್ಲಿ ಬದಲಾದ ವ್ಯವಸ್ಥೆಗೆ ತಕ್ಕಂತೆ ಹಲವು ಬಾರಿ ಸಂವಿಧಾನದ ಕಾಯ್ದೆಗಳು ಬದಲಾವಣೆ ಮತ್ತು ಸೇರ್ಪಡೆಗೊಂಡಿವೆ. ಪ್ರಾರಂಭದಲ್ಲಿ 395 ವಿಧಿಗಳು, 22 ಭಾಗಗಳು, ಮತ್ತು 8 ಅನುಸೂಚಿಗಳು ಇದ್ದು, ನಂತರ 368 ವಿಧಿಗಳು, 28 ಭಾಗಗಳು ಸೇರ್ಪಡೆಗೊಂಡಿವೆ. ಸಂವಿಧಾನದಲ್ಲಿ ರಾಜನೀತಿ, ಮೂಲಭೂತ ಕರ್ತವ್ಯ, ಕಾನೂನು ವ್ಯವಸ್ಥೆ, ಸ್ವಾತಂತ್ರ ಸಮಾನತೆ, ಶಿಕ್ಷಣ, ಭಾರತೀಯ ಪ್ರಜೆಯ ಕರ್ತವ್ಯ ಸೇರಿದಂತೆ ಇನ್ನಿತರೆ ವಿಷಯಗಳ ಬಗ್ಗೆ ತಿಳಿಸಿಕೊಡಲಾಗಿದೆ ಎಂದರು.

2002 ರಲ್ಲಿ ಪೋಷಕರು ಮಕ್ಕಳನ್ನು ದೇಶದ ಶಕ್ತಿಯಾಗಿ, ಆಸ್ತಿಯಾಗಿ ಬೆಳೆಸುವುದು ಹಾಗೂ ಕಡ್ಡಾಯವಾಗಿ ಶಿಕ್ಷಣ ನೀಡುವುದು ಪೋಷಕರ ಕರ್ತವ್ಯವಾಗಿದೆ ಎಂಬ ಕಾಯ್ದೆ ಸೇರಿದಂತೆ ಹಲವಾರು ಕಾಯ್ದೆಗಳು ಜಾರಿಯಾದವು. ಸಂವಿಧಾನದ ಪೀಠಿಕೆ ಓದುವುದರಿಂದ ಭಾರತದ ಪ್ರಜೆಗಳಾದ ನಮ್ಮ ಕರ್ತವ್ಯ ಏನೆಂದು ತಿಳಿಯಬಹುದು ಎಂದು ಸಂವಿಧಾನದ ಸಮಗ್ರ ಮಾಹಿತಿ ನೀಡಿದರು.

ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾದ ವೆಂಕಟೇಶ ಅವರು ಸಂಪನ್ಮೂಲ ವ್ಯಕ್ತಿಯಾಗಿ ಸಂವಿಧಾನದ ಮಹತ್ವದ ಬಗ್ಗೆ ಮಾತನಾಡಿದರು.

ಕಾರ್ಯಕ್ರಮಕ್ಕೂ ಮುನ್ನ ನ್ಯಾ.ಕೆ.ಜಿ ಶಾಂತಿ ಅವರು ಸಂವಿಧಾನ ಪೀಠಿಕೆಯ ಪ್ರತಿಜ್ಞಾ ವಿಧಿ ಭೋದಿಸಿದರು.

# ಜಿಲ್ಲೆಯಲ್ಲಿ ಇಸ್ಪೀಟ್, ಮರಳು ದಂಧೆ – ಕಾರಜೋಳ ಆರೋಪ

ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಹಾಗೂ ಇಸ್ಪೀಟ್ ಆಟ ಅವ್ಯಾಹತವಾಗಿ ನಡೆಯುತ್ತಿದೆ. ಇದಕ್ಕೆ ಕಡಿವಾಣ ಹಾಕಬೇಕಾದ ಸರ್ಕಾರ ಪಾಲು ಪಡೆಯುತ್ತಿದೆ ಎಂದು ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಆರೋಪಿಸಿದರು. ನಗರದಲ್ಲಿ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ರೈತರಿಗೆ ಅನ್ಯಾಯ ಮಾಡು ತ್ತಿದೆ ಎಂದು ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಆರೋಪಿಸಿದರು. ನಗರದಲ್ಲಿ ಗುರುವಾರ ಬಿಜೆಪಿ ರೈತ ಮೋರ್ಚಾ ರಾಜ್ಯ ಸರ್ಕಾರದ ವಿರುದ್ಧ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರ ರೈತ ವಿರೋಧಿಯಾಗಿದೆ ಎಂದರು. ರೈತರ ಉತ್ಪನ್ನಗಳಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ

ಸರ್ಕಾರ ಬೆಂಬಲ ಬೆಲೆ. ಘೋಷಿಸಿದ್ದರೂ ಮೆಕ್ಕೆಜೋಳ ಖರೀದಿ ಕೇಂದ್ರ ಪ್ರಾರಂಭಿಸಿಲ್ಲ. ಇದಕ್ಕಾಗಿ ಹಣ ಬಿಡುಗಡೆ ಮಾಡಿಲ್ಲ. ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದರೂ ಸರ್ಕಾರ ಗಂಭೀರವಾಗಿ ಪರಿಗಣಿಸುತ್ತಿಲ್ಲ ಎಂದು ದೂರಿದ ಕಾರಜೋಳ, ಸಿದ್ದರಾಮಯ್ಯ ಸರ್ಕಾರ ರೈತ ವಿರೋಧಿ ಎಂದರು. ಇತ್ತೀಚೆಗೆ ಮುಧೋಳದಲ್ಲಿ ನಡೆದ ರೈತರ ಪ್ರತಿಭಟನೆಯಲ್ಲಿ ರೈತರ ಮೇಲೆ ಸುಳ್ಳು ಪ್ರಕರಣ ದಾಖಲಿಸಿದ್ದಾರೆ. ತಪ್ಪು ಮಾಡಿದವರು ಯಾರೋ, ಅಮಾಯಕರ ಮೇಲೆ ಕೇಸ್ ಹಾಕಿದ್ದಾರೆ ಎಂದ ಅವರು, ಜಿಲ್ಲೆಯಲ್ಲಿ ಅರಾಜಕತೆ ಉಂಟಾಗಿದೆ. ಅಕ್ರಮ ಮರಳು ದಂಧೆ ಎಗ್ಗಿಲ್ಲದೆ ಸಾಗಿದೆ. ಹೊಲಗಳಲ್ಲಿ ಇಸ್ಪೀಟ್ ಆಟ ನಡೆಯುತ್ತಿದ್ದರೂ ಕೇಳುವವರಿಲ್ಲ. ಒಟ್ಟಾರೆ ಕಾನೂನು ಸುವ್ಯವಸ್ಥೆ ಹಾಳಾಗಿದೆ ಎಂದು ಆಪಾದಿಸಿದರು.

ಮಾಡಿದ ತಪ್ಪಿಗೆ ರೈತರು ಅನುಭ"ಸುವಂತಾಗಿದೆ. ಜಿಲ್ಲೆಯ ತೋಟದ ಮನೆಗಳು ಇಸ್ಪೇಟ್ ಅಡ್ಡೆಗಳಾಗಿವೆ. ಅಕ್ರಮ ಮರಳು ದಂಧೆ ಅವ್ಯಾಹತವಾಗಿ ಜಿಲ್ಲೆಯಲ್ಲಿ ನಡೆದಿದ್ದು, ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ. ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಿಗೆಟ್ಟು ಹೋಗಿದೆ ಎಂದರು. ಕುರ್ಚಿ ಕಾದಾಟದಲ್ಲಿ ಆಡಳಿತವನ್ನೇ ಮರೆತ್ತಿದ್ದಾರೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯಗಳು ನಡೆಯುತ್ತಿಲ್ಲ. ಇದನ್ನು ಬಿಜೆಪಿ ಉಗ್ರವಾಗಿ ಖಂಡಿಸುತ್ತದೆ. ಮುಂಬರುವ ದಿನಗಳಲ್ಲಿ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ, ರೈತರ ಉತ್ಪನ್ನಗಳನ್ನು ಬೆಂಬಲ ಬೆಲೆಯಲ್ಲಿ ಪಡೆಯಲು ಖರೀದಿ ಕೇಂದ್ರ ತೆರೆಯದೆ ಇರುವುದು ಖಂಡನೀಯ. ಸರ್ಕಾರ ಜನರನ್ನು ಮರೆತಿದ್ದು, ಬಣ ರಾಜಕಾರಣದಲ್ಲಿ ಕಾಲಹರಣ ಮಾಡುತ್ತಿದೆ ಎಂದರು.

ಪ್ರತಿಭಟನಾ ಮೆರವಣಿಗೆ ಬಿಜೆಪಿ ಜಿಲ್ಲಾ ಕಾರ್ಯಾಲಯದಿಂದ ಆರಂಭವಾಗಿ ಜಿಲ್ಲಾಡಳಿತ ಭವನಕ್ಕೆ ತೆರಳಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ಸಂಸದ ಪಿ.ಸಿ.ಗದ್ದಿಗೌಡರ, ಮಾಜಿ ಶಾಸಕ ರಾಜಶೇಖರ ಶೀಲವಂತ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ್, ರೈತ ಮೋರ್ಚಾದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಗಡಿಯಣ್ಣವರ್ ,ಮಾಜಿ ಉಪಾಧ್ಯಕ್ಷ ಬಸವರಾಜ ಅವರಾದಿ, ನಗರ ಘಟಕ ಅಧ್ಯಕ್ಷ ಬಸವರಾಜ ಹುನಗುಂದ, ಶಶಿಕುಮಾರ ಮುತ್ತಣ್ಣವರ್, ದೂಳಪ್ಪ ಕೊಪ್ಪದ, ಬಸವರಾಜ ಯಂಕಂಚಿ, ಸುರೇಶ ಮಜ್ಜಗಿ, ಮಲ್ಲಯ್ಯ ಮೂಗನೂರಮಠ, ಸತ್ಯನಾರಾಯಣ ಹೇಮಾದ್ರಿ, ರಾಜು ಶಿಂತ್ರೆ, ಶಂಕರ ಗಲಗ ಸೇರಿದಂತೆ ಬಿಜೆಪಿ ಕಾರ್ಯಕರ್ತರು, ರೈತರು ಪಾಲ್ಗೊಂಡಿದ್ದರು.



# ಬಸನಗೌಡ ಗೌಡರಗೆ ಕನ್ನಡ ರತ್ನ' ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ,

**ಬಾಗಲಕೋಟೆ:** ಜಿಲ್ಲೆಯ ಹುನಗುಂದ ತಾಲೂಕಿನ ಬಿಸಲದಿನ್ನಿ ಗ್ರಾಮದ ಬಸನಗೌಡ ಎಂ. ಗೌಡರ ಗೋವಾ ರಾಜ್ಯದಲ್ಲಿ ಕನ್ನಡ ಉಳಿಸಿ,ಬೆಳೆಸುವ ಕಾರ್ಯ ಮಾಡುತ್ತಿರುವುದನ್ನು ಗುರುತಿಸಿ ಅವರಿಗೆ ಗೋವಾ ಕನ್ನಡ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಬಸನಗೌಡ ಗೌಡರ ಅವರು ಗೋವಾ ರಾಜ್ಯದಲ್ಲಿ ಕನ್ನಡ ಶಾಲೆಯ ಶಿಕ್ಷಕರಾಗಿ ಸೇವೆ



ಸಲ್ಲಿಸುವುದರ ಜೊತೆಗೆ ಅಲ್ಲಿ ಕನ್ನಡ ಭಾಷೆಯನ್ನು ಕೃಷಿಗೊಳಿಸುವ ಕೆಲಸವನ್ನು ಮಾಡುತ್ತಿದ್ದಾರೆ. ಅವರ ಈ ಸೇವೆಯನ್ನು ಗುರುತಿಸಿ ಅಲ್ಲಿನ ಜುವಾರಿ ನಗರ ಕನ್ನಡ ಸಂಘ ಮತ್ತು ಗೋವಾ ಕನ್ನಡ ಸಾಹಿತ್ಯ ಪರಿಷತ್ ಗಡಿನಾಡ ಘಟಕಗಳು ಕನ್ನಡ ರತ್ನ ಪ್ರಶಸ್ತಿ ನೀಡಿ ಗೌರವಿಸಿವೆ. ಕನ್ನಡ ಭಾಷೆ ಉಳಿಸುವ ಕಾಯಕದ ಜೊತೆಗೆ ಕನ್ನಡ ಪರ ಸಂಘಟನೆಗಳಿಗೆ ಸಹಾಯ ಸಹಕಾರ ನೀಡುವುದು ಹಾಗೂ ಇವರ ಭಾಷಾ ಪ್ರೇಮ, ಅಭಿಮಾನಕ್ಕೆ ಗೋವಾ ರಾಜ್ಯದ ರೋಟರಿ ಕ್ಲಬ್, ಲಯನ್ಸ್ ಕ್ಲಬ್ ಮತ್ತು ಇನ್ನಿತರ ಸಂಘ ಸಂಸ್ಥೆಗಳು ಇವರಿಗೆ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಯನ್ನು ಕೂಡಾ ನೀಡಿ ಗೌರವಿಸಿದ್ದಾರೆ. ಪ್ರಶಸ್ತಿ ಪುರಸ್ಕೃತ ಬಸನಗೌಡ ಅವರನ್ನು ಬಿಸಲದಿನ್ನಿ ಗ್ರಾಮಸ್ಥರು ಹಾಗೂ ಹುನಗುಂದ ತಾಲೂಕಿನ ಅನೇಕ ಕನ್ನಡಪರ ಸಂಘಟನೆಗಳು ಅಭಿನಂದಿಸಿವೆ

# ಶಿರೂರಿನಲ್ಲಿ ನಾಳೆ ದತ್ತಿ ಉಪನ್ಯಾಸ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟ:

ಕನ್ನಡ ಸಾಹಿತ್ಯ ಪರಿಷತ್ ಬಾಗಲಕೋಟೆ ಜಿಲ್ಲಾ, ತಾಲ್ಲೂಕು ಹಾಗೂ ಶಿರೂರ ವಲಯ ಘಟಕ ಮತ್ತು ಗ್ರಾಮೀಣ ಕಲೆ ಹಾಗೂ ಸಾಹಿತ್ಯ ವೇದಿಕೆ ಶಿರೂರ ಇವರ ಸಂಯುಕ್ತಾಶ್ರಯದಲ್ಲಿ ನ.29 ರಂದು ಶಿರೂರ ಪಟ್ಟಣದಲ್ಲಿ ದಿ.ಬಸವಲಿಂಗಪ್ಪ ಹಾಗೂ ದಿ.ಶಂಕ್ರಮ್ಮ ನಡುವಿನಮನಿ ದತ್ತಿ ಉಪನ್ಯಾಸ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಜರುಗಲಿದೆ. ಶನಿವಾರ ಮಧ್ಯಾಹ್ನ 3 ಗಂಟೆಗೆ ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಭಾಭವನದಲ್ಲಿ ನಡೆಯುವ ಕಾರ್ಯಕ್ರಮದ ಸಾನಿಧ್ಯವನ್ನು ಶಿವಯೋಗಾಶ್ರಮದ ಸಿದ್ಧಲಿಂಗ ಸ್ವಾಮೀಜಿ ಹಾಗೂ ಗುಳೇದಗುಡ್ಡ ಒಪ್ಪತ್ತೇಶ್ವರ ಸ್ವಾಮೀಜಿ ವಹಿಸುವರು. ತಹಶೀಲ್ದಾರ್ ವಾಸುದೇವ ಸ್ವಾಮಿ ಉದ್ಘಾಟಿಸುವರು.

ಅಕ್ಷರ ದಾಸೋಹ ಜಿಲ್ಲಾ ಅಧಿಕಾರಿ ಡಿ.ಎಂ.ಯಾವಗಲ್, ಎಂ.ಎಸ್.ನ್ಯಾಮಗೌಡ, ಮುತ್ತಣ್ಣ ಹಿಪ್ಪರಗಿ, ಶಿಲ್ಪಾವತಿ ಗುಲಗಂಜಿ, ಶೇಖಪ್ಪ ಮುಚಖಂಡಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿ ಚಂದ್ರಶೇಖರ ಕಾಳನ್ನವರ ಉಪನ್ಯಾಸ ನೀಡುವರು.

# ಗುಳಬಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಮೈಕ್ ಸೌಂಡ್ ಸಿಸ್ಟಮ್ ದೇಣಿಗೆ

ಮಲ್ಲಮ್ಮ ನುಡಿ ವಾರ್ತೆ

**ಗುಳಬಾಳ :** ಹುಣಸಗಿ ತಾಲ್ಲೂಕಿನ ಗುಳಬಾಳ ಗ್ರಾಮದ ನಿವಾಸಿಯಾದ ಶ್ರೀಮತಿ ಯಂಕಮ್ಮ ಬಮ್ಮನಳ್ಳಿ ಇವರು ಇದೆ ಶಾಲೆಯಲ್ಲಿ ಓದಿದ್ರು ಆದ ಕಾರಣ "ನಾನು ಕಲಿತ ಶಾಲೆ ನನ್ನ ಹೆಮ್ಮೆ" ಎಂದು ತಿಳಿದು ಶಾಲೆಯಲ್ಲಿ ನಡೆಯುವ ರಾಷ್ಟ್ರೀಯ ಕಾರ್ಯಕ್ರಮಗಳು ಇನ್ನಿತರೆ ಜಯಂತಿಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಅನುಕೂಲವಾಗುವಂತೆ ತಮ್ಮ ವೈಯಕ್ತಿಕ ಹಣದಲ್ಲಿ ಶಾಲೆಗೆ ದೇಣಿಗೆ ನೀಡಿರುವರು,

ಇತರಹ ಹುಣಸಗಿ ತಾಲೂಕಿನ ಎಲ್ಲಾ ಪದವೀಧರರಿಗೂ ಕೂಡಾ ತಮ್ಮ ಊರಿನ ಶಾಲೆಗೆ ದೇಣಿಗೆ ನೀಡಿ ಮಾದರಿಯಾಗಿ ಎಂದು ಶಿಕ್ಷಕರು ತಿಳಿಸಿದರು ಹಾಗೂ ಈ ಪ್ರಯತ್ನಕ್ಕೆ ನಮ್ಮ ಶಾಲೆಯ ಎಲ್ಲಾ ಶಿಕ್ಷಕರ ಪ್ರೇರಣೆ ಎಂದು ಪ್ರಧಾನ ಗುರು ಭೀಮನಗೌಡ ಬಿರಾದಾರ ಹೇಳಿದರು,

ಈ ಸಂದರ್ಭದಲ್ಲಿ ರಾಜ್ಯ ದೈಹಿಕ ಶಿಕ್ಷಕರ ಸಂಘದ ಉಪಾಧ್ಯಕ್ಷರು ದೈಹಿಕ ಶಿಕ್ಷಕರಾದ ಬಸನಗೌಡ ವಠಾರ,ಶಿಕ್ಷಕರಾದ ಪ್ರಭುಗೌಡ ಬಿರಾದಾರ,ಕಡ್ಲಬಾಳಪ್ಪ,ಹುಲಗಣ್ಣ ಹೊಸಮನಿ,ಯಂಕಮ್ಮಬಮ್ಮನಳ್ಳಿ,ಭಾಗ್ಯಶ್ರೀ ಕಕ್ಕೇರಿ,ಸರೋಜಾ ಅಂಬಿಗೇರ ಇನ್ನಿತರರು ಇದ್ದರು,




# 30 ರಂದು ಬೀದರ್‌ನಲ್ಲಿ ಸ್ವಾಭಿಮಾನಿ ಮರಾಠ ಸಮಾವೇಶ

**ಬೀದರ್ ಜಿಲ್ಲೆಯಲ್ಲಿ ಮರಾಠ ಸಮುದಾಯದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದರೂ ಕೂಡ ಇದುವರೆಗೂ ಯಾವುದೇ ನ್ಯಾಯುತ ಬೇಡಿಕೆ ಈಡೇರಿಲ್ಲ. ಮುಂದಿನ ಪೀಳಿಗೆ ಏಳಿಗೆ ದೃಷ್ಟಿಯಿಂದ ಈ ಸಮಾವೇಶ ನಡೆಸಲಾಗುತ್ತಿದೆ.**

**-ಡಿಗಂಬರರಾವ ಮಾನಕಾರಿ ಹಿರಿಯ ಮುಖಂಡರು ಮರಾಠ**

**ರಾಮರಾವ ವರವಟ್ಟಿಕರ್ ಹಿರಿಯ ಮುಖಂಡರು ಮರಾಠ ಸಮಾಜ ಭಾಲ್ಕಿ ಗಡಿ ಜಿಲ್ಲೆ ಬೀದರ್‌ನಲ್ಲಿ ಮರಾಠ ಸಮಾಜವನ್ನು ಸಂಘಟಿಸುವ ಕೆಲಸ ಆಗಬೇಕಿದೆ. ಹಿಂದುಆದ ಈ ಸಮಾಜವನ್ನು ಶೈಕ್ಷಣಿಕ, ಸಾಮಾಜಿಕ, ರಾಜಕೀಯವಾಗಿ ಶಕ್ತಿ ತುಂಬಬೇಕಿದೆ. ಈ ಹಿನ್ನೆಲೆಯಲ್ಲಿ ಸಮಾವೇಶ ನಡೆಯಲಿದೆ.**

**-ಕಿಶನರಾವ ಪಾಟೀಲ್ ಇಂಚೂರಕರ್**

**ಹಿರಿಯ ಮುಖಂಡರು ಮರಾಠ ಸಮಾಜ ಭಾಲ್ಕಿ**



ಮಲ್ಲಮ್ಮ ನುಡಿ ವಾರ್ತೆ

**ಭಾಲ್ಕಿ:** ಬೀದರ್ ನಗರದಲ್ಲಿ ಇದೇ ನ.30 ರಂದು ಸ್ವಾಭಿಮಾನಿ ಮರಾಠ ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಮೂಲೆ ಮೂಲೆಯಿಂದ ಸಾವಿರಾರೂ ಸಂಖ್ಯೆಯಲ್ಲಿ ಮರಾಠ ಸಮಾಜದ ಜನರು ಭಾಗವಹಿಸಲಿದ್ದಾರೆ ಎಂದು ಮರಾಠ ಸಮಾಜದ ಹಿರಿಯ ಮುಖಂಡರಾದ ರಾಮರಾವ ವರವಟ್ಟಿಕರ್, ಡಿಗಂಬರರಾವ ಮಾನಕಾರಿ, ಕಿಶನರಾವ ಪಾಟೀಲ್ ಇಂಚೂರಕರ್, ಜನಾರ್ಧನರಾವ ಬಿರಾದಾರ್, ಮೀನಾಕ್ಷಿ ಕಾಳೆ, ದತ್ತಾತ್ರಿ ಕಾಟಕರ್ ತಿಳಿಸಿದರು. ಪಟ್ಟಣದ ಎಪಿಎಂಸಿ ಮಾರುಕಟ್ಟೆ ಸಮೀಪದ ವಿಠಲರುಕ್ಮಿಣಿ ದೇಗುಲದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಬೀದರ್ ನಗರದ ಗಣೇಶ ಮೈದಾನದಲ್ಲಿ ಅಂದು ಬೆಳಿಗ್ಗೆ 11 ಗಂಟೆಗೆ ಐತಿಹಾಸಿಕ ಸಮಾವೇಶ ಜರುಗಲಿದೆ. ರಾಜ್ಯದಲ್ಲಿ ಮರಾಠ ಸಮಾಜ ತೀರಾ ಹಿಂದುಳಿದೆ. ರಾಜಕೀಯ, ಸಾಮಾಜಿಕ, ಧಾರ್ಮಿಕ ಮತ್ತು ಶೈಕ್ಷಣಿಕ ಕ್ಷೇತ್ರಗಳಲ್ಲಿ ಶಕ್ತಿ ತುಂಬುವ ಕೆಲಸ ಆಗಬೇಕಿದೆ.

**ಮರಾಠ ಸಮಾಜದ ಸಮಾವೇಶ ಯಾವುದೇ ಒಂದು ಸಮಾಜದ ವಿರುದ್ಧವಲ್ಲ, ಮರಾಠ ಸಮಾಜದ ಜನರ ಜಾಗೃತಿಗಾಗಿ ಈ ಸಮಾವೇಶ ಹಮ್ಮಿಕೊಳ್ಳಲಾಗುತ್ತಿದೆ.**

ಈ ನಿಟ್ಟಿನಲ್ಲಿ ಎಲ್ಲ ಮರಾಠ ಸಮಾಜದ ಬಾಂಧವರು ಸೇರಿ ಬೃಹತ್ ಸಮಾವೇಶ ನಡೆಸಲಾಗುತ್ತಿದೆ. ಸಮಾವೇಶದಲ್ಲಿ ರಾಜ್ಯದ ಕಾರ್ಮಿಕ ಸಚಿವ ಸಂತೋಷ ಲಾಡ್, ಮಾಜಿ ಸಚಿವ ಪಿ.ಜಿ.ಆರ್.ಸಿಂಧ್ಯ, ಮರಾಠ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಿಕ್ಷಣ ಸಂಸ್ಥೆಯ ಮುಖಂಡರು, ರಾಜಕೀಯ ಮುಖಂಡರು ಸೇರಿ ರಾಜ್ಯದ ವಿವಿಧ ಭಾಗದ ಮುಖಂಡರು ಭಾಗವಹಿಸಲಿದ್ದಾರೆ. ಜಿಲ್ಲೆಯ ಮರಾಠ ಸಮಾಜದ ಎಲ್ಲ ಮುಖಂಡರು, ವಿವಿಧ ಸಂಘ–ಸಂಸ್ಥೆಗಳ ಮುಖಂಡರು, ಮರಾಠ ಸಮುದಾಯದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮರಾಠ ಸಮಾವೇಶ ಐತಿಹಾಸಿಕವಾಗಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮರಾಠ ಸಮಾಜದ ಹಿರಿಯ ಮುಖಂಡರಾದ ಯಾದವರಾವ ಕನಸೆ, ಶಾಹು ಮಹಾರಾಜ ಪವಾರ್, ತುಕಾರಾಮ ಮೋರೆ, ರಮೇಶ ಪಾಟೀಲ್, ವೆಂಕಟರಾವ ಸೇರಿದಂತೆ

# ನ.29 ಶಿರೂರಿನಲ್ಲಿ

## ರಾಜ್ಯಮಟ್ಟದ ಟಗರಿನ ಕಾಳಗ

**ಮಲ್ಲಮ್ಮ ನುಡಿ ವಾರ್ತೆ,ಬಾಗಲಕೋಟೆ:** ತಾಲೂಕಿನ ಶಿರೂರ ಪಟ್ಟಣದಲ್ಲಿ ಸಿದ್ದೇಶ್ವರ ಜಾತ್ರೆ ಹಾಗೂ ಲಿಂ. ಸಿದ್ಧಲಿಂಗ ಸ್ವಾಮೀಜಿ 55 ನೇ ಪುಣ್ಯಸ್ಮರಣೆ ಅಂಗವಾಗಿ ರಾಜ್ಯಮಟ್ಟದ ಟಗರಿನ ಕಾಳಗ ಸ್ಪರ್ಧೆ ಆಯೋಜಿಸಲಾಗಿದೆ. ಸ್ಥಳೀಯ ಸಿದ್ರಾಮೇಶ್ವರ ಗೆಳೆಯರ ಬಳಗ ಹಮ್ಮಿಕೊಂಡಿರುವ ಸ್ಪರ್ಧೆ ಸಿದ್ದೇಶ್ವರ ಪ್ರೌಢಶಾಲಾ ಆವರಣದಲ್ಲಿ ಶನಿವಾರ ಸಾಯಂಕಾಲ 5 ಗಂಟೆಗೆ ನಡೆಯಲಿದೆ.

ಹಾಲು ಹಲ್ಲು, ಎರಡು, ನಾಲ್ಕು, ಆರು ಹಲ್ಲು ಹಾಗೂ ಓಪನ್ ಟಗರಿನ ಐದು ವಿಭಾಗದಲ್ಲಿ ಕಾಳಗ ನಡೆಯಲಿದ್ದು, ಎಲ್ಲ ವಿಭಾಗದಲ್ಲೂ ವಿಜೇತ ಟಗರುಗಳಿಗೆ ಪ್ರಥಮ ಬಹುಮಾನ ಬ್ಯಾಟರಿ ಚಾಲಿತ ಸ್ಕೂಟಿ, ದ್ವಿತೀಯ ಬಹುಮಾನ ಫ್ರಿಡ್ಜ, ತೃತೀಯ ಬಹುಮಾನ

ಕೂಲರ್ ಹಾಗೂ ಚತುರ್ಥ ಬಹುಮಾನ ಆಕರ್ಷಕ ಟ್ರೋಫಿ ನೀಡಲಾಗುತ್ತದೆ ಎಂದು ಗೆಳೆಯರ ಬಳಗದ ಪ್ರಕಟಣೆ ತಿಳಿಸಿದ್ದು, ಮಾಹಿತಿಗಾಗಿ 9606358100 ಮತ್ತು 9353824205 ಗೆ ಸಂಪರ್ಕಿಸಲು ಕೋರಲಾಗಿದೆ.

# ನಿಷ್ಠಾವಂತರಿಗೆ ಖಂಡ್ರೆ ಪರಿವಾರ ಮಣೆ

ಮಲ್ಲಮ್ಮ ನುಡಿ ವಾರ್ತೆ

**ಭಾಲ್ಕಿ:** ಜಿಲ್ಲೆಯ ಅಭಿವೃದ್ಧಿಯಲ್ಲಿ ಖಂಡ್ರೆ ಪರಿವಾರದ ಕೊಡುಗೆ ದೊಡ್ಡದಿದೆ. ನಿಷ್ಠಾವಂತರಿಗೆ ಈ ಪರಿವಾರ ಸದಾ ಗುರುತಿಸಿ ಗೌರವಿಸುವ ಕೆಲಸ ಮಾಡುತ್ತ ಬರುತ್ತಿದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಬುಧವಾರ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ನೂತನ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ ಅವರನ್ನು ಸನ್ಮಾನಿಸಿ, ಅವರು ಮಾತನಾಡಿದರು. ಹಣಮಂತರಾವ ಚವ್ಹಾಣ ಅವರು ಸುದೀರ್ಘ ನಾಲ್ಕು ದಶಕಗಳಿಂದ ರಾಜಕೀಯ ಕ್ಷೇತ್ರದ ಸೇವೆ ಜತೆಗೆ ಖಂಡ್ರೆ ಪರಿವಾರಕ್ಕೆ ನಿಷ್ಠರಾಗಿ ದುಡಿಯುತ್ತಿದ್ದಾರೆ. ಪಕ್ಷ ಮತ್ತು ಪರಿವಾರ ನಿಷ್ಠೆ ಗುರುತಿಸಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಹಣಮಂತರಾವ ಚವ್ಹಾಣ ಅವರನ್ನು ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿರುವುದು ಸಂತಸ ತರಿಸಿದೆ. ಚವ್ಹಾಣ ಅವರು ಅಧಿಕಾರದಲ್ಲಿ ಇರುವಷ್ಟು ದಿವಸ ಅರಣ್ಯ ಇಲಾಖೆಯಲ್ಲಿ ಒಳ್ಳೆಯ ಕಾರ್ಯ ಮಾಡಲಿ ಎಂದು ಹಾರೈಸಿದರು.



ಸನ್ಮಾನ ಸ್ವೀಕರಿಸಿದ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ ಮಾತನಾಡಿ, ಕಳೆದ ನಾಲ್ಕು ದಶಕಗಳಿಂದ ಕಾಂಗ್ರೆಸ್ ಪಕ್ಷ ಮತ್ತು ಖಂಡ್ರೆ ಪರಿವಾರಕ್ಕೆ ನಿಷ್ಠರಾಗಿ ದುಡಿಯುತ್ತ ಬಂದಿದ್ದೇನೆ. ಶತಾಯುಷಿ ಡಾ.ಭೀಮಣ್ಣ ಖಂಡ್ರೆ ಅವರ ಕಾಲಾವಧಿಯಲ್ಲಿ ರಾಜಕೀಯ ಕ್ಷೇತ್ರಕ್ಕೆ ಕಾಲಿಟ್ಟ ನಾನು ನಂತರ ದಿವಂಗತ ವಿಜಯಕುಮಾರ ಖಂಡ್ರೆ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರೊಂದಿಗೆ ಗುರುತಿಸಿ ಕೊಂಡು ಕಾಲಕಾಲಕ್ಕೆ ನೀಡಿದ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವ ಕೆಲಸ ಮಾಡುತ್ತ ಬರುತ್ತಿದ್ದೇನೆ ಎಂದರು. ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಕಾಶಿನಾಥ ಲದ್ದೆ, ಶಂಕರ ಗುಬ್ಬೆ ಸೇರಿದಂತೆ ಹಲವರು ಇದ್ದರು.

**ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ನನ್ನನ್ನು ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿದ್ದಾರೆ. ಅವರೊಂದಿಗೆ ಸೇರಿ ಅರಣ್ಯ ಇಲಾಖೆಯಲ್ಲಿ ಉತ್ತಮ ಕೆಲಸ ಮಾಡುವ ಪ್ರಯತ್ನ ಮಾಡುತ್ತೇನೆ.**

**- ಹಣಮಂತರಾವ ಚವ್ಹಾಣ**

**ಉಪಾಧ್ಯಕ್ಷರು ರಾಜ್ಯ ಅರಣ್ಯ ಅಭಿವೃದ್ಧಿ ನಿಗಮ ಬೆಂಗಳೂರು**

# ತಜ್ಞ ವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ



ಮಲ್ಲಮ್ಮ ನುಡಿ ವಾರ್ತೆ

**ಚಿಟಗುಪ್ಪ:** ಶಿಶು ಆರೋಗ್ಯ ಮತ್ತು ಮಹಿಳಾ ಮಕ್ಕಳ ಆಸ್ಪತ್ರೆ ಈ ಭಾಗದ ಜನರಿಗೆ ಒಳ್ಳೆಯ ಆಸ್ಪತ್ರೆ ಆಗಿದೆ ಎಂದು ಮಾಜಿ ಸಚಿವ ರಾಜಶೇಖರ್ ಪಾಟೀಲ್ ತಿಳಿಸಿದರು. ಪಟ್ಟಣದ ಹೊಸ ಬಸ್ ನಿಲ್ದಾಣದ ಹತ್ತಿರ ಇರುವ ಶಿಶು ಆರೋಗ್ಯ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಉದ್ಘಾಟಿಸಿ ಮಾತನಾಡಿದ ಅವರು, ತಾಲೂಕು ಕೇಂದ್ರದಲ್ಲಿ ಶಿಶು ಆರೋಗ್ಯ ಹಾಗೂ ಮಹಿಳೆಯ ಆರೋಗ್ಯ ಆಸ್ಪತ್ರೆಯನ್ನು ಡಾ. ಪ್ರವೀಣ್ ಮಂಗಲಗಿ ಮತ್ತು ಡಾ. ಬಿಂದು ಮಂಗಲಗಿರವರು ಆರಂಭಿಸಿರುವುದು ಅತ್ಯಂತ ಒಳ್ಳೆಯ ಕಾರ್ಯವಾಗಿದೆ ಎಂದರು. ಈ ದಂಪತಿಗಳು ಈ ಭಾಗದ ಬಡ ಜನರಿಗೆ ಒಳ್ಳೆಯ ಆರೋಗ್ಯ ಸೇವೆ ನೀಡಬೇಕೆಂದು ಪಾಟೀಲ್ ಶುಭ ಹಾರೈಸಿದರು. ವಿವಿಧ ತಜ್ಞ ವೈದ್ಯರಿಂದ 300 ಜನ ರೋಗಿಗಳಿಗೆ ಉಚಿತ ಆರೋಗ್ಯ ತಪಾಸಣೆ ಮಾಡಿದರು. ಈ ಸಂದರ್ಭದಲ್ಲಿ ಡಾ. ಅರುಣಕುಮಾರ ಶಿರಶೆಟ್ಟಿ, ಡಾ. ಮಲ್ಲಿಕಾರ್ಜುನ, ಡಾ. ವೀರೇಶ ಗೌರಶೆಟ್ಟಿ, ಡಾ. ವಿನಯಕುಮಾರ ಬಿಯಾನಿ, ಡಾ. ಸಚಿನ ವಿ. ಪಾಟೀಲ್, ಡಾ. ಪ್ರೊಮೋದ ಕುಂಬಾರ್, ಡಾ. ಅಂಬಿಕಾ ಸಿಂಧೆ, ಡಾ. ಸ್ನೇಹಾ ಮಂಗಲಗಿ, ಡಾ. ವೈಷ್ಣವಿ ಮಂಗಲಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪರಿಸರ ರಕ್ಷಣೆ ನಮ್ಮ ಹೊಣೆ: ಮುರಳೀಧರ

ಮಲ್ಲಮ್ಮ ನುಡಿ ವಾರ್ತೆ

**ಕಮಲನಗರ:** ಮೊರಾರ್ಜಿ ದೇಸಾಯಿ ವಸತಿ ಶಾಲೆ ಸಂತಪೂರನಲ್ಲಿ ಇಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಔರಾದ ವತಿಯಿಂದ ಶಾಲೆಯ ಅವರಣದಲ್ಲಿ ಸುಮಾರು 400 ಸಸಿಗಳನ್ನು ನೇಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಯೋಜನಾ ನಿರ್ದೇಶಕರಾದ ಮುರಳೀಧರ ಅವರು ಧರ್ಮಸ್ಥಳ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗಡೆ ಅವರ ಜನ್ಮ ದಿನ ನಿಮಿತ್ತ ಸಾಮಾಜಿಕ ಅರಣಿಕರಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಧರ್ಮಸ್ಥಳ ಮಂಜುನಾಥೇಶ್ವರ ಕೃಪೆ ಆರ್ಶಿವಾದದಿಂದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಬಿಸಿ ಟ್ರಸ್ಟ್ ವತಿಯಿಂದ ರಾಜ್ಯದಲ್ಲಿ ಅನೇಕ ಕಾರ್ಯಗಳು ಧರ್ಮಸ್ಥಳ ಸಂಸ್ಥೆ ಮಾಡುತ್ತಿದ್ದು ಸ್ವಸಹಾಯ ಸಂಘಗಳಿಂದ ಗ್ರಾಮಾಭಿವೃದ್ಧಿ, ಶೈಕ್ಷಣಿಕ, ಸಮಾಜಿಕ ಸೇವೆ ಸಂಸ್ಥೆ ಮಾಡುತ್ತಲಿದೆ ತಮ್ಮ ಶಾಲೆಯಲ್ಲಿ ಸುಂದರ ಆವರಣ ವಿದ್ದಕಾರಣ ಪರಿಸರ ದೃಷ್ಟಿಯಿಂದ ವಿವಿಧ ರೀತಿಯ ಸಸಿಗಳನ್ನು ನೆಡಲಾಗಿದೆ ಅದಕ್ಕೆ ತಾವು ರಕ್ಷಿಸಿ ಬೆಳೆಸಬೇಕು ಎಂದು ನುಡಿದರು.




ಅದೇ ರಿತಿ ಶಾಲೆಯಲ್ಲಿ ಸಂವಿಧಾನ ದಿನ ನಿಮಿತ್ಯ ಸಂವಿಧಾನ ಪೀಠಿಕೆ ಮಾಡಲಾಯಿತು ಸಂಪನ್ಮೂಲ ಶಿಕ್ಷಕರಾದ ಶಾಮಸುಂದರ ಖಾನಾಪುರಕರ ಅವರು ಸಂವಿಧಾನ ಬಗ್ಗೆ ಸವಿಸ್ತಾರವಾಗಿ ಉಪನ್ಯಾಸ ಮಂಡಿಸಿದರು. ಪ್ರಾಂಶುಪಾಲರಾದ ತುಕಾರಾಮ ಯಾತಪ್ಪಾ, ಅದೇ ರಿತಿ ಸಮಾಜಿಕ ಹೋರಾಟಗಾರ ಧನರಾಜ ಮುಸ್ತಾಪೂರ, ಪತ್ರಕರ್ತ ಅಂಬಾದಾಸ ನಳಗೆ ಮಾತನಾಡಿದರು. ಔರಾದ ತಾಲೂಕು ಕ್ಷೇತ್ರ ಯೊಜನಾಧಿಕಾರಿ ರಾಘವೇಂದ್ರ ಗೌಡ, ವಿದ್ಯಾರ್ಥಿ ಪ್ರಮುಖ ಅನೀಲ ಮೇತ್ರೆ, ಫಾಳೆಪ್ಪಾ ಶೇಂಬೆಳ್ಳಿ, ಕೃಷಿ ಮೇಲ್ವಿಚಾರಕ ಬಸವರಾಜ, ಹಾಗೂ ವಸತಿ ಶಾಲೆಯ ಶಿಕ್ಷಕರು ಮಕ್ಕಳು ಉಪಸ್ಥಿತರಿದ್ದರು.

# ತಜ್ಞವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಶಿಶು ಆರೋಗ್ಯ ಮತ್ತು ಮಹಿಳಾ ಮಕ್ಕಳ ಆಸ್ಪತ್ರೆ ಈ ಭಾಗದ ಜನರಿಗೆ ಒಳ್ಳೆಯ ಆಸ್ಪತ್ರೆ ಆಗಿದೆ ಎಂದು ಮಾಜಿ ಸಚಿವ ರಾಜಶೇಖರ್ ಪಾಟೀಲ್ ತಿಳಿಸಿದರು. ಪಟ್ಟಣದ ಹೊಸ ಬಸ್ ನಿಲ್ದಾಣದ ಹತ್ತಿರ ಇರುವ ಶಿಶು ಆರೋಗ್ಯ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಉದ್ಘಾಟಿಸಿ ಮಾತನಾಡಿದ ಅವರು, ತಾಲೂಕು ಕೇಂದ್ರದಲ್ಲಿ ಶಿಶು ಆರೋಗ್ಯ ಹಾಗೂ ಮಹಿಳೆಯ ಆರೋಗ್ಯ ಆಸ್ಪತ್ರೆಯನ್ನು ಡಾ. ಪ್ರವೀಣ್ ಮಂಗಲಗಿ ಮತ್ತು ಡಾ. ಬಿಂದು ಮಂಗಲಗಿ ರವರು ಆರಂಭಿಸಿರುವುದು ಅತ್ಯಂತ ಒಳ್ಳೆಯ ಕಾರ್ಯವಾಗಿದೆ ಎಂದರು. ಈ ದಂಪತಿಗಳು ಈ ಭಾಗದ ಬಡ ಜನರಿಗೆ ಒಳ್ಳೆಯ ಆರೋಗ್ಯ ಸೇವೆ ನೀಡಬೇಕೆಂದು ಪಾಟೀಲ್ ಶುಭ ಹಾರೈಸಿದರು. ವಿವಿಧ ತಜ್ಞ ವೈದ್ಯರಿಂದ 300 ಜನ ರೋಗಿಗಳಿಗೆ ಉಚಿತ ಆರೋಗ್ಯ ತಪಾಸಣೆ ಮಾಡಿದರು. ಈ ಸಂದರ್ಭದಲ್ಲಿ ಡಾ. ಅರುಣಕುಮಾರ ಶಿರಶೆಟ್ಟಿ, ಡಾ. ಮಲ್ಲಿಕಾರ್ಜುನ, ಡಾ. ವೀರೇಶ ಗೌರಶೆಟ್ಟಿ, ಡಾ. ವಿನಯಕುಮಾರ ಬಿಯಾನಿ, ಡಾ. ಸಚಿನ ವಿ. ಪಾಟೀಲ್, ಡಾ. ಪ್ರೊಮೋದ ಕುಂಬಾರ್, ಡಾ. ಅಂಬಿಕಾ ಸಿಂಧೆ, ಡಾ. ಸ್ನೇಹಾ ಮಂಗಲಗಿ, ಡಾ. ವೈಷ್ಣವಿ ಮಂಗಲಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಒಂದೇ ತಿಂಗಳಲ್ಲಿ ದೋರನಹಳ್ಳಿ ಸೇರಿ ಎರಡು ಗ್ರಾಪಂಗಳು ಮೇಲ್ದರ್ಜೆಗೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ತಮ್ಮ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ಎರಡು ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಒಂದೇ ತಿಂಗಳಲ್ಲಿ ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೆ ಏರಿಸುವ ಅತಿ ಮಹತ್ವದ ಕೆಲಸವನ್ನು ಶಾಸಕ ಚನ್ನಾರೆಡ್ಡಿ ಪಾಟೀಲ್ ಅವರು ಕೈಗೊಂಡಿದ್ದಾರೆ.

ಗುರುವಾರ ಬೆಂಗಳೂರಿನಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟದಲ್ಲಿ ವಡಗೇರಾ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರುವ ತಿರ್ಮಾನ ಕೈಗೊಳ್ಳಲಾಗಿದೆ.

**ಸಂತಸ, ನೆಮ್ಮದಿ ತಂದಿದೆ: ಶಾಸಕ ತುನ್ನೂರ.**

ನನ್ನ ಮತಕ್ಷೇತ್ರದ ಮತದಾರರ ಬೇಡಿಕೆಗೆ ಸ್ಪಂದಿಸಿ ಕೆಲಸ ಮಾಡಬೇಕಾದ ಹೊಣೆಗಾರಿಕೆ ನನ್ನದಾಗಿದ್ದು, ಈ ನಿಟ್ಟಿನಲ್ಲಿ ಒಂದೇ ತಿಂಗಳಲ್ಲಿ ಎರಡು ಗ್ರಾಪಂಗಳನ್ನು ಪಪಂಗಳಾಗಿ ಮೇಲ್ದರ್ಜೆಗೆ ಏರಿಸುವ ಮಾಡಿದ ಸಂತಸ ಮತ್ತು ನೆಮ್ಮದಿ ತಮಗಿದೆ. ಈ ವಿಷಯದಲ್ಲಿ ಸಿಎಂ ಸಿದ್ದರಾಮಯ್ಯ ಅವರ ಬದ್ದತೆಗೆ ಧನ್ಯವಾದಗಳು ಕ್ಷೇತ್ರದ ಜನರ ಪರವಾಗಿ ಹೇಳುವೆ.

ಚನ್ನಾರೆಡ್ಡಿ ಪಾಟೀಲ್ ತುನ್ನೂರ
ಶಾಸಕರು, ಯಾದಗಿರಿ ಮತಕ್ಷೇತ್ರ.

ಈ ವಿಷಯ ಸ್ವತಃ ಸಿಎಂ ಅವರೇ ಸಂಪುಟ ಸಭೆ ನಂತರ ತಮಗೆ ತಿಳಿಸಿದ್ದಾಗಿ ಶಾಸಕ ತುನ್ನೂರು ಹೇಳಿದ್ದಾರೆ.ಮತ ಕ್ಷೇತ್ರದ ದೋರನಹಳ್ಳಿ ದೊಡ್ಡ ಹೊಬಳಿ ಕೇಂದ್ರವಾಗಿದೆ ಮತ್ತು ವಡಗೇರಾ ತಾಲೂಕು ಕೇಂದ್ರ ಸ್ಥಾನವಾಗಿದೆ. ಹೀಗಾಗಿ ಪಟ್ಟಣ ಪಂಚಾಯಿತಿ ಮಾಡಬೇಕೆಂಬ ಬೇಡಿಕೆ ಬಹುದಿನಗಳಿಂದ ಆ ಎರಡು ಊರಿನ ಅನೇಕರದ್ದು ಆಗಿ-ತ್ತು. ಅದರಂತೆಯೇ ತಾವು ಕೂಡಾ ಬಹುವರ್ಷಗಳ ಬೇಡಿಕೆ ಈಡೆರೀಸುವ ನಿಟ್ಟನಲ್ಲಿ ಅಧಿಕಾರಿಗಳ ಸಹಾಯದಿಂದ ಬೇಕಾದ ದಾಖಲೆಗಳನ್ನು ಸಿದ್ದಪಡಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ನಿರಂತರ ಪ್ರಯತ್ನ ಮಾಡುತ್ತಲ್ಲೇ ಇದ್ದೆ. ಅದರ ಪರಿಣಾಮ ಮತ್ತು ಸಿಎಂ ಸಿದ್ದರಾಮಯ್ಯ ಅವರು ನನ್ ಮನವಿಗೆ ಸ್ಪಂಧಿಸಿ ಒಂದೇ ತಿಂಗಳಲ್ಲಿ ಸಂಪುಟದಲ್ಲಿ ತಿರ್ಮಾನ ತೆಗೆದುಕೊಂಡು ಮಾಡಿದ್ದಾರೆಂದು ಶಾಸಕರು ವಿವರಿಸಿದ್ದಾರೆ. ಕಳೆದ 2-3 ವಾರಗಳ ಹಿಂದೆ ದೋರನಹಳ್ಳಿ ಗ್ರಾಪಂ ಅನ್ನು ಪಪಂ ಯಾಗಿ ಮೇಲ್ದರ್ಜೆಗೆ ಏರಿಸಿದಾಗಲೇ ವಡಗೇರಾ ಕೂಡಾ ಆಗಬೇಕಿತ್ತು. ಆಗ ಕೆಲವೊಂದು ತಾಂತ್ರಿಕ ಕಾರಣಗಳಿಂದ ಸ್ವಲ್ಪ ಮುಂದೆ ಹೋಗಿತ್ತು. ಆದರೇ ಮಾಡಿಸಬೇಕೆಂಬ ತಿರ್ಮಾನ ಮಾಡಿದ್ದ ತಾವು ಅದಕ್ಕೆ ಇದ್ದ ಅಡ್ಡಿಗಳನ್ನು ಅಧಿಕಾರಿಗಳ ಸಹಾಯದಿಂದ ಸರಿಪಡಿಸಿ ಸತತ ಪ್ರಯತ್ನ ಮಾಡುವ ಮೂಲಕ ಈ ಕೆಲಸ ಕಾರ್ಯರೂಪಕ್ಕೆ ಬಂದಿದೆ ಎಂದು ಶಾಸಕರು ತಿಳಿಸಿದ್ದಾರೆ.

**ಕಾಂಗ್ರೆಸ್ ಪಕ್ಷದಿಂದ ವಿಜಯೋತ್ಸವ.**



ಯಾದಗಿರಿ ಮತಕ್ಷೇತ್ರದ ವಡಗೇರಾ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೆ ಏರಿಸಿದ ಸರ್ಕಾರದ ಕ್ರಮ ಹಾಗೂ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರ ಪ್ರಯತ್ನವನ್ನು ಕಾಂಗ್ರೆಸ್ ಪಕ್ಷದ ಪದಾಧಿಕಾರಿಗಳು, ಮುಖಂಡರು ಮತ್ತು ಕಾರ್ಯಕರ್ತರು ಗುರವಾರ ಸಂಜೆ ಇಲ್ಲಿನ ಸುಭಾಶ್ಚಂದ್ರ ಬೋಸ್ ವೃತ್ತದಲ್ಲಿ ವಿಜಯೋತ್ಸವ ಆಚರಿಸುವ ಸಂಭ್ರಮಿಸಿದರು. ಸಚಿವ ಸಂಪುಟದಲ್ಲಿ ಈ ಬಗ್ಗೆ ನಿರ್ಣಯ ತೆಗೆದುಕೊಂಡ ವಿಷಯ ಶಾಸಕ ಚನ್ನಾರೆಡ್ಡಿ ಪಾಟೀಲ್ ಅವರಿಂದ ಮಾಹಿತಿ ಸಿಗುತ್ತಲೇ ನೇತಾಜಿ ಸರ್ಕಲ್ ಬಳಿ ಜಮಾಗೊಂಡು ಪಟಾಕಿ ಸಿಡಿಸಿ ಸಂಭ್ರಮಿಸಿದರು.ಈ ವೇಳೆ ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಮರೆಪ್ಪ ಬಿಳ್ಹಾರ್, ಡಾ.ಫಾಳೆಪ್ಪ ಪೂಜಾರಿ, ಶರಣು ಪಡಶೆಟ್ಟಿ, ಮೈನೋದಿನ್ ಮಿರ್ಚಿ, ಮೈನೋದಿನ ದೇವದುರ್ಗಾ,ಭಾಷಮಿಯ ನಾಯಕೋಡಿ, ಶರಣು ಇಟಗಿ, ಮಲ್ಲು ಶಿವಪುರ, ಗುರುನಾಟೇಕರ್, ಶರಣು ಕುರಿ, ಯಂಕಪ್ಪ ರಾಠೋಡ್, ಬಸಣ್ಣ ಜಡಿ, ಬಸವರಾಜ ಚವ್ಹಾಣ, ಶರೀಪ್ ಇದ್ದರು.

# ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಪತ್ರ ರೋಟರಿ ಭವನಕ್ಕೆ ಸಿಎ ನಿವೇಶನ ಒದಗಿಸಿ



ಮಲ್ಲಮ್ಮ ನುಡಿ ವಾರ್ತೆ ಬೀದರ್: ನಗರದಲ್ಲಿ ರೋಟರಿ ಭವನ ನಿರ್ಮಾಣಕ್ಕೆ ಸಿಎ ನಿವೇಶನ ಒದಗಿಸಬೇಕು ಎಂದು ರೋಟರಿ ಭವನ ಕಟ್ಟಡ ಸಮಿತಿ ಪ್ರಮುಖರು ಆಗ್ರಹಿಸಿದ್ದಾರೆ.

ಸಮಿತಿ ಪ್ರಮುಖರು ನಗರದಲ್ಲಿ ಬುಧವಾರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಭೇಟಿ ಮಾಡಿ ಈ ಕುರಿತು ಮನವಿ ಪತ್ರ ಸಲ್ಲಿಸಿದರು.

ಅಂತರರಾಷ್ಟ್ರೀಯ ರೋಟರಿ ಸಂಸ್ಥೆ ಜಿಲ್ಲೆಯಲ್ಲಿ 50 ವರ್ಷಗಳಿಂದ ಸಮಾಜ ಸೇವಾ ಚಟುವಟಿಕೆಗಳಲ್ಲಿ ನಿರತವಾಗಿದೆ. ಆದರೆ, ಸಂಸ್ಥೆಗೆ ಈವರೆಗೂ ನಗರದಲ್ಲಿ ಸ್ವಂತ ಕಟ್ಟಡ ಇಲ್ಲ ಎಂದು ರೋಟರಿ ಭವನ ಕಟ್ಟಡ ಸಮಿತಿಯ ಅಧ್ಯಕ್ಷ ಬಸವರಾಜ ಧನ್ನೂರ ಅವರು ಸಚಿವರ ಗಮನ ಸೆಳೆದರು.

ಜಿಲ್ಲೆಯಲ್ಲಿ 10 ರೋಟರಿ ಕ್ಲಗಳು ಶಿಕ್ಷಣ, ಆರೋಗ್ಯ, ಪರಿಸರ, ನೈರ್ಮಲ್ಯ, ಮಹಿಳಾ ಸಬಲೀಕರಣ ಹಾಗೂ ಇತರ ಸಮುದಾಯ ಕಲ್ಯಾಣ ಕಾರ್ಯಗಳಿಗೆ ಕೊಡುಗೆ ನೀಡುತ್ತಾ ಬಂದಿವೆ. ಸದ್ಯ ಬೀದನ ಐ.ಎಂ.ಎ. ಹಾಲ್ ಬಾಡಿಗೆ ಪಡೆದು, ಚಟುವಟಿಕೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಸ್ವಂತ ಕಟ್ಟಡ ಹೊಂದಿದ್ದರೆ ಇನ್ನೂ ಹೆಚ್ಚಿನ ಸೇವಾ ಚಟುವಟಿಕೆ ಕೈಗೊಳ್ಳಲು ಅನುಕೂಲವಾಗಲಿದೆ ಎಂದು ತಿಳಿಸಿದರು.

ರೋಟರಿ ಕ್ಲಗಳ ಸದಸ್ಯರ ವೈಯಕ್ತಿಕ ದೇಣಿಗೆಯಿಂದ ರೊಟರಿ ಹಾಗೂ ಇತರ ಸಾಮಾಜಿಕ

ಚಟುವಟಿಕೆಗಳಿಗಾಗಿ ಸುಸಜ್ಜಿತ ಭವನ ನಿರ್ಮಾಣಕ್ಕೆ ಯೋಜಿಸಲಾಗಿದೆ. ಬೀದರ್ ನಗರಾಭಿವೃದ್ಧಿ

ಪ್ರಾಧಿಕಾರದ ಸಿಎ ನಿವೇಶನದ ನಿಗದಿತ ಶುಲ್ಕ ಪಾವತಿಗೂ ಸದಸ್ಯರು ಸಿದ್ಧರಿದ್ದಾರೆ ಎಂದು ಹೇಳಿದರು.

ಸಿಎ ಸೈಗಾಗಿ 2023 ರಲ್ಲೂ ಜಿಲ್ಲಾಡಳಿತ ಹಾಗೂ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಸಿಎ ನಿವೇಶನ ಮಂಜೂರಾತಿಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಸಿಎ ನಿವೇಶನ ಬೇಡಿಕೆಗೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದರು. ಈ ಕುರಿತು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಸಮಿತಿಯ ಪ್ರಮುಖರಾದ ಹಾವಶೆಟ್ಟಿ ಪಾಟೀಲ, ಸುಮೀತ್ ಸಿಂದೋಲ್ ಇದ್ದರು.

# ಜಿಇ ಏರೋಸ್ಪೇಸ್‌ನ ಪುಣೆ ಘಟಕದ 10ನೇ ವಾರ್ಷಿಕೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಜಿಇ ಏರೋಸ್ಪೇಸ್ ಸಂಸ್ಥೆಯು ತನ್ನ ಪುಣೆಯ ಉತ್ಪಾದನಾ ಘಟಕದ ಸಾಮರ್ಥ್ಯವನ್ನು ಹೆಚ್ಚಿಸಲು 14 ಮಿಲಿಯನ್ ಅಮೆರಿಕನ್ ಡಾಲರ್ (ಸುಮಾರು 117 ಕೋಟಿ) ಹೂಡಿಕೆ ಮಾಡುತ್ತಿರುವುದಾಗಿ ಘೋಷಿಸಿದೆ. ಈ ಘಟಕ ಯಶಸ್ವಿಯಾಗಿ 10 ವರ್ಷ ಪೂರೈಸುತ್ತಿದ್ದು, ಈ ಸಂದರ್ಭದಲ್ಲಿ ಈ ಮಹತ್ವದ ಘೋಷಣೆ ಮಾಡಲಾಗಿದೆ.

ಸಂಸ್ಥೆಯು ಕಳೆದ ವರ್ಷ 30 ಮಿಲಿಯನ್ ಡಾಲರ್ ಹೂಡಿಕೆಯನ್ನು ಘೋಷಿಸಿದ್ದು, ಇದೀಗ ಹೆಚ್ಚುವರಿ ಹೂಡಿಕೆ ಘೋಷಿಸಲಾಗಿದೆ. ಈ ಹೊಸ ಹೂಡಿಕೆಯಿಂದ ಉತ್ಪಾದನಾ ಪ್ರಕ್ರಿಯೆಗಳನ್ನು ಆಧುನಿಕಗೊಳಿಸಲಾಗುವುದು, ಸ್ವಯಂಚಾಲಿತ ವ್ಯವಸ್ಥೆಗಳನ್ನು (ಆಟೋಮೇಷನ್) ಹೆಚ್ಚಿಸಲಾಗುವುದು ಮತ್ತು ಅತ್ಯಾಧುನಿಕ ಎಂಜಿನ್ ಭಾಗಗಳ ತಯಾರಿಕೆಗೆ ಬೇಕಾದ ಸೌಲಭ್ಯಗಳನ್ನು ಬಲಪಡಿಸಲಾಗುವುದು.

ಈ ಕುರಿತು ಮಾತನಾಡಿರುವ ಜಿಇ ಏರೋಸ್ಪೇಸ್ ನ ಪುಣೆ ಘಟಕದ ವ್ಯವಸ್ಥಾಪಕ ನಿರ್ದೇಶಕರಾದ ವಿಶ್ವಜಿತ್ ಸಿಂಗ್* ಅವರು, "ಪುಣೆಯ ನಮ್ಮ ತಂಡವು ಅತ್ಯುತ್ತಮ ಸಾಮರ್ಥ್ಯವನ್ನು ಬೆಳೆಸಿಕೊಂಡಿದೆ. ದೇಶಾದ್ಯಂತ ಇರುವ ಪೂರೈಕೆದಾರರ ಜಾಲದ ಬೆಂಬಲದಿಂದ ನಾವು ಅತ್ಯಾಧುನಿಕ ವಾಣಿಜ್ಯ ವಿಮಾನ ಎಂಜಿನ್‌ಗಳ ಭಾಗಗಳನ್ನು ಸುರಕ್ಷತೆ ಮತ್ತು ಗುಣಮಟ್ಟದೊಂದಿಗೆ ತಯಾರಿಸುತ್ತಿದ್ದೇವೆ. ಈ ಹೂಡಿಕೆ 'ಮೇಕ್ ಇನ್ ಇಂಡಿಯಾ' ಯೋಜನೆ ಕಡೆಗಿನ ನಮ್ಮ ಬದ್ಧತೆಯನ್ನು ಮತ್ತು ಜಾಗತಿಕ ಏರೋಸ್ಪೇಸ್ ಉತ್ಪಾದನೆಯಲ್ಲಿ ಭಾರತದ ಪಾತ್ರವನ್ನು ಹೆಚ್ಚಿಸುವ ನಮ್ಮ ಇಚ್ಛೆಯನ್ನು ತೋರಿಸುತ್ತದೆ" ಎಂದು ಹೇಳಿದರು.ಘಟಕದ ಯಶಸ್ಸಿಗೆ *ಫ್ಲೈಟ್ ಡೆಕ್* ಎಂಬ ಜಿಇ ಏರೋಸ್ಪೇಸ್‌ನ ಸ್ವಾಮ್ಯದ ಲೀನ್ ಆಪರೇಟಿಂಗ್ ಮಾದರಿಯೇ ಮುಖ್ಯ ಕಾರಣವಾಗಿದೆ. ಇದು ಸುರಕ್ಷತೆ, ದಕ್ಷತೆ ಮತ್ತು ಗುಣಮಟ್ಟ ಒದಗಿಸುತ್ತದೆ. ಇದರಿಂದಲೇ ತ್ಯಾಜ್ಯ ಕಡಿಮೆಯಾಗಿದೆ, ಪ್ರಕ್ರಿಯೆಗಳ ದಕ್ಷತೆ ಹೆಚ್ಚಿದೆ, ಉತ್ಪಾದನೆ ಜಾಸ್ತಿಯಾಗಿದೆ ಮತ್ತು ಕಾರ್ಖಾನೆಯ ಸುರಕ್ಷತೆ ಸುಧಾರಿಸಿದೆ. ಹೊಸ ಉತ್ಪಾದನಾ ಲೈನ್ ನಲ್ಲಿ ಒಂದು ಮುಖ್ಯ ಭಾಗ ತಯರಿಕಾ ಕೆಲಸಗಳು ನಡೆಯುತ್ತಿದ್ದು, ಅಲ್ಲಿ ಕೂಡ ಕಡಿಮೆ ಸಮಯದಲ್ಲಿ, ಹೆಚ್ಚು ಉತ್ಪಾದಕತೆ ಸಾಧಿಸಲಾಗಿದೆ.

# ರೈತರ ಸಮಸ್ಯೆಗಳ ಪರಿಹಾರಕ್ಕೆ: ಬಿಜೆಪಿಯಿಂದ ರಾಜ್ಯಾದ್ಯಂತ ಹೋರಾಟ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ರೈತರ ಸಮಸ್ಯೆಗಳ ಪರಿಹಾರಕ್ಕೆ ಒತ್ತಾಯಿಸಿ ರಾಜ್ಯಾದ್ಯಂತ ಹೋರಾಟ ಮಾಡಲು ಬಿಜೆಪಿ ನಿರ್ಧರಿಸಿದ್ದು, ಅದರಂತೆ ಜಿಲ್ಲೆಯಾದ್ಯಂತ ಎಲ್ಲಾ ತಾಲೂಕಗಳಲ್ಲಿ ನಾಳೆಯಿಂದ ಹೋರಾಟ ಹಮ್ಮಿಕೊಳ್ಳಲಾಗುವುದೆಂದು ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ. ಕುರ್ಚಿ ಕಚ್ಚಾಟದಲ್ಲಿ ಸಿಎಂ, ಡಿಸಿಎಂ ಸಚಿವರು ತಲ್ಲೀನಾರಾಗಿದ್ದಾರೆ. ಅತಿವೃಷ್ಟಿಯಿಂದ ರೈತರು ತತ್ತರಿಸಿ ಹೋಗಿದ್ದಾರೆ. ರೈತರಿಗೆ ಪರಿಹಾರ ನೀಡದೇ ಸರ್ಕಾರ ಟೈಂ ಪಾಸ್ ಮಾಡುತ್ತಿದೆ ಎಂದು ಆರೋಪಿಸಿದರು.

ಜಿಲ್ಲೆಯಲ್ಲಿ ಹತ್ತಿ, ಜೋಳ, ಭತ್ತ ತೊಗರಿ ಖರೀದಿ ಕೇಂದ್ರಗಳನ್ನು ಆರಂಭಿಸದೇ ವಿಳಂಬ ಧೋರಣೆಯನ್ನು ಸರ್ಕಾರ ಅನುಸರಿಸುತ್ತಿದೆ.

ಇದರಿಂದ ರೈತರು ನಷ್ಟ ಅನುಭವಿಸುವಂತಾಗಿದೆ. ತಕ್ಷಣ ಖರೀದಿ ಕೇಂದ್ರಗಳನ್ನು ಸರ್ಕಾರ ಆರಂಭಿಸಬೇಕೆಂದು ಒತ್ತಾಯಿಸಿದರು.

ಜಿಲ್ಲೆಯ ರೈತರ ಜೀವನಾಡಿ ತುಂಗಭದ್ರ ಡ್ಯಾಂನ ಕ್ರಷ್ಟ್ ಗೇಟ್ ಅಳವಡಿಕೆಯಲ್ಲಿಯೂ ತೀವ್ರ ವಿಳಂಬವಾಗುತ್ತಿದೆ. ಡ್ಯಾಂನಲ್ಲಿ ನೀರು ಇದ್ದರೂ ರೈತರ ಎರಡನೇ ಬೆಳೆಗೆ ನೀರು ಬಿಡುವುದಿಲ್ಲವೆಂದು ಸರ್ಕಾರ ಘೋಷಣೆ ಮಾಡುವ ಮೂಲಕ ಈ ಭಾಗದ ರೈತರಿಗೆ ಅನ್ಯಾಯ ಮಾಡಿದೆ ಎಂದು ದೂರಿದರು. ರೈತರ ಎರಡನೇ ಬೆಳೆಗೆ ನೀರು ಬೀಡಬೇಕು ಇಲ್ಲದಿದ್ದರೆ ರೈತರಿಗೆ 1 ಎಕರೆಗೆ 25 ಸಾ.ರೂ. ಪರಿಹಾರ ನೀಡಬೇಕೆಂದು ಒತ್ತಾಯಿಸಿದರು. ರೈತರ ಈ ಎಲ್ಲಾ ಬೇಡಿಕೆಗಳನ್ನು ಮುಂದಿಟ್ಟು ನಾಳೆಯಿಂದ ಜಿಲ್ಲೆಯಲ್ಲಿ ಎಲ್ಲಾ ತಾಲೂಕ ಮಟ್ಟದಲ್ಲಿ ಹೋರಾಟ ನಡೆಸಲಾಗುವುದೆಂದರು.

ರೈತರ ಸಮಸ್ಯೆಗಳ ಬಗ್ಗೆ ಸದನದಲ್ಲಿ ಬಿಜೆಪಿ ಶಾಸಕರು ಧ್ವನಿ ಎತ್ತುವ ಮೂಲಕ ಹೋರಾಟ ಮಾಡಲಿದ್ದಾರೆಂದರು.

ಮಾಜಿ ಸಂಸದ ಬಿ.ವಿ.ನಾಯಕ ಮಾತನಾಡಿ, ಕಾಂಗ್ರೆಸ್ ಸರ್ಕಾರದಲ್ಲಿ ಅಧಿಕಾರ ಮತ್ತು ಸ್ವಾರ್ಥಕ್ಕಾಗಿ ಕಚ್ಚಾಟ ನಡೆಯುತ್ತಿದ್ದು, ಈ ಕಚ್ಚಾಟದಲ್ಲಿ ಸರ್ಕಾರ ಮತ್ತು ಸಿಎಂ, ಡಿಸಿಎಂ, ಸಚಿವರು ರೈತರನ್ನು ಮರೆತ್ತಿದ್ದಾರೆ.

ತುಂಗಭದ್ರ ಜಲಾಶಯದ ರೈತರ ಎರಡನೇ ಬೆಳೆಗೆ ನೀರು ನೀಡಲು ಸಾಧ್ಯವಿದ್ದರೂ ಗೇಟ್‌ಗಳ ಅಳವಡಿಕೆ ನೆಪ ಹೇಳಿ ರೈತರ ಎರಡನೇ ಬೆಳೆಗೆ ನೀರು ನೀಡದೇ ಅನ್ಯಾಯ ಮಾಡುತ್ತಿದ್ದಾರೆಂದು ಆರೋಪಿಸಿ ಸರ್ಕಾರ ಎರಡನೇ ಬೆಳೆಗೆ ನೀರು ಬಿಡಬೇಕೆಂದು ಒತ್ತಾಯಿಸಿದರು. ಮಳೆ ಅತಿವೃಷ್ಟಿಯಿಂದ ರೈತರ ನಷ್ಟ ಅನುಭವಿಸಿದ್ದಾರೆ.

ಅವರಿಗೆ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಬಸನಗೌಡ ಬ್ಯಾಗವಾಟ್, ಶರಣಪ್ಪಗೌಡ ಜಾಡಲದಿನ್ನಿ, ರಾಘವೇಂದ್ರ ಉಟ್ಕೂರು, ಸಿದ್ದನಗೌಡ ನೆಲಹಾಳ, ಸಂತೋಷ ಉಪಸ್ಥಿತರಿದ್ದರು.

## ನಮ್ಮ ಕರ್ನಾಟಕ ಸೇನೆ ಕಚೇರಿ ಉದ್ಘಾಟನೆ: ಸಚಿವ ಈಶ್ವರ ಖಂಡ್ರೆ ಶ್ಲಾಘನೆ

# ಸಂಘಟನೆಗಳಿಂದ ಕನ್ನಡ ನಾಡು ನುಡಿ ಸೇವೆ




ಮಲ್ಲಮ್ಮ ನುಡಿ ವಾರ್ತೆ

ಬೀದರ್: ಕನ್ನಡ ಪರ ಸಂಘಟನೆಗಳು ಕನ್ನಡ ನಾಡು, ನುಡಿಗೆ ಸೇವೆ ಸಲ್ಲಿಸುತ್ತಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಶ್ಲಾಘಿಸಿದರು.

ನಗರದ ಮೋಹನ್ ಮಾರ್ಕೆಟ್ ಸಮೀಪದ ಸಿಂಧೆ ಕಾಂಪ್ಲೆನಲ್ಲಿ ನಮ್ಮ ಕರ್ನಾಟಕ ಸೇನೆ ಜಿಲ್ಲಾ ಘಟಕದ ಕಚೇರಿಯನ್ನು ಬುಧವಾರ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡದ ನೆಲ, ಜಲ ಸಂರಕ್ಷಣೆಗೆ ಹೋರಾಟ ನಡೆಸಿವೆ. ಅನ್ಯಭಾಷ್ಯಗಳ ದಬ್ಬಾಳಿಕೆ ವಿರುದ್ಧವೂ ಧ್ವನಿ ಎತ್ತಿವೆ ಎಂದು ತಿಳಿಸಿದರು.

ಕನ್ನಡ ಭಾಷೆ ಸದೃಢವಾಗಿರುವಲ್ಲಿ, ಆರೋಗ್ಯಕರ ಪರಿಸರದಲ್ಲಿ ಉಸಿರಾಡುವಲ್ಲಿ ಕನ್ನಡಾಭಿಮಾನಿ ಯುವಕರ ಕೊಡುಗೆ ಪ್ರಮುಖವಾಗಿದೆ. ನಮ್ಮ ಕರ್ನಾಟಕ ಸೇನೆ ಕನ್ನಡ ನಾಡು ಹಾಗೂ ನುಡಿಯ ಹಿತ-ಕ್ಕೆ ಪೂರಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದೆ ಎಂದು ಹೇಳಿದರು.

ಸೇನೆ ರಾಜ್ಯ ಅಧ್ಯಕ್ಷ ಬಸವರಾಜ ಪಡಕೋಟೆ ಮಾತನಾಡಿ, ಸಂಘಟನೆಯ ಬೀದರ್ ಜಿಲ್ಲಾ ಘಟಕ ಕನ್ನಡಪರ ಹೋರಾಟಗಳಲ್ಲಿ ಮುಂಚೂಣಿಯಲ್ಲಿದೆ. ಜಿಲ್ಲಾ ಘಟಕದ ಕಾರ್ಯಗಳಿಗೆ ರಾಜ್ಯ ಘಟಕದ ಬೆಂಬಲ ಸದಾ ಇರಲಿದೆ ಎಂದು ತಿಳಿಸಿದರು.

ಸಾನಿಧ್ಯ ವಹಿಸಿದ್ದ ಹಲಬರ್ಗಾ ಮಠದ ಹಾವಗಿಲಿಂಗೇಶ್ವರ ಶಿವಾಚಾರ್ಯ ಮಾತನಾಡಿ, ಯುವಕರು ದುಶ್ಚಟಗಳ ದಾಸರಾಗಿ ಜೀವನ ಹಾಳು ಮಾಡಿಕೊಳ್ಳಬಾರದು. ನಾಡು, ನುಡಿಯ ಅಭಿಮಾನ ಬೆಳೆಸಿಕೊಳ್ಳಬೇಕು. ಸಾಮಾಜಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ಸೇನೆ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ಮಾತನಾಡಿ, ಸೇನೆ ಗಡಿ ಜಿಲ್ಲೆಯನ್ನು ಕನ್ನಡಮಯಗೊಳಿಸಲು ನಿರಂತರ ಶ್ರಮಿಸುತ್ತಿದೆ. ಬರುವ ದಿನಗಳಲ್ಲಿ ಗಡಿಯಲ್ಲಿ ಕನ್ನಡ ಸಮೃದ್ಧವಾಗಿ ಕಟ್ಟಲು ಹಾಗೂ ಅನ್ಯಾಯದ ವಿರುದ್ಧ ಹೋರಾಡಲು ಸಿದ್ಧವಿದೆ ಎಂದು ತಿಳಿಸಿದರು.

ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಭೀಮಣ್ಣ ಶೇಖಾಪೂರ, ರಾಜ್ಯ ಯುವ ಘಟಕದ ಅಧ್ಯಕ್ಷ ರಘು ಪಡಕೋಟೆ, ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಗಾಂಧಿಗಂಜ್ ಸಹಕಾರ ಬ್ಯಾಂಕ್ ಅಧ್ಯಕ್ಷ ವಿಜಯಕುಮಾರ ಪಾಟೀಲ ಗಾದಗಿ, ಪ್ರಮುಖರಾದ ವಿವೇಕ ವಾಲಿ, ಈಶ್ವರ ಸಿಂಗ್ ಠಾ-ಕೂರ್, ಸಂತೋಷ್ ಪಾಟೀಲ, ಮಹೇಶ್ವರ ಸ್ವಾಮಿ, ಸಿದ್ದು ಮಣಗೆ, ವಿಶ್ವನಾಥ ದಿಮ್ಮೆ, ಅರುಣಕುಮಾರ ಪಾಟೀಲ, ವಿಕ್ರಮ ಮುದಾಳೆ, ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕದ ಪದಾಧಿಕಾರಿಗಳಾದ ರಮೇಶ ಚಿದ್ರಿ, ರಾಜಕುಮಾರ ಪಾಟೀಲ, ಗಿರೀಶ್ ಬಿರಾದಾರ, ಅನಿಲ ರಾಜಗೀರಾ, ಸಂತೋಷ ಪಾಟೀಲ, ದತ್ತಾತ್ರಿ ಅಲಂಕೇರೆ, ಉದಯಕುಮಾರ ಅಷ್ಟೂರೆ, ರಾಮಶೆಟ್ಟಿ ಹುಣಜೆ, ಲೋಕೇಶ ಪಾಟೀಲ, ಹರ್ಷ ಬಿರಾದಾರ,

ರಾಜಕುಮಾರ ಸ್ವಾಮಿ, ಬಸವರಾಜ ಕಾರಬಾರಿ, ಬಾಲಾಜಿ ದಾಮಾ, ಕಾಶಿನಾಥ ಚಳಕಾಪುರೆ, ಸಾಯಿಕಿರಣ ರವಿ ಪಾಟೀಲ, ರಾಜು ತಳಘಟ, ಮಂಜು ಸ್ವಾಮಿ, ಮಹೇಶ ರಾಚೋಟೆ, ರಾಜು ಕುಂಬಾರ, ಪ್ರಶಾಂತ ಹಣಮಶೆಟ್ಟಿ ಮತ್ತಿತರರು ಇದ್ದರು.

ಸೇನೆಯ ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ ಅನಿಲ್ ರಾಜ-ಗೀರಾ ನಿರೂಪಿಸಿದರು.

# ಪ.ಪಂ.ದರ್ಜೆಗೇರಿದ: ಸಚಿವ ಈಶ್ವರ ಖಂಡ್ರೆ ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಬೀದರ್ ಜಿಲ್ಲೆಯ ಮೂರು ಗ್ರಾಮ ಪಂಚಾಯ್ತಿಗಳನ್ನು ಪಟ್ಟಣ ಪಂಚಾಯ್ತಿಯಾಗಿ ಮೇಲ್ದರ್ಜೆಗೇರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆ ಸಮ್ಮತಿಸಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಸವಕಲ್ಯಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹುಲಸೂರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಮಠಾಣ ಮತ್ತು ಮನ್ನಾ ಎ ಖೇಳಿಯನ್ನು ಗ್ರಾಮ ಪಂಚಾಯ್ತಿಯಿಂದ ಪಟ್ಟಣ ಪಂಚಾಯ್ತಿಯಾಗಿ ಪರಿವರ್ತಿಸಲು ಇಂದು ಸಂಪುಟ ಸಭೆ ತನ್ನ ಸರ್ವಾನುಮತದ ಅಂಗೀಕಾರ ನೀಡಿದೆ.

ಇದಕ್ಕಾಗಿ ಮುಖ್ಯಮಂತ್ರಿಯವರಿಗೆ ಮತ್ತು ಸಂಪುಟದ ಎಲ್ಲ ಸಹೋದ್ಯೋಗಿಗಳಿಗೆ ಧನ್ಯವಾದ ಅರ್ಪಿಸಿರುವ ಅವರು, ಮೂರೂ ಪಟ್ಟಣದ ಜನತೆಗೆ ಅಭಿನಂದನೆ ಸಲ್ಲಿಸಿದ್ದಾರೆ.ಈ ನಿರ್ಣಯದಿಂದಾಗಿ ಜಿಲ್ಲೆಯ ಈ ಮೂರೂ ಸ್ಥಳಗಳ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಯಾವುದೇ ಭೇದವಿಲ್ಲದೆ ನಿಷ್ಪಕ್ಷಪಾತವಾಗಿ ಬೀದರ್ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ತಾವು ಬದ್ಧರಾಗಿದ್ದು, ಈ ನಿಟ್ಟಿನಲ್ಲಿ ಶ್ರಮಿಸುತ್ತಿರುವುದಾಗಿಯೂ ಈಶ್ವರ ಖಂಡ್ರೆ ತಿಳಿಸಿದ್ದಾರೆ.

# ಡಾಬಾ ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮ ಮದ್ಯ ಮಾರಾಟ: ಆರೋಪ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲ್ಲೂಕಿನ ಹಳ್ಳಿ ಹಳ್ಳಿಗಳಲ್ಲಿ ಎಗ್ಗಿಲ್ಲದೇ ಮದ್ಯವನ್ನು ಅಕ್ರಮವಾಗಿ ಮಾರಾಟ ಮಾಡಲಾಗುತ್ತಿದ್ದು, ಅಬಕಾರಿ ಇಲಾಖೆಯ ಅಧಿಕಾರಿಗಳು ಕಣ್ಣಿದ್ದು ಕುರುಡರಂತೆ ವರ್ತಿಸುತ್ತಿದ್ದಾರೆ ಎಂದು ಸಾರ್ವಜನಿಕರು ಮಾತಾಡಿಕೊಳ್ಳುತ್ತಿದ್ದಾರೆ. ತಾಲೂಕಿನ ಭದ್ರಾಪುರ್, ನಿರ್ಣಾ, ಬನ್ನಳ್ಳಿ, ಮುಸ್ತರಿ, ತಾಳಮಡಗಿ ಕೋಡಂಬಲ್, ವಳಖಿಂಡಿ, ಬೆಳಕೇರಾ ಸೇರಿದಂತೆ ಸುತ್ತಮುತ್ತಲಿನ ಡಾಬಾಗಳಲ್ಲಿ ರಾಜಾರೋಷವಾಗಿ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದಾರೆ. ಮದ್ಯ ಮಾರಾಟ ಮಳಿಗೆಯವರಿಗೆ ಮದ್ಯ ಮಾರಾಟಕ್ಕಷ್ಟೇ ಅನುಮತಿ ಇದೆ. ಆದರೆ, ಜನರಿಗೆ ಆಸನಗಳ ವ್ಯವಸ್ಥೆ ಮಾಡಿ ಮದ್ಯ ಸೇವನೆಗೆ ಅವಕಾಶ ಕಲ್ಪಿಸುತ್ತಿದ್ದಾರೆ. ಇದು ಕಾನೂನು ಬಾಹಿರ ಕೃತ್ಯ. ಅವರ ವಿರುದ್ಧವೂ ಕ್ರಮ ಜರುಗಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)